ಸಂಪುಟ: 05 ಸಂಚಿಕೆ: 83 ಪುಟಗಳು: 08 ಶುಕ್ರವಾರ 06 ಜೂನ್ 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

**ಮುಂಜಾನೆ ಮಾತು**

ಜೀವನ ಎಂಬುದು ಕಠಿಣ ಸತ್ಯ, ಅದನ್ನು ಎದುರಿಸಿ. ನಿಮ್ಮ ಮಾರ್ಗದಲ್ಲಿ ಮುಂದುವರೆಯಿರಿ. ಅದು ಅಭೇದ್ಯವಾಗಿರಬಹುದು. ಆದರೆ ಆತ್ಮ ಅದಕ್ಕಿಂತ ಬಲಯುತವಾದುದು.

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ರಾಜ್ಯದಲ್ಲಿ ಕೋವಿಡ್‌ನಿಂದ ಮೃತಪಟ್ಟವರ ಸಂಖ್ಯೆ 7ಕ್ಕೆ ಏರಿಕೆ

• ಉದಯವಾಹಿನಿ, ಬೆಂಗಳೂರು

ದಾವಣಗೆರೆಯಲ್ಲಿ ಮೇ 31ರಂದು ಮೃತಪಟ್ಟಿದ್ದ 65 ವರ್ಷದ ವ್ಯಕ್ತಿಯೊಬ್ಬರು ಕೊರೋನಾ ಸೋಂಕಿತರಾಗಿದ್ದರು ಎನ್ನುವುದು ಪ್ರಯೋಗಾಲಯದ ಪರೀಕ್ಷೆಯಿಂದ ದೃಢಪಟ್ಟಿದೆ. ಅವರು ಅಧಿಕ ರಕ್ತದೊತ್ತಡ, ಮಧುಮೇಹ ಸಮಸ್ಯೆ ಎದುರಿಸುತ್ತಿದ್ದರು. ಅನಾರೋಗ್ಯದ ಕಾರಣ ಮೇ 24ರಂದು ಸರ್ಕಾರಿ ಆಸ್ಪತ್ರೆಗೆ ದಾಖಲಾಗಿದ್ದರು. ಜ್ವರ, ಉಸಿರಾಟದ ಸಮಸ್ಯೆ ಕಾಣಿಸಿಕೊಂಡಿದ್ದರಿಂದ ಕೋವಿಡ್ ಪರೀಕ್ಷೆಗೆ ಗಂಟಲ ದ್ರವದ ಮಾದರಿಯನ್ನು ಸಂಗ್ರಹಿಸಲಾಗಿತ್ತು. ಹೃದಯಾಘಾತದಿಂದ ಅವರು ಮೃತಪಟ್ಟಿದ್ದು, ಅವರು ಕೊರೋನಾ ಸೋಂಕಿತರಾಗಿದ್ದರು ಎನ್ನುವುದು ಗುರುವಾರ ಬಂದ ಪರೀಕ್ಷಾ ವರದಿಯಿಂದ ಖಚಿತಪಟ್ಟಿದೆ. ಇದರಿಂದಾಗಿ ರಾಜ್ಯದಲ್ಲಿ ಈ ವರ್ಷ ಕೋವಿಡ್‌ನಿಂದ ಮೃತಪಟ್ಟವರ ಸಂಖ್ಯೆ ಏಳಕ್ಕೆ ಏರಿಕೆಯಾಗಿದೆ ಎಂದು ಆರೋಗ್ಯ ಇಲಾಖೆ ತಿಳಿಸಿದೆ. ರಾಜ್ಯದಲ್ಲಿ 24 ಗಂಟೆಗಳಲ್ಲಿ 664 ಗಂಟಲ ದ್ರವದ ಮಾದರಿಗಳನ್ನು ಪರೀಕ್ಷೆ ಮಾಡಲಾಗಿದ್ದು, 61 ಪ್ರಕರಣಗಳು ಹೊಸದಾಗಿ ದೃಢಪಟ್ಟಿವೆ. ಇದರಿಂದಾಗಿ ಈವರೆಗೆ ವರದಿಯಾದ ಒಟ್ಟು ಕೋವಿಡ್ ಪ್ರಕರಣಗಳ ಸಂಖ್ಯೆ 796ಕ್ಕೆ ಏರಿಕೆಯಾಗಿದೆ. ಸಕ್ರಿಯ ಪ್ರಕರಣಗಳ ಸಂಖ್ಯೆ 451ಕ್ಕೆ ತಲುಪಿದೆ. 446 ಮಂದಿ ಮನೆ ಆರೈಕೆಗೆ ಒಳಗಾದರೆ, ಐವರು ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದುಕೊಳ್ಳುತ್ತಿದ್ದಾರೆ.

## ಸಂಸ್ಕರಿಸಿದ ನೀರಿನ ಬಳಕೆ ಕಡ್ಡಾಯವಾಗಲಿ: ಪರಿಸರ ತಜ್ಞ

• ಉದಯವಾಹಿನಿ, ಬೆಂಗಳೂರು

ವಸತಿ ಸಮುಚ್ಚಯಗಳು, ಬೃಹತ್ ವಾಣಿಜ್ಯ ಕಟ್ಟಡಗಳಲ್ಲಿ ಸಂಸ್ಕರಿಸಿದ ತ್ಯಾಜ್ಯ ನೀರು ಬಳಕೆ ಮಾಡುವುದನ್ನು ಕಡ್ಡಾಯಗೊಳಿಸುವ ಕಾನೂನು ಜಾರಿಯಾಗಬೇಕು ಎಂದು ಪರಿಸರ ತಜ್ಞ ಯಲ್ಲಪ್ಪರೆಡ್ಡಿ ಅಭಿಪ್ರಾಯ ಪಟ್ಟರು. ಬೆಂಗಳೂರು ಜಲಮಂಡಳಿ ಎಂಜಿನಿಯರ್ ಸಂಘದಿಂದ ಆಯೋಜಿಸಿದ್ದ ವಿಶ್ವ ಪರಿಸರ ದಿನಾಚರಣೆಯಲ್ಲಿ ಪ್ಲಾಸ್ಟಿಕ್ ತ್ಯಾಜ್ಯ ಕೊನೆಗಾಣಿಸಿ ಅಭಿಯಾನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. 'ಸಂಸ್ಕರಿಸಿದ ತ್ಯಾಜ್ಯ ನೀರು ಬಳಕೆಯಿಂದ ಕಾವೇರಿ ನೀರಿನ ಅವಲಂಬನೆ ತಪ್ಪಲಿದೆ. ಜೊತೆಗೆ ಬೆಂಗಳೂರಿನ ರಾಜಕಾಲುವೆಗಳಲ್ಲಿ ಮಳೆ ನೀರು ಇಂಗಿಸಲು ಸೂಕ್ತ ವ್ಯವಸ್ಥೆ ಮಾಡಬೇಕು. ಇದರಿಂದ ಅಂತರ್ಜಲ ಮರುಪೂರಣಕ್ಕೆ ಅನುಕೂಲವಾಗಲಿದೆ' ಎಂದರು. ಬ್ರಿಗೇಡಿಯರ್ ಡಿ.ಎಂ. ಪೂರ್ವಿಮಠ್, ಜಲಮಂಡಳಿಯ ಆಡಳಿತಾಧಿಕಾರಿ ಮದನ್ ಮೋಹನ್, ಪ್ರಧಾನ ಎಂಜಿನಿಯರ್ ಬಿ. ಸುರೇಶ್, ಬೆಂಗಳೂರು ಜಲಮಂಡಳಿ ಎಂಜಿನಿಯರ್‌ಗಳ ಸಂಘದ ಅಧ್ಯಕ್ಷ ಬಿ.ಸಿ. ಗಂಗಾಧರ್, ಉಪಾಧ್ಯಕ್ಷ ರಮಾನಂದ, ಕಾರ್ಯದರ್ಶಿ ಎ. ರಾಜಶೇಖರ, ಖಜಾಂಚಿ ಎಸ್. ಚಂದ್ರಶೇಖರ್ ಉಪಸ್ಥಿತರಿದ್ದರು. **ಗಿಡ ನೆಟ್ಟರು:** ಬೆಂಗಳೂರು ವಿಶ್ವವಿದ್ಯಾಲಯದ ಬಯೋ ಪಾರ್ಕ್‌ನಲ್ಲಿ ಸ್ವಯಂ ಜಾಗೃತಿ ಸೇವಾ ಟ್ರಸ್ಟ್ ಸದಸ್ಯರು ನೂರಾರು ಗಿಡಗಳನ್ನು ನೆಟ್ಟರು. ಟ್ರಸ್ಟ್‌ನ ರಾಜ್ಯ ಘಟಕದ ಅಧ್ಯಕ್ಷ ಅಜಯ್ ಕುಮಾರ್, ಸಂತೋಷ್ ಹಿಂಬಾಳೆ. ಮಲ್ಲೇಶ್, ಶರಣ್ ಸಿ. ಪಾಟೀಲ್, ಮಂಜು, ವಿನಾಯಕ, ನಿತಿನ್, ಚರಣ್, ವೇದಾಂತ್, ಸೋಮಶೇಖರ, ಚೇತನ್, ಮೂರ್ತಿ, ಸುನಿಲ್ ಹಾಗೂ ತಂಡದ ಪ್ರಚಾರ ಸಮಿತಿ ಅಧ್ಯಕ್ಷ ಶ್ರೀಕಾಂತ್ ಕನ್ನಡಿಗ ಮತ್ತು ಪರಿಸರ ಕಾರ್ಯಕರ್ತ ರೇಣುಕಾ ಪ್ರಸಾದ್ ಭಾಗವಹಿಸಿದ್ದರು.

## ಸಿಎಂ, ಡಿಸಿಎಂ ನೇರ ಹೊಣೆ: ಚಲವಾದಿ ನಾರಾಯಣಸ್ವಾಮಿ

• ಉದಯವಾಹಿನಿ, ಬೆಂಗಳೂರು

ಕಾಲ್ತುಳಿತ ಪ್ರಕರಣಕ್ಕೆ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್ ನೇರ ಹೊಣೆ, ತಕ್ಷಣ ಇವರು ರಾಜೀನಾಮೆ ಕೊಡಬೇಕು ಎಂದು ಪರಿಷತ್ ವಿಪಕ್ಷ ನಾಯಕ ಚಲವಾದಿ ನಾರಾಯಣಸ್ವಾಮಿ ಆಗ್ರಹಿಸಿದ್ದಾರೆ. ವಿಧಾನಸೌಧದಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ನಿಮ್ಮ ತೆವಲಿಗಾಗಿ 11 ಅಮಾಯಕರು ಜೀವ ಕಳೆದುಕೊಂಡಿದ್ದಾರೆ. ಯಾರೇ ಸತ್ತರು ಹತ್ತು ಲಕ್ಷ ಬಿಸಾಕಿ ನಮಗೇನು ಗೊತ್ತಿಲ್ಲ ಅಂತಾ ಸುಮ್ಮನೆ ಇರೋದು. ಅದೇ ರೌಡಿ ಶೀಟರ್‌ಗೆ ಆದರೆ 25 ಲಕ್ಷ ರೂ. ಪರಿಹಾರ, ನಮ್ಮ ಆನೇ ಹೋಗಿ ತುಳಿದಿದ್ದಕ್ಕೆ ಕೇರಳದವರಿಗೆ 25 ಲಕ್ಷ ರೂ. ಕೊಟ್ಟಿದ್ದಾರೆ ಎಂದು ಚಲವಾದಿ ನಾರಾಯಣಸ್ವಾಮಿ ಆಕ್ರೋಶ ಹೊರಹಾಕಿದರು. ಸಿಎಂ, ಡಿಸಿಎಂ ಅವರಿಂದ ಇಡೀ ರಾಜ್ಯವೇ ಸೂತಕದಲ್ಲಿದೆ. ಜನರ ಉದ್ಧಾರಕ್ಕಾಗಿ ಸರ್ಕಾರ ಬಂದಿಲ್ಲ, ಸರ್ವನಾಶಕ್ಕೆ ಬಂದಿದೆ ಎಂದು ಸಿಟ್ಟು ಹೊರಹಾಕಿದರು. ನಾಲ್ಕೈದು ಜನರು ಸತ್ತ ನಂತರ ಸಿದ್ದರಾಮಯ್ಯ ಎಲ್ಲಿ ಹೋಗಿದ್ರು? ಜನಾರ್ದನ ಹೋಟೆಲ್‌ಗೆ ಬಾದಾಮಿ ಹಲ್ವಾ ಮತ್ತೆ ದೋಸೆ ತಿನ್ನೋಕೆ ಹೋಗಿದ್ದರು. ಒಂದು ಕ್ರಿಕೆಟ್ ತಂಡದಲ್ಲಿ 11 ಜನ ಇದ್ದಂತೆ, ಒಂದು ತಂಡದಷ್ಟು ಜನರನ್ನು ಬಲಿ ಕೊಟ್ಟಿದ್ದಾರೆ ಎಂದು ಕಿಡಿಕಾರಿದರು. ವಿಧಾನಸೌಧವನ್ನು ಇವರು ಡಬ್ಬಾ ಅಂಗಡಿ ಮಾಡಿ ಇಟ್ಟುಕೊಂಡಿದ್ದಾರೆ. ಅನೇಕರ ತಿಥಿಗಳು, ಜನ್ಮದಿನಾಚರಣೆಗಳು ಇಲ್ಲಿ ಆಗುತ್ತಿವೆ. ನಿಮ್ಮ ಬೇಜವಾಬ್ದಾರಿಯಿಂದ ದುರಂತ ಸಂಭವಿಸಿದೆ ಎಂದು ದೂರಿದರು

# ಸಿಎಂ ಅವರು ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ನಡೆಸಿದ ಸುದ್ದಿಗೋಷ್ಠಿ

• ಉದಯವಾಹಿನಿ, ಬೆಂಗಳೂರು

ಆರ್‌ಸಿಬಿ ಸಂಭ್ರಮಾಚರಣೆಯ ಸಂದರ್ಭದಲ್ಲಿ ನಡೆದ ಕಾಲ್ತುಳಿತ ಘಟನೆ ದು:ಖಕರವಾಗಿದ್ದು, ಮೃತಪಟ್ಟವರಿಗೆ ಸಂತಾಪ ಕೋರಲಾಯಿತು. ಇಂದು ಎಂದಿನಂತೆ ನಡೆದ ಸಚಿವ ಸಂಪುಟ ಸಭೆಯಲ್ಲಿ ಈ ವಿಷಯದ ಕುರಿತು ಗಂಭೀರ ಚರ್ಚೆ ನಡೆಸಲಾಗಿದೆ. ನಿನ್ನೆ ನಡೆದ ಅಹಿತಕರ ಘಟನೆ ಬಗ್ಗೆ ಚರ್ಚಿಸಿ ಕೆಲವು ತೀರ್ಮಾನಗಳನ್ನು ಕೈಗೊಳ್ಳಲಾಗಿದೆ.

ಹೈಕೋರ್ಟ್‌ನ ನಿವೃತ್ತ ನ್ಯಾಯಾಧೀಶರು ಜಸ್ಟೀಸ್ ಮೈಕೆಲ್ ಕುನ್ಹಾ ಅವರ ನೇತೃತ್ವದಲ್ಲಿ ಏಕಸದಸ್ಯ ಆಯೋಗವನ್ನು ರಚಿಸಲಾಗಿದೆ. ಆರ್‌ಸಿಬಿ ಸಂಸ್ಥೆ ಹಾಗೂ ಕಾರ್ಯಕ್ರಮ ಆಯೋಜಕರಾದ ಡಿಎನ್ ಎ ಹಾಗೂ ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ ಈ ಮೂರು ಸಂಸ್ಥೆಗಳ ಪ್ರತಿನಿಧಿಗಳ ವಿರುದ್ಧ ಕಾನೂನು ಕ್ರಮ ತೆಗೆದುಕೊಂಡು, ಬಂಧಿಸಲು ಸೂಚನೆ ನೀಡಲಾಗಿದೆ. ಇವರ ವಿರುದ್ಧ ಎಫ್‌ಐಆರ್ ದಾಖಲಾಗಿದೆ. ಕಬ್ಬನ್ ಪಾರ್ಕ್ ಪೊಲೀಸ್ ಸ್ಟೇಷನ್ ಪೊಲೀಸ್ ಇನ್ಸಪೆಕ್ಟರ್ ಸೇರಿದಂತೆ ಆ ಭಾಗದ ಎಸಿಪಿ, ಸೆಂಟ್ರಲ್ ಡಿಸಿಪಿ ಕ್ರೀಡಾಂಗಣದ ಉಸ್ತುವಾರಿ ವಹಿಸಿದ್ದ ಹೆಚ್ಚುವರಿ ಪೊಲೀಸ್ ಆಯುಕ್ತರು ಮತ್ತು ಬೆಂಗಳೂರು ನಗರದ ಪೊಲೀಸ್ ಕಮೀಷನರ್‌ರನ್ನು ತಕ್ಷಣದಿಂದ ಅಮಾನತ್ತುಗೊಳಿಸಲು ತೀರ್ಮಾನಿಸಲಾಗಿದೆ. ಈ



ದುರಂತಕ್ಕೆ ಸಂಬಂಧಪಟ್ಟ ಚರ್ಚೆಯ ನಂತರ ತೆಗೆದುಕೊಂಡ ತೀರ್ಮಾನಗಳಾಗಿವೆ. ಉಪಮುಖ್ಯಮಂತ್ರಿಗಳು, ಗೃಹ ಸಚಿವರು, ಸಚಿವರಾದ ಎಚ್.ಕೆ.ಪಾಟೀಲ್, ಸುಧಾಕರ್ ಮಹಾದೇವಪ್ಪ ಸೇರಿದಂತೆ ಸಿಬಿಐ ಅಧಿಕಾರಿಗಳು ಚರ್ಚೆಯಲ್ಲಿ ಭಾಗವಹಿಸಿದ್ದರು.

ಮೇಲ್ನೋಟಕ್ಕೆ ಈ ಅಧಿಕಾರಿಗಳ ಬೇಜವಾಬ್ದಾರಿತನ ಅಲಕ್ಷ್ಯ ಕಂಡುಬರುತ್ತಿದ್ದು, ಇವರುಗಳನ್ನು ಅಮಾನತ್ತುಗೊಳಿಸಲು ತೀರ್ಮಾನಿಸಲಾಗಿದೆ.

**ಮ್ಯಾಜಿಸ್ಟ್ರೇಟ್ ತನಿಖೆ ಪ್ರಾರಂಭ**

ನಾನು ಶಾಸಕರು, ಸಚಿವ, ಡಿಸಿಎಂ ಹಾಗೂ ಮುಖ್ಯಮಂತ್ರಿಯಾದ ನಂತರ ಇಂತಹ ಘಟನೆ ನಡೆದಿರಲಿಲ್ಲ. ಈ ಘಟನೆ ನಮ್ಮನ್ನು ಘಾಸಿಗೊಳಿಸಿದೆ. ದುರಂತದಲ್ಲಿ ಮೃತಪಟ್ಟವರ ಆತ್ಮಕ್ಕೆ ಶಾಂತಿ ಕೋರುತ್ತಾ, ಕುಟುಂಬದವರ ಜೊತೆ ಸರ್ಕಾರವಿದೆ.

ನಿನ್ನೆ ಆದೇಶ ನೀಡಿದಂತೆ ಮ್ಯಾಜಿಸ್ಟ್ರೇಟ್ ತನಿಖೆ ಪ್ರಾರಂಭವಾಗಿದೆ. ಈ ಮಹಾದುರಂತದ ಬಗ್ಗೆ ಕೆಲವು ಮಾಹಿತಿಗಳು ದೊರೆತ ನಂತರ, ಸಚಿವಸಂಪುಟ ಸಭೆಯಲ್ಲಿ ಚರ್ಚೆ ಮಾಡಲಾಗಿದೆ. ಮೂರು ಸಂಸ್ಥೆಗಳು ವಿರುದ್ಧದ ತನಿಖೆಯನ್ನು ಸಿಐಡಿಗೆ ವಹಿಸಲಾಗಿದೆ.

1. ಆರ್‌ಸಿಬಿ ಸಂಭ್ರಮಾಚರಣೆ ವೇಳೆ ನಡೆದ ಕಾಲ್ತುಳಿತ ಅವಘಡದಲ್ಲಿ 11 ಮಂದಿ ಅಭಿಮಾನಿಗಳು ಮೃತ್ಯು
2. ಸದ್ಯ ಕುಟುಂಬಸ್ಥರಿಗೆ ಮೃತದೇಹ ಹಸ್ತಾಂತರ ನಡೆಯುತ್ತಿದೆ
3. ಕ್ರಿಕೆಟ್ ಇಷ್ಟವಿಲ್ಲದಿದ್ದರೂ ಬಂದಿದ್ದ ಚಿನ್ಮಯಿ, ಕೆಲಸ ಹುಡುಕಲು, ಟಿಸಿ ಪಡೆಯಲು ಬಂದಿದ್ದ ಇಬ್ಬರು ದುರ್ಘಟನೆಯಲ್ಲಿ ಸಾವು...!

# ಸಿದ್ಧತೆಗಿಲ್ಲ ಭರಾಟೆ.. ಹೈಕೋರ್ಟ್ ತರಾಟೆ



**8 ಲಕ್ಷ ಜನ ಆಗಮಿಸಿದ್ದರು**

• ಉದಯವಾಹಿನಿ, ಬೆಂಗಳೂರು

ಸಿದ್ಧತೆ ಮಾಡಿಕೊಳ್ಳದೆ ಸರ್ಕಾರ ಕಾರ್ಯಾಕ್ರಮ ಆಯೋಜನೆಗೆ ರಾಜ್ಯ ಹೈಕೋರ್ಟ್ ತರಾಟೆಗೆ ತೆಗೆದುಕೊಂಡು ಹಲವು ಪ್ರಶ್ನೆಗಳನ್ನು ಕೇಳಿದೆ. ಘಟನೆ ತಡೆಗೆ ಎಸ್‌ಪಿ ಇರಬೇಕಲ್ಲವೇ. ವೈದ್ಯಕೀಯ ಸಿಬ್ಬಂದಿ, ಆ್ಯಂಬುಲೆನ್ಸ್ ವ್ಯವಸ್ಥೆ

### ಮ್ಯಾಜೆಸ್ಟ್ರೆಟಿಯಲ್ ತನಿಖೆಗೆ ಆದೇಶ

**ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಭೆ ನಡೆಸಿ ಘಟನೆ, ಕಾರ್ಯಕ್ರಮ ಬಗ್ಗೆ ಅನೇಕ ಮಾಹಿತಿ ಪಡೆದು ಮಾತನಾಡಿದ್ದಾರೆ. ಈ ಬಗ್ಗೆ ಮ್ಯಾಜೆಸ್ಟ್ರೆಟಿಯಲ್ ತನಿಖೆಗೆ ಆದೇಶ ಮಾಡಿದ್ದಾರೆ. ಬೆಂಗಳೂರು ನಗರ ಜಿಲ್ಲಾಧಿಕಾರಿ ನೇತೃತ್ವದಲ್ಲಿ ತನಿಖೆಯಾಗಬೇಕೆಂದು ಆದೇಶಿಸಲಾಗಿದೆ. ಅವರು ಯಾರೇ ಆಗಿರಲಿ ಕಠಿಣವಾದ ಕ್ರಮ ತೆಗೆದುಕೊಳ್ಳುತ್ತೇವೆ. ಈಗ ವಿವರಣೆ ಮಾಡಲು ಹೋಗುವುದಿಲ್ಲ. ತನಿಖೆಯ ವರದಿ ಬರುವವರೆಗು ಹೇಳಲು ಸಾಧ್ಯವಿಲ್ಲ ಎಂದರು. ದುರ್ಘಟನೆಯಲ್ಲಿ 11 ಜನ ಸಾವನ್ನಪ್ಪಿದ್ದಾರೆ. 56 ಜನ ಗಾಯಗೊಂಡಿದ್ದಾರೆ. 46 ಜನ ಚಿಕಿತ್ಸೆ ಪಡೆದು ಮನೆಗಳಿಗೆ ಹೋಗಿದ್ದಾರೆ. 10 ಜನ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು, ಗಂಭೀರವಾಗಿ ಗಾಯಗೊಂಡಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ.**

ಇರಬೇಕಲ್ಲವೇ...? ಎಂದು ಸರ್ಕಾರಕ್ಕೆ ಹಂಗಾಮಿ ಸಿಜೆ ವಿ.ಕಾಮೇಶ್ವರರಾವ್ ನೇತೃತ್ವದ ಪೀಠ ಪ್ರಶ್ನೆಗಳ ಮೇಲೆ ಪ್ರಶ್ನೆ ಕೇಳಿದೆ. ಕಾಲ್ತುಳಿತವಾದಾಗ ಏನು ಮಾಡಬೇಕೆಂಬ ಬಗ್ಗೆ ಸಿದ್ದ ಇರಬೇಕಲ್ಲವೇ...? ಗಾಯಗೊಂಡವರನ್ನು ತಕ್ಷಣ ಆಸ್ಪತ್ರೆಗೆ ಸೇರಿಸಬೇಕಲ್ಲವೇ..? ಇಂತಹ ಮಾರ್ಗಸೂಚಿ ಏನಾದರೂ ಪಾಲಿಸಿದ್ದೀರಾ ಎಂದು ನ್ಯಾಯಾಲಯ ಅಸಮಾಧಾನ ವ್ಯಕ್ತಪಡಿಸಿದೆ. ಕರ್ನಾಟಕ ಹೈಕೋರ್ಟ್ ಸ್ವಯಂಪ್ರೇರಿತವಾಗಿ ಪಿಐಎಲ್ ದಾಖಲಿಸಿಕೊಂಡು ವಿಚಾರಣೆ ನಡೆಸಿ ಸರ್ಕಾರಕ್ಕೆ ಚಾಟಿ ಬೀಸಿದೆ.

ಬೆಂಗಳೂರಿನ ಚಿನ್ನಸ್ವಾಮಿ ಸ್ಟೇಡಿಯಂ ಹೊರಭಾಗದಲ್ಲಿ ಆರ್‌ಸಿಬಿ ಐಪಿಎಲ್ ವಿಜಯೋತ್ಸವ ಆಚರಣೆ ಸಂದರ್ಭ ಸಂಭವಿಸಿದ ಕಾಲ್ತುಳಿತ , 11 ಜನರ ಸಾವಿಗೆ ಸಂಬಂಧಿಸಿದ ಕರ್ನಾಟಕ ಹೈಕೋರ್ಟ್ ಸ್ವಯಂಪ್ರೇರಿತವಾಗಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ದಾಖಲಿಸಿಕೊಂಡಿದೆ. ಘಟನೆ ಬಗ್ಗೆ ವರದಿ ಸಲ್ಲಿಸಲು ಸರ್ಕಾರಕ್ಕೆ ಸೂಚನೆ ನೀಡಿದ್ದು, ಪತ್ರಿಕೆಗಳಲ್ಲಿ ಬಂದ ವರದಿ ಆಧರಿಸಿ ಸ್ವಯಂಪ್ರೇರಿತ ಪಿಐಎಲ್ ದಾಖಲಿಸಿಕೊಳ್ಳಲಾಗಿದೆ. ಚಿನ್ನಸ್ವಾಮಿ ಸ್ಟೇಡಿಯಂ ಹೊರಗಡೆ ನಡೆದ ಘಟನೆ ತೀವ್ರ ಕಳವಳಕಾರಿಯಾಗಿದೆ. ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ್ದೇವೆ ಎಂದು ಕರ್ನಾಟಕ ಹೈಕೋರ್ಟ್ ನ್ಯಾಯಪೀಠ ಹೇಳಿದೆ. ಸರ್ಕಾರ ಕೈಗೊಂಡಿದ್ದ ಭದ್ರತಾ ಕ್ರಮಗಳ ಮಾಹಿತಿ ನೀಡಲು

- ಸರ್ಕಾರಕ್ಕೆ ಚಾಟಿ
- ಬೆಂಗಳೂರು ಕಾಲ್ತುಳಿತ
- ಸ್ವಯಂ ಪ್ರೇರಿತ ಪಿಐಎಲ್ ದಾಖಲಿಸಿದ ಹೈಕೋರ್ಟ್
- ವರದಿ ಸಲ್ಲಿಸಲು ಸರ್ಕಾರಕ್ಕೆ ಸೂಚನೆ
- ಎಚ್ಚೆತ್ತ ಸರ್ಕಾರದಿಂದ ಹೊಸ SOP ಮ್ಯಾಜೆಸ್ಟ್ರೆಟಿಯಲ್ ತನಿಖೆಗೆ ಆದೇಶ



ಪೀಠ ಸೂಚನೆ ನೀಡಿದೆ. ವಿಚಾರಣೆ ವೇಳೆ, ಹೈಕೋರ್ಟ್‌ನಲ್ಲಿ ಎಜಿ ಶಶಿಕಿರಣ್ ಶೆಟ್ಟಿ ಉಪಸ್ಥಿತರಿದ್ದರು. ಬಳಿಕ ಮಾತನಾಡಿ, ಹೈಕೋರ್ಟ್ ನೀಡುವ ಸೂಚನೆಗಳನ್ನು ಪಾಲಿಸಲಾಗುವುದು. ನಡೆದ ಘಟನೆ, ಸರ್ಕಾರದ ಕ್ರಮ ಎಲ್ಲದರ ಮಾಹಿತಿ ಉಚ್ಚ ನ್ಯಾಯಾಲಯಕ್ಕೆ ನೀಡಲಾಗುವುದು ಎಂದು ಅವರು ಮಾಹಿತಿ ನೀಡಿದರು. ಘಟನೆ ಬಗ್ಗೆ ಮ್ಯಾಜಿಸ್ಟ್ರೇಟ್ ತನಿಖೆಗೆ ಆದೇಶಿಸಲಾಗಿದೆ. ಈ ಕುರಿತ ಎಲ್ಲಾ ವಿವರಗಳನ್ನು ಕೋರ್ಟ್‌ಗೆ ಒದಗಿಸುವುದಾಗಿ ಎಜಿ ಶಶಿಕಿರಣ್ ಶೆಟ್ಟಿ ಹೇಳಿದ್ದಾರೆ. ಏತನ್ಮಧ್ಯೆ ಘಟನೆ ಸಂಬಂಧ ಕಬ್ಬನ್ ಪಾರ್ಕ್ ಪೊಲೀಸ್ ಠಾಣೆಯಲ್ಲಿ ಅಸಹಜ ಸಾವು ಪ್ರಕರಣ ದಾಖಲಿಸಲಾಗಿದೆ. 11 ಸಾವುಗಳಿಗೆ ಸಂಬಂಧಿಸಿ 11 ಅಸಹಜ ಸಾವು ಪ್ರಕರಣಗಳನ್ನು ದಾಖಲಿಸಲಾಗಿದೆ. ಎಫ್‌ಐಆರ್ ದಾಖಲಿಸದೇ ಇರುವ ಪೊಲೀಸರ ನಡೆ ಅನುಮಾನಗಳಿಗೆ ಕಾರಣವಾಗಿದೆ. ಹಿರಿಯ ಪೊಲೀಸ್ ಅಧಿಕಾರಿಗಳ ಸೂಚನೆ ಮೇರೆಗೆ ಅಸಹಜ ಸಾವು ಪ್ರಕರಣ ದಾಖಲಿಸಲಾಗಿದೆ ಎನ್ನಲಾಗಿದೆ. ಮತ್ತೊಂದೆಡೆ, ಸಾಮಾಜಿಕ ಹೋರಾಟಗಾರ ಸ್ನೇಹಮಯಿ ಕೃಷ್ಣ ಘಟನೆ ಸಂಬಂಧ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆಶಿವಕುಮಾರ್, ಕರ್ನಾಟಕ ಕ್ರಿಕೆಟ್ ಅಸೋಸಿಯೇಷನ್ ವಿರುದ್ಧ ಕಬ್ಬನ್ ಪಾರ್ಕ್ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದಾರೆ.

**ಚಿನ್ನಸ್ವಾಮಿ ಕ್ರೀಡಾಂಗಣಕ್ಕೆ ಪೊಲೀಸ್ ಕಮಿಷನರ್ ದಯಾನಂದ್ ಭೇಟಿ:** ಘಟನೆ ನಡೆದ ಚಿನ್ನಸ್ವಾಮಿ ಕ್ರೀಡಾಂಗಣಕ್ಕೆ ಬೆಂಗಳೂರು ಪೊಲೀಸ್ ಆಯುಕ್ತ ಬಿ ದಯಾನಂದ್ ಗುರುವಾರ ಭೇಟಿ ನೀಡಿದರು.

**ಒಬ್ಬ ವ್ಯಕ್ತಿ ತನಗಿದ್ದ ಒಬ್ಬ ಮಗನನ್ನ ಕಳೆದಕೊಂಡ ಬಗ್ಗೆ ವೈದೇಹಿ ಆಸ್ಪತ್ರೆಯಲ್ಲಿ ಹೇಳಿಕೊಂಡರು. ಮಗ ಕಾಲೇಜಿಗೆ ಹೋಗುವುದಾಗಿ ಬೆಳಗ್ಗೆ 6 ಗಂಟೆಗೆ ಮನೆ ಬಿಟ್ಟಿದ್ದ. ಆದರೆ ನೋಡಿದರೆ ಈ ರೀತಿಯಾಗಿದೆ. ಸಮುದಾಯ ಸಂತೋಷದಲ್ಲಿ ಬಂದರು. ಇದನ್ನು ಯಾರು ಕೂಡ ಊಹಿಸಿರಲಿಲ್ಲ. 34 ಸಾವಿರ ಸೀಟುಗಳ ಸಾಮಾರ್ಥ್ಯ ಇರುವ ಸ್ಟೇಡಿಯಂಗೆ 8 ಲಕ್ಷ ಜನ ಬಂದಿದ್ದರು ಎಂದು ಅವರು ವಿವರಿಸಿದರು.**

ಚಿನ್ನಸ್ವಾಮಿ ಕ್ರೀಡಾಂಗಣದ ಗೇಟ್ ನಂಬರ್ 6, 7, 21 ರಲ್ಲಿ ಸಂಭವಿಸಿದ ಕಾಲ್ತುಳಿತದಲ್ಲಿ ಜನ ಮೃತಪಟ್ಟಿದ್ದರು. ಹೀಗಾಗಿ ಆ ಜಾಗಗಳಿಗೆ ಕಮಿಷನರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.

### ಚಿನ್ನಸ್ವಾಮಿ ಸ್ಟೇಡಿಯಂಗೆ ಪರಮೇಶ್ವರ ಭೇಟಿ

ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಆರ್‌ಸಿಬಿ ವಿಜಯೋತ್ಸವದ ವೇಳೆ ಕಾಲ್ತುಳಿತ ಸಂಭವಿಸಿದ ಸ್ಥಳಗಳಿಗೆ ಗುರುವಾರ ಗೃಹ ಸಚಿವ ಜಿ.ಪರಮೇಶ್ವರ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಬೆಂಗಳೂರು ನಗರ ಪೊಲೀಸ್ ಆಯುಕ್ತರಾದ ಬಿ.ದಯಾನಂದ್, ಹೆಚ್ಚುವರಿ ಪೊಲೀಸ್ ಆಯುಕ್ತ ರಮೇಶ್ ಬಾನೋತ್ ,ಡಿಸಿಪಿಗಳಿಂದ ಮಾಹಿತಿ ಪಡೆದರು. ಮಹತ್ವದ ಸಭೆ ನಡೆಸಿದರು. ಸುದ್ದಿಗಾರರೊಂದಿಗೆ ಮಾತನಾಡಿ,ಗೃಹ ಸಚಿವ ಜಿ.ಪರಮೇಶ್ವರ ಅವರು, ಸಿಎಂ ಅವರು ಮೆಜಿಸ್ಟ್ರಿಯಲ್ ವಿಚಾರಣೆಗೆ ಆದೇಶಿಸಿದ್ದು, ಅದರ ಪ್ರಕ್ರಿಯೆ ಆರಂಭವಾಗಿದೆ. ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ಯಾವ ಸ್ಥಳದಲ್ಲಿ ಕಾಲ್ತುಳಿತ ಆಗಿದೆ. ಅದನ್ನು ಯಾವ ರೀತಿಯಾಗಿ ತಪ್ಪಿಸಬಹುದಾಗಿತ್ತು ಎಂಬುದನ್ನು ತಿಳಿದುಕೊಳ್ಳಲು ಖುದ್ದಾಗಿ ನಾನೇ ಪರಿಶೀಲಿಸಿದ್ದೇನೆ.

### ಮೆಟ್ರೋ ಸಂಚಾರ, ತನಿಖಾ ವರದಿ ಬಳಿಕ ಬಹಿರಂಗ



ಬೆಂಗಳೂರು ನಮ್ಮ ಮೆಟ್ರೋ ಸಂಸ್ಥೆಯವರು ನೀಡಿರುವ ಮಾಹಿತಿ ಪ್ರಕಾರ ಬೆಳಗ್ಗೆ 9ಗಂಟೆಯಿಂದ ರಾತ್ರಿ 11 ಗಂಟೆವರೆಗೆ 8.7 ಲಕ್ಷ ಜನ ಮೆಟ್ರೋದಲ್ಲಿ ಪ್ರಯಾಣ ಮಾಡಿದ್ದಾರೆ. ತನಿಖೆಯ ವರದಿ ಬರುವವರೆಗೂ ಏನನ್ನು ಹೇಳುವುದಿಲ್ಲ. ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ಘಟನೆ ನಡೆದ ಸ್ಥಳ ಪರಿಶೀಲನೆ ಮಾಡುತ್ತೇನೆ. ಆರ್‌ಸಿಬಿ, ಕೆಎಸ್‌ಸಿಎ ಅವರೊಂದಿಗೆ ಸಭೆ ಮಾಡುತ್ತೇನೆ. ತಾಂತ್ರಿಕವಾಗಿ ಏನೇ ಇದ್ದರು ಸಹ ಡಿಜಿಪಿ, ಬೆಂಗಳೂರು ನಗರ ಪೊಲೀಸ್ ಆಯುಕ್ತರು ನೋಡಿಕೊಳ್ಳುತ್ತಾರೆ. ಎಲ್ಲಿ ಮತ್ತು ಏನು ಲೋಪ ಆಗಿದೆ ಎಂಬುದು ಗೊತ್ತಾದ ಬಳಿಕ ತಪ್ಪು ಯಾರದ್ದು...? ಎಂಬುದು ಗೊತ್ತಾಗಲಿದೆ ಎಂದು ಹೇಳಿದರು.









# ಕರ್ನಾಟಕಕ್ಕೆ ಕಳಂಕ ತಂದ ಕಾಂಗ್ರೆಸ್ ಸರ್ಕಾರ: ಸಂಸದ ಕೆ.ಸುಧಾಕರ್ ಆಕ್ರೋಶ

## ಹಿರಿಯ ಅಧಿಕಾರಿಗಳು ರಾಜೀನಾಮೆ ನೀಡಿ, ಹೈಕೋರ್ಟ್ ಅಥವಾ ಸುಪ್ರೀಂ ಕೋರ್ಟ್ ನ್ಯಾಯಾಧೀಶರ ನೇತೃತ್ವದಲ್ಲಿ ತನಿಖೆಯಾಗಬೇಕು ಎಂದು ಆಗ್ರಹ

• ಉದಯವಾಹಿನಿ, ಬೆಂಗಳೂರು

ಎಲ್ಲದರ ಬಗ್ಗೆಯೂ ಉಡಾಫೆ ಮಾತು, ಯಾವುದರಲ್ಲೂ ಗಂಭೀರತೆಯಿಲ್ಲದ ನಡವಳಿಕೆ. ಪೂರ್ವ ತಯಾರಿ, ಯೋಜಿತ ರೂಪುರೇಷೆಯಿಲ್ಲದೆ ಐಪಿಎಲ್ ಕ್ರಿಕೆಟ್‌ನಲ್ಲಿ ಆರ್‌ಸಿಬಿ ತಂಡದ ವಿಜಯೋತ್ಸವ ಆಯೋಜಿಸಿ, 11 ಜನ ಮುಗ್ಧರ ಸಾವು, ಹತ್ತಾರು ಜನರ ಗಾಯಗಳಿಗೆ ಕಾರಣವಾದ ಕಾಂಗ್ರೆಸ್ ಸರ್ಕಾರ, ಬೆಂಗಳೂರು ಹಾಗೂ ಕರ್ನಾಟಕಕ್ಕೆ ಕಳಂಕ ತಂದಿದೆ ಬಿಜೆಪಿ ಸಂಸದ, ಡಾ.ಕೆ. ಸುಧಾಕರ್ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಈ ಕುರಿತು ಹೇಳಿಕೆಯೊಂದನ್ನು ನೀಡಿರುವ ಅವರು, ಸಾವಿನ ಮನೆ, ಸೂತಕದ ವೇಳೆ ರಾಜಕಾರಣ ಮಾಡಲು ಖಂಡಿತ ಬಯಸುವುದಿಲ್ಲ. ಆದರೆ ಮಾನವೀಯತೆ, ನೈತಿಕತೆ, ಆತ್ಮಸಾಕ್ಷಿ ಎನ್ನುವುದಿದ್ದರೆ ರಾಜೀನಾಮೆ ನೀಡಬೇಕು.

ಹಿರಿಯ ಅಧಿಕಾರಿಗಳು ರಾಜೀನಾಮೆ ನೀಡಿ, ಹೈಕೋರ್ಟ್ ಅಥವಾ ಸುಪ್ರೀಂ ಕೋರ್ಟ್ ನ್ಯಾಯಾಧೀಶರ ನೇತೃತ್ವದಲ್ಲಿ ತನಿಖೆಯಾಗಬೇಕು ಎಂದು ಆಗ್ರಹಿಸಿದ್ದಾರೆ.

ಐಪಿಎಲ್ 18ನೇ ಆವೃತ್ತಿಯಲ್ಲಿ ಆರ್ ಸಿಬಿ ತಂಡ ಚಾಂಪಿಯನ್ ಕಪ್ ಗೆದ್ದಿದೆ. ಫೈನಲ್ ಪಂದ್ಯ ಮುಗಿದ ರಾತ್ರಿಯೇ ಅಭಿಮಾನಿಗಳ ಆನಂದೋತ್ಸಾಹ ಉತ್ತುಂಗಕ್ಕೆ ಏರಿದ್ದೂ ಸಹಜ. ಇದನ್ನು ಗಮನಿಸಿ ಎಷ್ಟು ಜನರು ಸೇರಬಹುದು ಎಂದು ಅಂದಾಜಿಸಿ ಸನ್ಮಾನ ಕಾರ್ಯಕ್ರಮ ರೂಪಿಸಬೇಕಾಗಿತ್ತು. ಗುಪ್ತಚರ ಸೇರಿ ಎಲ್ಲಾ ಇಲಾಖೆಗಳ ಜತೆಗೆ ಸಮನ್ವಯ ಸಾಧಿಸಿ ವ್ಯವಸ್ಥೆ ಮಾಡಬೇಕಾಗಿತ್ತು ಎಂದು ಸಾಮಾನ್ಯ ಜನರೇ ಹೇಳುತ್ತಿದ್ದಾರೆ ಎಂದರು.

**ಅಸ್ಪಷ್ಟ, ಗೊಂದಲ :** ಚಾಂಪಿಯನ್ ತಂಡವನ್ನು ತೆರೆದ ವಾಹನದಲ್ಲಿ ಕರೆ ತರುವ ಮೂಲಕ ಜನದಟ್ಟಣೆ ನಿಯಂತ್ರಿಸಲು ಸಾಧ್ಯವಿತ್ತು. ಆದರೆ ಕಾರ್ಯಕ್ರಮದ ಕೊನೆವರೆಗೂ ಅಸ್ಪಷ್ಟತೆಯಿತ್ತು. ಒಮ್ಮೆ ವಿಜಯಯಾತ್ರೆ ನಡೆಯುತ್ತದೆ ಅಥವಾ ಇಲ್ಲ. ವಿಧಾನಸೌಧ, ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಕಾರ್ಯಕ್ರಮ ಏರ್ಪಾಡು ಹೀಗೆ ಗೊಂದಲ ಸೃಷ್ಟಿಸಲಾಯಿತು. ನೆಚ್ಚಿನ ಆಟಗಾರರನ್ನು ನೋಡಲು ಬಂದಿದ್ದ ಸಾವಿರಾರು ಅಭಿಮಾನಿಗಳು ಎತ್ತ ಹೋಗಬೇಕು ಎಂದು ತಿಳಿಯದೆ ಪರದಾಡಿದರು, ನೂಕು-ನುಗ್ಗಲಿಗೆ ಕಾರಣವಾಯಿತು ಎಂದು ದೂರಿದ್ದಾರೆ.



ನಿರೀಕ್ಷೆಗೆ ಮೀರಿ ಲಕ್ಷಾಂತರ ಜನರು ಸೇರಿದ್ದರು ಎಂದು ಸರ್ಕಾರ ಹೇಳುತ್ತಿದೆ. ಚಿನ್ನಸ್ವಾಮಿ ಕ್ರೀಡಾಂಗಣದ ಒಳಗೆ 35 ಸಾವಿರ ಆಸನಗಳ ಪೈಕಿ 25 ಸಾವಿರ ಖಾಲಿಯಿದ್ದವು. ಹೊರಗೆ 30 ಸಾವಿರ ಜನರಿದ್ದರು. ವ್ಯವಸ್ಥಿತವಾಗಿ ಎರಡು ಕಡೆ ಕಾರ್ಯಕ್ರಮ ಸಂಘಟನೆ, ಸೂಕ್ತ ಭದ್ರತಾ ಏರ್ಪಾಡು ಮಾಡದೆ ಕಾಲ್ತುಳಿತ ದುರ್ಘಟನೆಗೆ ಸರ್ಕಾರವೇ ನೇರ ಹೊಣೆಯಾಗಿದೆ ಎಂದು ಡಾ.ಕೆ.ಸುಧಾಕರ್ ಆರೋಪಿಸಿದ್ದಾರೆ.

ಐಪಿಎಲ್‌ನಲ್ಲಿ ಈ ಹಿಂದೆ ಚಾಂಪಿಯನ್ ಆಗಿ ಹೊರ ಹೊಮ್ಮಿದ ತಂಡಗಳಿಗೆ ಮುಂಬೈ, ಚೆನ್ನೈ, ಕೋಲ್ಕತ್ತಾದಲ್ಲಿ ಭರ್ಜರಿ ಸ್ವಾಗತ, ಸನ್ಮಾನಗಳಾಗಿವೆ. ಭಾರತ ಟಿ20 ವಿಶ್ವಕಪ್ ಗೆದ್ದಾಗ ಮುಂಬೈನಲ್ಲಿ ವಿಜಯೋತ್ಸವ ನಡೆದಿದೆ. ಅಲ್ಲೆಲ್ಲ ಲಕ್ಷಾಂತರ ಜನರು ಸೇರಿದ್ದರು. ಬೆಂಗಳೂರಿನಲ್ಲಿ ಸೇರಿದ್ದಕ್ಕಿಂತ ಮೂರ್ನಾಲ್ಕು ಪಟ್ಟು ಹೆಚ್ಚಿದ್ದರು. ಯಾವುದೇ ಸಣ್ಣ ಘಟನೆಯಾಗಿರಲಿಲ್ಲ. ಅಂದರೆ ಯೋಜಿತ ಸಿದ್ಧತೆ, ಭದ್ರತಾ ವ್ಯವಸ್ಥೆ ಹೇಗಿತ್ತೆಂಬುದಕ್ಕೆ ನಿದರ್ಶನವಾಗಿದೆ ಎಂದರು.ಕನ್ನಡಿಗರ ಪವರ್ ಸ್ಟಾರ್ ಪುನೀತ್ ರಾಜಕುಮಾರ್ ಅಕಾಲಿಕವಾಗಿ ನಿಧನರಾದಾಗ ಲಕ್ಷಾಂತರ ಅಭಿಮಾನಿಗಳು ಆಗಮಿಸಿದ್ದರು.

ಅಂದಿನ ಬಸವರಾಜ ಬೊಮ್ಮಾಯಿ ನೇತೃತ್ವದ ಬಿಜೆಪಿ ಸರ್ಕಾರ, ಬಿಗಿ ಭದ್ರತಾ ವ್ಯವಸ್ಥೆ ಮಾಡಿತ್ತು. ಎರಡು ದಿನಗಳ ಕಾಲ ಪುನೀತ್ ಕಳೇಬರದ ಅಂತಿಮ ದರ್ಶನ ನಂತರ ಅಂತಿಮ ಯಾತ್ರೆಯನ್ನು ವ್ಯವಸ್ಥಿತವಾಗಿ ಆಯೋಜಿಸಿದ್ದನ್ನು ಸಂಸದ ಡಾ.ಕೆ. ಸುಧಾಕರ್ ನೆನಪಿಸಿದ್ದಾರೆ.

**ಆರ್‌ಸಿಬಿ ತಂಡದ ವಿಜಯೋತ್ಸವ**

### ಮಂತ್ರಿಗಳು, ಅಧಿಕಾರಿಗಳ ಮಕ್ಕಳು

ವಿಧಾನಸೌಧ ಮಹಾದ್ವಾರದ ಮೆಟ್ಟಿಲು ಮೇಲೆ ಏರ್ಪಡಿಸಿದ್ದ ಸನ್ಮಾನ ಕಾರ್ಯಕ್ರಮದಲ್ಲಿ ಮಂತ್ರಿಗಳು, ಶಾಸಕರು, ಅಧಿಕಾರಿಗಳ ಮಕ್ಕಳು, ಮೊಮ್ಮಕ್ಕಳು ತುಂಬಿಕೊಂಡಿದ್ದರು. ಕ್ರಿಕೆಟಿಗರ ಪರಿಚಯ, ಆಟೋಗ್ರಾಫ್, ಸೆಲ್ಫಿ ತೆಗೆದುಕೊಳ್ಳುವುದರಲ್ಲಿ ತಲ್ಲೀನರಾಗಿದ್ದರು ಎಂದು ಡಾ.ಕೆ.ಸುಧಾಕರ್ ಕುಟುಕಿದರು. ವೇದಿಕೆ ಮೇಲಿದ್ದ ಎಲ್ಲರಿಗೂ ವಿವಿಐಪಿ ಭದ್ರತಾ ವ್ಯವಸ್ಥೆಯಿತ್ತು. ಕಾರ್ಯಕ್ರಮ ಮುಗಿದ ಬಳಿಕ ಇದಕ್ಕೆಲ್ಲ ಅವಕಾಶ ಮಾಡಿಕೊಳ್ಳಬಹುದಿತ್ತು. ಒಟ್ಟೂ ವೈಫಲ್ಯಗಳಿಂದ ಅಮಾಯಕರು ಬಲಿಯಾಗಿ,ಆ ಕುಟುಂಬಗಳು ಕಣ್ಣೀರಿನಲ್ಲಿ ಕೈತೊಳೆದುಕೊಳ್ಳುವಂತೆ ಮಾಡಿದೆ ಎಂದು ಮರುಕ ವ್ಯಕ್ತಪಡಿಸಿದರು.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹9,960/Gram24ct ₹9,130/Gram22ct ಬೆಳ್ಳಿ: ₹104 /Gram

# ಹಣದ ಮೇಲೆ ರಾಜಕೀಯ ಬೇಡ ಎಂದ ಡಿಸಿಎಂ!

## ರಾಜಕೀಯ ಬೇರೆ ಸಂದರ್ಭದಲ್ಲಿ ಮಾತಾಡೋಣ ಎಂದು ಪ್ರತಿಪಕ್ಷಗಳಿಗೆ ಸೂಚ್ಯವಾಗಿ ಸಲಹೆ ನೀಡಿದ ಡಿಕೆಶಿ

• ಉದಯವಾಹಿನಿ, ಬೆಂಗಳೂರು

ರಾಯಲ್ ಚಾಲೆಂಜರ್ಸ್ ಬೆಂಗಳೂರು (ಆರ್‌ಸಿಬಿ) ತಂಡದ ಚೊಚ್ಚಲ ಐಪಿಎಲ್ ವಿಜಯೋತ್ಸವ, ಸೂತಕದ ಮನೆಯಾಗಿ ಬದಲಾಗಿದೆ. ಸಂಭ್ರಮಾಚರಣೆ ವೇಳೆ ರಾಜಧಾನಿ ಬೆಂಗಳೂರಿನಲ್ಲಿ ಸಂಭವಿಸಿದ ಭೀಕರ ಕಾಲ್ತುಳಿತ ಘಟನೆ, ಐಪಿಎಲ್ ಟ್ರೋಫಿ ವಿಜಯೋತ್ಸವನ್ನು ಮರೆಸಿದೆ. ಆದರೆ ಚಿನ್ನಸ್ವಾಮಿ ಭೀಕರ ಕಾಲ್ತುಳಿತ ದುರಂತ ಇದೀಗ ರಾಜ್ಯದಲ್ಲಿ ರಾಜಕೀಯ ಸ್ವರೂಪ ಪಡೆದುಕೊಂಡಿದ್ದು, ಆಡಳಿತಾರೂಢ ಕಾಂಗ್ರೇಸ್ ಮತ್ತು ಪ್ರತಿಪಕ್ಷಗಳಾದ ಬಿಜೆಪಿ, ಜೆಡಿಎಸ್ ನಡುವೆ ವಾಕ್ಸಮರಕ್ಕೆ ಕಾರಣವಾಗಿದೆ. ಈ ಮಧ್ಯೆ ಕಾಲ್ತುಳಿತ ದುರಂತದ ಹೊಣೆ ಹೊರಲು ಸರ್ಕಾರ ಸಿದ್ಧ ಎಂದು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹೇಳಿದ್ದಾರೆ. ಬೆಂಗಳೂರಿನಲ್ಲಿ ಮಾಧ್ಯಮದವರ ಮುಂದೆ ಮಾತನಾಡಿದ ಅವರು, ಇದು ರಾಜಕೀಯ ಮಾಡುವ ಸಮಯ ವಲ್ಲ, ಕಾಲ್ತುಳಿತ ದುರಂತದಲ್ಲಿ ಮೃತಪಟ್ಟವರ ಕುಟುಂಬಸ್ಥರೊಂದಿಗೆ ಗಟ್ಟಿಯಾಗಿ ನಿಲ್ಲುವ ಸಮಯ ಎಂದು ಸೂಚ್ಯವಾಗಿ ಹೇಳಿದರು.

ಬಿಜೆಪಿ ಅವಧಿಯಲ್ಲಿ ಏನೆಲ್ಲಾ ಆಯ್ತು ಎಂದು ನಾನು ಚರ್ಚೆ ಮಾಡಲ್ಲ. ಬಿಜೆಪಿ ಹಾಗೂ ಜೆಡಿಎಸ್ ಯಾವತ್ತೂ ಹೆಣದ ಮೇಲೆ ರಾಜಕೀಯ ನಡೆಸಿದೆ.



ನಾನು ಹಾಗೆ ಮಾಡುವುದಿಲ್ಲ. ಇದು ನಮ್ಮ ರಾಜ್ಯ ಮತ್ತು ನಗರದ ವರ್ಚಸ್ಸಿನ ಪ್ರಶ್ನೆ. ನಾವು ಇದಕ್ಕೆ ಹೊಣೆ ಹೊತ್ತುಕೊಳ್ಳುತ್ತೇವೆ ಎಂದು ಉಪಮುಖ್ಯಮಂತ್ರಿಗಳು ಸ್ಪಷ್ಟಪಡಿಸಿದರು. ನಾವು ಹೀಗಾಗಲಿದೆ ಎಂಬ ನಿರೀಕ್ಷೆ ಮಾಡಿರಲಿಲ್ಲ. ಜನರ ಸಂಖ್ಯೆ ಹೆಚ್ಚಾಗುತ್ತಿದ್ದಂತೆ ಮೆಟ್ರೋ ಸಂಚಾರ ಕೂಡಾ ನಿಲ್ಲಿಸಿದ್ದೆವು. ಆದರೂ ಅಪಾರ ಜನಸ್ತೋಮವನ್ನು ನಿಯಂತ್ರಿಸಲು ಸಾಧ್ಯವಾಗಲಿಲ್ಲ. ಸರ್ಕಾರ ಈ ಕಾಲ್ತುಳಿತದ ದುರಂತ ಹೊರಲು ಸಿದ್ಧ ಎಂದು ಡಿಕೆ ಶಿವಕುಮಾರ್ ಹೇಳಿದರು. ಒಟ್ಟಿನಲ್ಲಿ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದ ಸಮೀಪ ನಡೆದ ಕಾಲ್ತುಳಿತ ದುರತ, ರಾಜ್ಯದಲ್ಲಿ ಸೂತಕದ ವಾತಾವರಣವನ್ನು ನಿರ್ಮಿಸಿದೆ. ತಮ್ ನೆಚ್ಚಿನ ಆರ್‌ಸಿಬಿ ತಂಡ ಐಪಿಎಲ್ ಟ್ರೋಫಿ ಗೆದ್ದ ಸಂಭ್ರಮದಲ್ಲಿದ್ದ ಅಭಿಮಾನಿಗಳು, ಈಗ ದುರಂತದಲ್ಲಿ ಮೃತಪಟ್ಟವರಿಗಾಗಿ ಕಣ್ಣೀರು ಹಾಕುವ ಪರಿಸ್ಥಿತಿ ಬಂದಿದೆ.

> **ಇದು ನಮ್ಮ ಕುಟುಂಬಕ್ಕೆ ಆದ ನೋವು. ಈ ನೋವನ್ನು ತಡೆದುಕೊಳ್ಳಲು ಯಾರಿಂದಲೂ ಸಾಧ್ಯವಿಲ್ಲ. ನಾನು ಯಾವುದೇ ಕಾರಣಕ್ಕೂ ಈ ವಿಚಾರದಲ್ಲಿ ರಾಜಕೀಯ ಮಾಡುವುದಿಲ್ಲ. ಮಕ್ಕಳ ಸ್ಥಿತಿ ನೋಡಿ ನನಗೆ ಬೇಸರ ಆಗಿದೆ ಎಂದು ಡಿಕೆಶಿ ಭಾವುಕರಾಗಿ ನುಡಿದರು. ಕಾಲ್ತುಳಿತ ನಡೆದ ಬಗ್ಗೆ ಪೊಲೀಸ್ ಕಮಿಷನರ್ ಮಾಹಿತಿ ನೀಡುತ್ತಿದ್ದಂತೇ, ಕ್ರೀಡಾಂಗಣದಲ್ಲಿ ಯಾರಿಗೂ ಮಾತನಾಡಲು ಅವಕಾಶ ಕೊಡಲಿಲ್ಲ. ಇಲ್ಲಿ ಯಾವುದೇ ಆರೋಪ ಪ್ರತ್ಯಾರೋಪ ಮಾಡುವುದು ಬೇಡ. ಇದಕ್ಕೆಲ್ಲ ಸಂದರ್ಭವೂ ಇದಲ್ಲ. ರಾಜಕೀಯ ಬೇರೆ ಸಂದರ್ಭದಲ್ಲಿ ಮಾತನಾಡುತ್ತೇನೆ. ಈಗ ರಾಜಕೀಯ ಮಾಡುವುದಿಲ್ಲ ಎಂದು ಡಿಕೆ ಶಿವಕುಮಾರ್ ಸೂಚ್ಯವಾಗಿ ಹೇಳಿದರು.**

> **ಪೊಲೀಸ್ ಕಮಿಷನರ್ ನನ್ನ ಬಳಿ ಬಂದು ಚಿನ್ನಸ್ವಾಮಿ ಸಮೀಪ ಕಾಲ್ತುಳಿತ ಸಂಭವಿಸಿದೆ, ಬೇಗ ಕಾರ್ಯಕ್ರಮ ಬೇಗ ಮುಗಿಸುವಂತೆ ಹೇಳಿದರು. ನಾನೂ ಕೂಡಲೇ ಕೆಸಿಎ ಆಡಳಿತ ಮಂಡಳಿಗೆ ಸೂಚನೆ ನೀಡಿ, ಕಾರ್ಯಕ್ರಮ ನಿಲ್ಲಿಸಿದೆ. ಅವರೂ ಕೂಡ ತಡಮಾಡದೇ ವಿಜಯೋತ್ಸವ ಕಾರ್ಯಕ್ರಮವನ್ನು ನಿಲ್ಲಿಸಿದರು. ಕ್ರೀಡಾಂಗಣಕ್ಕೆ ಹೋಗುವ ತನಕ ನನಗೂ ಕಾಲ್ತುಳಿತ ಪ್ರಕರಣ ಗೊತ್ತಿರಲಿಲ್ಲ. ಮಾಧ್ಯಮಗಳ ಮೂಲಕವೇ ನನಗೆ ಗೊತ್ತಾಯ್ತು ಎಂದು ಉಪಮುಖ್ಯಮಂತ್ರಿಗಳು ತಿಳಿಸಿದರು.**

---

# ಜನರಲ್ಲಿನ ತಪ್ಪುಕಲ್ಪನೆ ಹೋಗಲಾಡಿಸಲು ಅಭಿಯಾನ: 28ಕ್ಕೆ ನಿಮ್ಹಾನ್ಸ್‌ನಲ್ಲಿ ನಡಿಗೆ



• ಉದಯವಾಹಿನಿ, ಬೆಂಗಳೂರು

ಮಾನಸಿಕ ಆರೋಗ್ಯ ರೋಗಿಗಳ ಬಗ್ಗೆ ಇರುವ ತಪ್ಪು ಕಲ್ಪನೆಗಳನ್ನು ಹೋಗಲಾಡಿಸಲು ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನ ಸಂಸ್ಥೆಯು (ನಿಮ್ಹಾನ್ಸ್) ಇದೇ 28ಕ್ಕೆ 'ವಾಕಿಂಗ್ ಟೂರ್ ಆಫ್ ನಿಮ್ಹಾನ್ಸ್ ಅಭಿಯಾನ ಹಮ್ಮಿಕೊಂಡಿದೆ. ಬೆಳಿಗ್ಗೆ 8.45ಕ್ಕೆ ಸಂಸ್ಥೆಯ ಡಾ.ಎಂ.ವಿ. ಗೋವಿಂದಸ್ವಾಮಿ ಕೇಂದ್ರದಲ್ಲಿ ನಡಿಗೆ ಪ್ರಾರಂಭವಾಗಲಿದೆ. 300 ಎಕರೆ ವಿಸ್ತೀರ್ಣ ಹೊಂದಿರುವ ನಿಮ್ಹಾನ್ಸ್ ಕ್ಯಾಂಪಸ್‌ನ ವಿಶೇಷತೆಗಳನ್ನು ಸಂಸ್ಥೆಯ ವೈದ್ಯರು ಪರಿಚಯ ಮಾಡಿಸಲಿದ್ದಾರೆ. ಸಂಸ್ಥೆಯು 2019ರಿಂದ ಈ ಅಭಿಯಾನ ನಡೆಸುತ್ತಿದೆ. ಮಾನಸಿಕ ರೋಗಿಗಳ ಸಾಮಾನ್ಯ ವಾರ್ಡ್, ವಿಶೇಷ ವಾರ್ಡ್‌ಗಳನ್ನು ವೀಕ್ಷಿಸಬಹುದು. ವೈದ್ಯರು, ರೋಗಿಗಳ ಜೊತೆಗೆ ಸಮಾಲೋಚನೆ ನಡೆಸಬಹುದು. ಚಿಕಿತ್ಸೆ ಕುರಿತು ಮಾಹಿತಿ ಪಡೆಯ ಬಹುದಾಗಿದೆ. ಮಾನಸಿಕ ರೋಗಿಗಳ ಪುನರ್ವಸತಿ ಕೇಂದ್ರ, ಚಿಕಿತ್ಸಾ ವಿಭಾಗ, ಮ್ಯೂಸಿಯಂ, ಯೋಗ ಸೇರಿದಂತೆ ವಿವಿಧ ಕೇಂದ್ರಗಳ ಪರಿಚಯ ಮಾಡಿಕೊಡಲಾಗುವುದು ಎಂದು ಸಂಸ್ಥೆ ತಿಳಿಸಿದೆ. 'ಮಾನಸಿಕ ಅಸ್ವಸ್ಥತೆಯಿಂದ ಬಳಲುವ ಜನರನ್ನು ಮೊದಲಿನಿಂದಲೂ ದೇಶದಲ್ಲಿ ಕಳಂಕಿತರಂತೆ ನೋಡಲಾಗುತ್ತಿದೆ. ಇದಕ್ಕೆ ಅರಿವಿನ ಕೊರತೆಯೇ ಮುಖ್ಯ ಕಾರಣ. ಆದ್ದರಿಂದ ಈ ಬಗ್ಗೆ ಅರಿವು ಮೂಡಿಸಲಾಗುತ್ತಿದೆ. ಸೀಮಿತ ಜನರಿಗೆ ಮಾತ್ರ ಅವಕಾಶ ಇರಲಿದ್ದು, ಹೆಸರು ನೋಂದಣಿಗೆ ಇದೇ 16 ಕಡೆಯ ದಿನಾಂಕವಾಗಿದೆ. ನೋಂದಣಿ ಶುಲ್ಕ 500 ನಿಗದಿಪಡಿಸಲಾಗಿದೆ' ಎಂದು ಸಂಸ್ಥೆ ಪ್ರಕಟಣೆಯಲ್ಲಿ ಮಾಹಿತಿ ನೀಡಿದೆ.

---

# ತುಂಬಿದ ಕಣ್ಣಾಲಿ; ದಿಕ್ಕು ತೋಚದ ಸ್ಥಿತಿ

• ಉದಯವಾಹಿನಿ, ಬೆಂಗಳೂರು

ಆರ್‌ಸಿಬಿ ವಿಜಯೋತ್ಸವಕ್ಕೆ ಹೋಗುತ್ತೇವೆ ಎಂದು ನಾವು ಯಾರೂ ಮನೆಯಲ್ಲಿ ಹೇಳಿಲ್ಲ. ಈಗ ನೋಡಿದರೆ ಹೀಗಾಗಿದೆ. ನಮ್ಮ ಸ್ನೇಹಿತ ಕುಸಿದು ಬಿದ್ದಿದ್ದ. ಅವನು ಮಾತನಾಡುತ್ತಿರಲಿಲ್ಲ. ಇವರು (ವೈದ್ಯರು) ನೋಡಿದರೆ, ಬ್ರಾಟ್ ಡೆಡ್ ಎಂದು ಹೇಳುತ್ತಿದ್ದಾರೆ. ಏನು ಮಾಡುವುದು ಎಂದು ಗೊತ್ತಾಗುತ್ತಿಲ್ಲ...ಎಂ.ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಉಂಟಾದ ಕಾಲ್ತುಳಿತದಲ್ಲಿ ಗಾಯಗೊಂಡವರನ್ನು ಚಿಕಿತ್ಸೆಗೆ ಸೇರಿಸಲಾಗಿದ್ದ ವೈದೇಹಿ ಆಸ್ಪತ್ರೆ ಎದುರು ನಿಂತಿದ್ದ ಕಾಲೇಜು ವಿದ್ಯಾರ್ಥಿಯೊಬ್ಬನ ಚಡಪಡಿಕೆಯಿದು. ಇನ್ನೂ ಮೂರ್ನಾಲ್ಕು ವಿದ್ಯಾರ್ಥಿಗಳು ಆತನ ಜತೆಗೆ ದಿಗ್ಭ್ರಾಂತರಾಗಿ ನಿಂತಿದ್ದರು. ಬ್ರಾಟ್ ಡೆಡ್ ಎಂದು ವೈದ್ಯರು ಹೇಳಿದ್ದನ್ನು ಹೇಗೆ ಅರಗಿಸಿಕೊಳ್ಳಬೇಕೆಂದು ಗೊತ್ತಾಗದೆ ನಿಂತಿದ್ದರು. ತುಂಬಿದ ಕಣ್ಣಾಲಿಗಳು, ಉಬ್ಬಿದ ಗಂಟಲು, ಏನು ಮಾಡಬೇಕೆಂದು ದಿಕ್ಕುತೋಚದ ಸ್ಥಿತಿ. ಅತೀವ ಸಂಚಾರ ದಟ್ಟಣೆಯ ಮಲ್ಯ ರಸ್ತೆಯಲ್ಲೂ ಸ್ಮಶಾನ ಮೌನ. ಅಷ್ಟರಲ್ಲೇ ಹೊರಬಂದ ವೈದ್ಯರೊಬ್ಬರು ಮತ್ತೊಂದು ಯುವಕರ ಗುಂಪಿನತ್ತ ಹೋಗಿ, ಏನೋ ಮಾಹಿತಿ ನೀಡಿದರು. ಆ ಗುಂಪಿನಲ್ಲಿದ್ದ ಒಂದಿಬ್ಬರು ಯುವಕ ಯುವತಿಯರು ಕುಸಿದು ಕೂತರು. ಅವರತ್ತ ನುಗ್ಗಿದ ಸುದ್ದಿವಾಹಿನಿಗಳ ಕ್ಯಾಮೆರಾಮನ್‌ಗಳನ್ನು ತಡೆದ ಯುವಕನೊಬ್ಬ, 'ದಯವಿಟ್ಟು ಶೂಟ್ ಮಾಡಬೇಡಿ ಸರ್. ನಮ್ಮ ಸ್ನೇಹಿತೆ ನಮ್ಮೊಂದಿಗೆ ಬಂದಿದ್ದಾಳೆ ಎಂದು ಅವರ ಅಪ್ಪ-ಅಮ್ಮನಿಗೆ ಗೊತ್ತಿಲ್ಲ. ಟಿ.ವಿಯಲ್ಲಿ ನೋಡಿದರೆ ಗಾಬರಿಯಾಗುತ್ತಾರೆ. ನಾವು ಹೇಗೋ ತಿಳಿಸುತ್ತೇವೆ' ಎಂದು ಕೈಮುಗಿದ. ಆ ಹೊತ್ತಿಗೆ ಕಸ್ತೂರಬಾ ರಸ್ತೆ ಕಡೆಯಿಂದ ಬಂದ ಕಾರೊಂದು ಆಸ್ಪತ್ರೆಯ ತುರ್ತು ವಿಭಾಗದ ಎದುರು ನಿಂತಿತು. ಕಾರಿನಿಂದಿಳಿದ ಯುವಕರು, ಯುವತಿಯೊಬ್ಬಳನ್ನು ಹೊತ್ತು ಆಸ್ಪತ್ರೆಯೊಳಕ್ಕೆ ಹೋದರು. ಆಕೆಯ ಕಾಲು ತಿರುಚಿಕೊಂಡಿತ್ತು. ಅದರ ಬೆನ್ನಲ್ಲೇ ಮತ್ತೊಂದು ಕಾರಿನಲ್ಲಿ ಇನ್ನೊಬ್ಬ ಗಾಯಾಳುವನ್ನು ಕರೆತರಲಾಯಿತು. ಈ ವೇಳೆಗೆ ಹೊರಬಂದ ಆಸ್ಪತ್ರೆಯ ವೈದ್ಯಾಧಿಕಾರಿ ಹುಮೇರಿ,16 ಗಾಯಾಳುಗಳನ್ನು ಇಲ್ಲಿಗೆ ಕರೆತರಲಾಗಿದೆ. ಅವರಲ್ಲಿ ನಾಲ್ವರು ಇಲ್ಲಿಗೆ ಬರುವ ಮುನ್ನವೇ ಮೃತಪಟ್ಟಿದ್ದರು. ಇನ್ನುಳಿದವರ ಸ್ಥಿತಿ ಸ್ಥಿರವಾಗಿದೆ' ಎಂದರು.

---

# ವಿವಿಧ ಕ್ಷೇತ್ರಗಳ 16 ಸಾಧಕಿಯರಿಗೆ ವಾವ್ ಪ್ರಶಸ್ತಿ ಪ್ರದಾನ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಮಹಿಳಾ ಕೈಗಾರಿಕೋದ್ಯಮಿಗಳ ಒಕ್ಕೂಟ ಉಬುಂಟು ನಗರದಲ್ಲಿ ಆಯೋಜಿಸಿದ್ದ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆಯಲ್ಲಿ ನಟಿ ಉಮಾಶ್ರೀ, ರಂಗಕರ್ಮಿ ಬಿ.ಜಯಶ್ರೀ, ಕಲಬುರಗಿಯ ಕ್ಯಾನ್ಸರ್ ತಜ್ಞೆ ಡಾ. ವಿಜಯಲಕ್ಷ್ಮಿ ದೇಶಮಾನೆ ಸೇರಿ ವಿವಿಧ ಕ್ಷೇತ್ರಗಳ 16 ಸಾಧಕಿಯರಿಗೆ ವುಮೆನ್ ಆಫ್ ವರ್ತ್ (ವಾವ್) 2025' ಪ್ರಶಸ್ತಿ ನೀಡಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಮಾತನಾಡಿದ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ನಿರ್ದೇಶಕ ನಿತೇಶ್ ಕೆ. ಪಾಟೀಲ್, ಸ್ಪರ್ಧಾತ್ಮಕ ಡಿಜಿಟಲ್ ಮಾರುಕಟ್ಟೆ ವ್ಯವಸ್ಥೆಯಲ್ಲಿ ಯಶಸ್ವಿಯಾಗಲು ಅಗತ್ಯವಿರುವ ಪರಿಕರಗಳನ್ನು ಮಹಿಳೆಯರ ನೇತೃತ್ವದ ಉದ್ಯಮಗಳಿಗೆ ಒದಗಿಸಲಾಗುತ್ತದೆ' ಎಂದು ತಿಳಿಸಿದರು. ಉಬುಂಟು ಒಕ್ಕೂಟದ ಸ್ಥಾಪಕಿ ಕೆ.ರತ್ನಪ್ರಭಾ ಅವರು, ಡಿಜಿಟಲ್ ಕೌಶಲ ಮತ್ತು ಸ್ಪರ್ಧೆ ಹೆಚ್ಚಿಸಲು ಹೆಚ್ಚಿಸಲು 1,000 ಮಹಿಳಾ ಉದ್ಯಮಿಗಳಿಗೆ ನೂತನ ಡಿಜಿಟಲ್ ಮಾರ್ಕೆಟಿಂಗ್ ಕಾರ್ಯಕ್ರಮವನ್ನು ಆಯೋಜಿಸುವುದಾಗಿ ಘೋಷಿಸಿದರು. ಕಾರ್ಯಕ್ರಮದಲ್ಲಿ ಸೈಬರ್ ಸುರಕ್ಷತೆ, ಇ-ಕಾಮರ್ಸ್, ವ್ಯವಹಾರ ಜಾಲಗಳ ಕುರಿತು ಕಾರ್ಯಾಗಾರ ಹಮ್ಮಿಕೊಳ್ಳಲಾಗಿತ್ತು. ಅಸೋಸಿಯೇಷನ್ ಆಫ್ ಬಿಸಿನೆಸ್ ವುಮೆನ್ ಇನ್ ಕಾಮರ್ಸ್ (ಎಬಿಡಬ್ಲ್ಯುಸಿಐ) ಸಮಾಲೋಚಕ ಸಂಸ್ಥಾಪಕಿ, ಪ್ರಧಾನ ಕಾರ್ಯದರ್ಶಿ ಪಾರುಲ್ ಸೋನಿ ಅವರು, ಮಹಿಳೆಯರು ನಡೆಸುವ ಉದ್ಯಮಗಳಿಗೆ ಅವಕಾಶಗಳನ್ನು ಸೃಷ್ಟಿಸುವಲ್ಲಿ ಇ-ಪ್ಲಾಟ್‌ಫಾರ್ಮ್‌ಗಳ ಪಾತ್ರವನ್ನು ವಿವರಿಸಿದರು. ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ಮಾಜಿ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ರಾಜ್‌ಕುಮಾರ್ ಖತ್ರಿ ಮಾತನಾಡಿದರು. ಕಾರ್ಯಕ್ರಮದಲ್ಲಿ 100ಕ್ಕೂ ಹೆಚ್ಚು ಮಳಿಗೆಗಳಿದ್ದವು. ಗೋವಾ, ಮಹಾರಾಷ್ಟ್ರ, ಮಧ್ಯಪ್ರದೇಶ, ಅಸ್ಸಾಂ, ಕರ್ನಾಟಕ ಸೇರಿದಂತೆ ವಿವಿಧ ರಾಜ್ಯಗಳ 300 ಪ್ರತಿನಿಧಿಗಳು ಭಾಗವಹಿಸಿದ್ದರು.

---

# ಕಾಲ್ತುಳಿತ ನನಗೆ ಉಸಿರಾಡಲು ಕಷ್ಟವಾಗಿತ್ತು: ಚಂದನ್ ಶೆಟ್ಟಿ

• ಉದಯವಾಹಿನಿ, ಬೆಂಗಳೂರು

ಆರ್‌ಸಿಬಿ ತಂಡದ ವಿಜಯೋತ್ಸವ ಕಾರ್ಯಕ್ರಮಕ್ಕೆ ಹೋಗಲು ಪಾಸ್ ಸಿಕ್ಕಿತ್ತು. ಅಲ್ಲಿ ಬಹಳ ಜನಸಂದಣಿಯಿತ್ತು. ಒಂದು ಕ್ಷಣ ನನಗೆ ಉಸಿರಾಡಲು ಕಷ್ಟ ಆಯ್ತು ಎಂದು ನಟ ಚಂದನ್ ಶೆಟ್ಟಿ ಹೇಳಿದ್ದಾರೆ. ಗೇಟ್ ನಂಬರ್ 3ಕ್ಕೆ ಹೋಗಲು ನನಗೆ ಪಾಸ್ ಸಿಕ್ಕಿತ್ತು. ಅದರ ಬಳಿ ಹೋಗಲು ಸಾಧ್ಯವಾಗಲಿಲ್ಲ. ಅಲ್ಲಿಂದ ಹೇಗೋ ಗೇಟ್ ನಂಬರ್ 10ರ ಬಳಿ ಬಂದಾಗ ಜನಸಂದಣಿ ಇತ್ತು. ಇದರಿಂದಾಗಿ ಉಸಿರಾಡಲು ಕಷ್ಟವಾಯಿತು. ದುರಂತದಲ್ಲಿ ಪ್ರಾಣ ಕಳೆದುಕೊಂಡ ಆ ಜೀವಗಳಿಗೆ ಎಷ್ಟು ಕಷ್ಟ ಆಗಿತ್ತೋ, ಏನೋ? ಕಾಲ್ತುಳಿತದಲ್ಲಿ ಜೀವ ಕಳೆದುಕೊಂಡವರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ಕೇಳಿಕೊಳ್ಳುತ್ತಿದ್ದೇನೆ ಎಂದು ಚಂದನ್ ಅವರು ವಿಡಿಯೊ ಸಂದೇಶ ಹಂಚಿಕೊಂಡಿದ್ದಾರೆ. ನಿಜವಾಗಿಯೂ ಬೇಸರ ಆಗುತ್ತಿದೆ. ದುರಂತಕ್ಕೆ ಯಾರು ಹೊಣೆ ಎನ್ನುವುದನ್ನು ಹೇಳುವುದು ತುಂಬಾ ಕಷ್ಟ. ಸರಿಯಾಗಿ ವ್ಯವಸ್ಥೆ ಮಾಡಲಿಲ್ವಾ?. ಈ ರೀತಿ ಇರುತ್ತೆ ಅಂತಾ ಯಾರಿಗೂ ಗೊತ್ತಿರಲಿಲ್ಲ. ಶನಿವಾರ ಅಥವಾ ಭಾನುವಾರ ಕಾರ್ಯಕ್ರಮ ಮಾಡಬಹುದಿತ್ತು. ದುರಂತದಲ್ಲಿ ಗಾಯಗೊಂಡಿರುವವರು ಶೀಘ್ರ ಚೇತರಿಸಿಕೊಳ್ಳಲಿ ಎಂದು ಪ್ರಾರ್ಥಿಸುತ್ತೇನೆ ಎಂದಿದ್ದಾರೆ.

---

# ಸರ್ಕಾರಕ್ಕೆ ಥಾವರ್‌ಚಂದ್ ಗೆಹ್ಲೋಟ್ ಸೂಚನೆ

• ಉದಯವಾಹಿನಿ, ಬೆಂಗಳೂರು



ಆರ್‌ಸಿಬಿ ವಿಜಯೋತ್ಸವದ ವೇಳೆ ರಾಜ್ಯ ರಾಜಧಾನಿ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದ ಹೊರಗೆ ಸಂಭವಿಸಿದ ಕಾಲ್ತುಳಿತದ ಘಟನೆಯನ್ನು ಕೂಲಂಕುಷವಾಗಿ ತನಿಖೆ ನಡೆಸುವಂತೆ ರಾಜ್ಯ ಸರ್ಕಾರಕ್ಕೆ ಥಾವರ್‌ಚಂದ್ ಗೆಹ್ಲೋಟ್ ಅವರು ಸೂಚನೆ ನೀಡಿದ್ದಾರೆ.

ಘಟನೆ ಸಂಬಂಧ ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು, ಆರ್‌ಸಿಬಿಯ ಐಪಿಎಲ್ ವಿಜಯೋತ್ಸವದ ಸಂಭ್ರಮಾಚರಣೆ ಸಮಯದಲ್ಲಿ ಚಿನ್ನಸ್ವಾಮಿ ಕ್ರೀಡಾಂಗಣದ ಹೊರಗೆ ಸಂಭವಿಸಿದ ದುರಂತದ ಕುರಿತು ನನಗೆ ವಿಷಾದವಿದೆ. ಮೃತರ ಕುಟುಂಬಕ್ಕೆ ಸಂತಾಪ ಸೂಚಿಸುತ್ತೇನೆ. ದುರಂತದ ಬಗ್ಗೆ ಸರ್ಕಾರ ಕೂಲಂಕಷ ತನಿಖೆ ನಡೆಸಬೇಕು ಎಂದು ಒತ್ತಾಯಿಸಿದ್ದಾರೆ. ದುರಂತದ ಜೀವಹಾನಿಯಿಂದ ತೀವ್ರ ದುಃಖಿತನಾಗಿದ್ದೇನೆ. ಮೃತರ ಕುಟುಂಬಗಳಿಗೆ ನನ್ನ ಸಂತಾಪಗಳು. ಗಾಯಗೊಂಡವರು ಬೇಗನೆ ಚೇತರಿಸಿಕೊಳ್ಳಲಿ ಎಂದು ಪ್ರಾರ್ಥಿಸುತ್ತೇನೆ. ಘಟನೆಗೆ ಕಾರಣವಾದ ಲೋಪಗಳನ್ನು ಕೂಲಂಕಷವಾಗಿ ತನಿಖೆ ಮಾಡಿ ಸರ್ಕಾರ ಕ್ರಮಕೈಗೊಳ್ಳಬೇಕು. ಮೃತರ ಕುಟುಂಬಗಳಿಗೆ ಸೂಕ್ತ ಪರಿಹಾರ ನೀಡಬೇಕು ಹಾಗೂ ಇಂತಹ ಘಟನೆಗಳು ಮರುಕಳಿಸದಂತೆ ಎಚ್ಚರವಹಿಸಬೇಕು ಎಂದು ಆಗ್ರಹಿಸಿದ್ದಾರೆ. ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ಆರ್‌ಸಿಬಿ ವಿಜಯೋತ್ಸವ ಸಂಭ್ರಮಾಚರಿಸಲು ಬುಧವಾರ ಕಾರ್ಯಕ್ರಮ ಆಯೋಜಿಲಾಗಿತ್ತು. ಈ ವೇಳೆ ಆರ್‌ಸಿಬಿ ಆಟಗಾರರನ್ನು ನೋಡಲು ಜನರು ಮುಗಿ ಬಿದ್ದದ್ದು, ಕಾಲ್ತುಳಿತ ಸಂಭವಿಸಿ 11 ಮಂದಿ ಸಾವನ್ನಪ್ಪಿದ್ದಾರೆ. ಅಲ್ಲದೆ, 47 ಮಂದಿ ಗಾಯಗೊಂಡಿದ್ದಾರೆ. ಹಲವರ ಸ್ಥಿತಿ ಚಿಂತಾಜನಕವಾಗಿದ್ದು, ಸಾವಿನ ಸಂಖ್ಯೆ ಮತ್ತಷ್ಟು ಏರಿಕೆಯಾಗುವ ಸಾಧ್ಯತೆಗಳಿವೆ ಎಂದು ಹೇಳಲಾಗುತ್ತಿದೆ.

---

# ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ನ್ಯಾಯಾಂಗ ತನಿಖೆಗೆ ಒತ್ತಾಯ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಗುರುವಾರ ಬೌರಿಂಗ್ ಆಸ್ಪತ್ರೆಗೆ ಭೇಟಿ ನೀಡಿದ್ದು, ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಸಂಭವಿಸಿದ ಕಾಲ್ತುಳಿತದಿಂದ ಗಾಯಗೊಂಡವರ ಆರೋಗ್ಯ ವಿಚಾರಿಸಿದರು. ಆರ್‌ಸಿಬಿ ಸಂಭ್ರಮಾಚರಣೆ ವೇಳೆಯಲ್ಲಿ ಉಂಟಾದ ಕಾಲ್ತುಳಿತ ಘಟನೆಯಿಂದ 11 ಮಂದಿ ಸಾವನ್ನಪ್ಪಿದ್ದಾರೆ.

ಈ ದುರಂತ ಕುರಿತು ಸ್ವಯಂ ಪ್ರೇರಿತ ಪ್ರಕರಣ ದಾಖಲಿಸಿಕೊಂಡು ನ್ಯಾಯಾಂಗ ತನಿಖೆ ನಡೆಸಬೇಕು ಎಂದು ಹೈಕೋರ್ಟ್ ಹಂಗಾಮಿ ಮುಖ್ಯ ನ್ಯಾಯಮೂರ್ತಿ ಅವರಿಗೆ ಶೋಭಾ ಕರಂದ್ಲಾಜೆ ಪತ್ರ ಬರೆದಿದ್ದಾರೆ.ಗಾಯಾಳುಗಳ ಭೇಟಿ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಶೋಭಾ ಕರಂದ್ಲಾಜೆ, ಇದು ಆಕಸ್ಮಿಕವಾಗಿ ಆದ ದುರಂತವಲ್ಲ. ರಾಜ್ಯ ಸರ್ಕಾರ ಮತ್ತು ಅಧಿಕಾರಿಗಳ ಸಂಪೂರ್ಣ ಬೇಜವಾಬ್ದಾರಿತನದಿಂದ ಆಗಿದೆ ಎಂದು ಆರೋಪಿಸಿದರು. ಸರ್ಕಾರ ವಿಧಾನಸೌಧದಲ್ಲಿ ಆರ್‌ಸಿಬಿ ಆಟಗಾರರಿಗೆ ಅಭಿನಂದನಾ ಸಮಾರಂಭ ಆಯೋಜಿಸಿತ್ತೇ ಹೊರತು ಸ್ಟೇಡಿಯಂನಲ್ಲಿ ಅಲ್ಲ. ಕಾಲ್ತುಳಿತ ಹಾಗೂ ಸಾವುಗಳಿಗೆ ರಾಜ್ಯ ಸರ್ಕಾರ ಹೊಣೆಯಲ್ಲ ಎಂದು ಮುಖ್ಯಮಂತ್ರಿ ಬಹಿರಂಗವಾಗಿ ಹೇಳಿಕೆ ನೀಡಿರುವುದು ಇನ್ನೂ ಆತಂಕಕಾರಿಯಾಗಿದೆ ಎಂದರು. ಕಾಲ್ತುಳಿತ ಘಟನೆಯಲ್ಲಿ ಮೃತಪಟ್ಟ ಕುಟುಂಬಸ್ಥರಿಗೆ ತಲಾ ರೂ. 50 ಲಕ್ಷ ಪರಿಹಾರ ನೀಡಬೇಕು ಹಾಗೂ ಗಾಯಾಳುಗಳಿಗೆ ಉಚಿತ ಚಿಕಿತ್ಸೆ ನೀಡಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಶೋಭಾ ಕರಂದ್ಲಾಜೆ ಆಗ್ರಹಿಸಿದರು.

> **ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಹೇಳಿಕೆ ಸರ್ಕಾರದ ಪಾತ್ರವನ್ನು ಅಲ್ಲಗಳೆಯುವ ಮತ್ತು ಜವಾಬ್ದಾರಿಯುತ ಅಧಿಕಾರಿಗಳನ್ನು ರಕ್ಷಿಸುವ ಪ್ರಯತ್ನವಾಗಿದೆ. ತಪ್ಪನೆಲ್ಲಾ ಮುಚ್ಚಿಕೊಂಡು ಆಡಳಿತ ಯಂತ್ರಕ್ಕೆ ಕ್ಲೀನ್ ಚೀಟ್ ನೀಡುವ ಉದ್ದೇಶವಾಗಿದೆ. ಮ್ಯಾಜಿಸ್ಟ್ರೇಟ್ ತನಿಖೆಯಿಂದ ಸೂಕ್ತ ರೀತಿಯಲ್ಲಿ ತನಿಖೆ ನಡೆಯಲು ಸಾಧ್ಯವಿಲ್ಲ. ಹೀಗಾಗಿ ಪ್ರಾಮಾಣಿಕ ರೀತಿಯಲ್ಲಿ ತನಿಖೆ ನಡೆಯಲು ಹೈಕೋರ್ಟ್ ನಿಂದ ನ್ಯಾಯಾಂಗ ತನಿಖೆ ನಡೆಯಬೇಕು ಎಂದು ಒತ್ತಾಯಿಸಿದರು.**

---

# ಕಾಲ್ತುಳಿತ ಸರ್ಕಾರದ ಪ್ರಾಯೋಜಿತ ಅಮಾಯಕರ ಹತ್ಯಾಕಾಂಡ

• ಉದಯವಾಹಿನಿ, ಬೆಂಗಳೂರು



ಕಾಲ್ತುಳಿತ ಸರ್ಕಾರದ ಪ್ರಾಯೋಜಿತ ಅಮಾಯಕರ ಹತ್ಯಾಕಾಂಡ ಎಂದು ವಿಪಕ್ಷ ನಾಯಕ ಆರ್ ಅಶೋಕ್ ಸರ್ಕಾರದ ವಿರುದ್ಧ ಕಿಡಿಕಾರಿದ್ದಾರೆ. ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ಕಾಲ್ತುಳಿತಕ್ಕೊಳಗಾಗಿ 11 ಮಂದಿ ಮೃತಪಟ್ಟ ಕುರಿತು ಬಿಜೆಪಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಪ್ಪು ನಮ್ಮದು ಸರಿ, ಆದರೆ ತಪ್ಪು ಯಾರದ್ದೆಂದು ಜನರು ಕೇಳುತ್ತಿದ್ದಾರೆ.

ಕೂಗಳತೆ ಅಂತರದಲ್ಲೇ ಎರಡೆರಡು ಕಾರ್ಯಕ್ರಮಗಳು. ಈ ಕಾರ್ಯಕ್ರಮದ ಬಗ್ಗೆ ಐಪಿಎಲ್ ಚೇರ್‌ಮ್ಯಾನ್ ಗೊತ್ತೇ ಇಲ್ಲ ಎಂದಿದ್ದಾರೆ. ಸರ್ಕಾರ ಕೇಳಿದ್ದಕ್ಕೆ ಗ್ರೌಂಡ್ ಕೊಟ್ಟಿದ್ದೇನೆ ಎಂದು ಕೆಎಸ್‌ಸಿಎ ಹೇಳಿದೆ. ಇದರಲ್ಲಿ ಕೆಎಸ್‌ಸಿಎ ಅವರದ್ದು ತಪ್ಪಿಲ್ಲ. ಆರ್‌ಸಿಬಿಯವರು ಎರಡು ಕಿ.ಮೀ ಮೆರವಣಿಗೆಗೆ ಕೇಳಿದ್ದರು. ಆದರೆ ಅವರನ್ನು ವಿಧಾನಸೌಧಕ್ಕೆ ಕರೆದುಕೊಂಡು ಬಂದಿದ್ದು ಯಾರು ಎಂದು ಪ್ರಶ್ನಿಸಿದರು. ಪಂದ್ಯ ಮುಗಿದ ಮೇಲೆ ನಮ್ಮ ಪೊಲೀಸರು ಬೆಳಗ್ಗೆ 3 ಗಂಟೆವರೆಗೂ ಕೆಲಸ ಮಾಡಿದ್ದಾರೆ.

ಪಾಪ ನಮ್ಮ ಪೊಲೀಸರಿಗೆ ರಾತ್ರಿ ಎಲ್ಲಾ ನಿದ್ದೆನೇ ಇರಲಿಲ್ಲ. ಆದರೆ ನಮ್ಮ ಸರ್ಕಾರಕ್ಕೆ ಕಾಮನ್ ಸೆನ್ಸ್ ಇಲ್ಲ. ಅದೇ ಪೊಲೀಸರನ್ನು ನಿಯೋಜನೆ ಮಾಡಿದರೆ ಅವರು ಹೇಗೆ ಕೆಲಸ ಮಾಡಲು ಆಗುತ್ತದೆ ಪೊಲೀಸರು ಈ ಕಾರ್ಯಕ್ರಮಕ್ಕೆ ನಿರಾಕರಣೆ ಮಾಡಿದ್ದಾರೆ. ಆದರೆ ಬಲತ್ಕಾರದಿಂದ ಸರ್ಕಾರದಲ್ಲಿರುವುದು ನಾನಾ ನೀನಾ ಎಂದು ಪ್ರಶ್ನೆ ಕೇಳಿದೆ. ವಿಧಾನ ಸೌಧದ ಮುಂದೆ ಡ್ರೋನ್ ಎಲ್ಲಾ ಬಳಕೆ ಮಾಡಿದ್ದಾರೆ.

ಹೈಕೋರ್ಟ್ ನಿರ್ಬಂಧಿತ ಸ್ಥಳ, ಎಂತಹ ಮುಠ್ಠಾಳ ಕೆಲಸ ಮಾಡಿದೆ. ಇವತ್ತು ಕೋರ್ಟ್ ಕೂಡ ಸುಮೊಟೋ ಕೇಸ್ ದಾಖಲಿಸಿಕೊಂಡಿದೆ. ಇಷ್ಟಾದರೂ ಕೂಡ ಮುಖ್ಯಮಂತ್ರಿಗಳು, ಇಷ್ಟು ಜನ ಸೇರುತ್ತಾರೆ ಎಂದು ನಾವು ಅಂದಾಜಿಸಿಲ್ಲ ಅಂದಿದ್ದಾರೆ. ಎಲ್ಲೆಲ್ಲಿ ಎಷ್ಟೆಷ್ಟು ಜನರು ಸೇರುತ್ತಾರೆ ಎಂದು ಸರ್ಕಾರಕ್ಕೆ ಸಾಮಾನ್ಯ ಜ್ಞಾನವೂ ಇಲ್ಲವೇ ಎಂದು ವಾಗ್ದಾಳಿ ನಡೆಸಿದರು.

---

# ಮೆಟ್ರೊದಲ್ಲಿ 8.7 ಲಕ್ಷ ಜನರ ಪ್ರಯಾಣ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ನಮ್ಮ ಮೆಟ್ರೊ ರೈಲುಗಳಲ್ಲಿ ಬುಧವಾರ ರಾತ್ರಿ 9 ಗಂಟೆಯವರೆಗೆ 8.7 ಲಕ್ಷ ಜನರು ಪ್ರಯಾಣಿಸಿದ್ದಾರೆ. 5 ಐಪಿಎಲ್ 18ನೇ ಆವೃತ್ತಿಯನ್ನು ಗೆದ್ದಿರುವ ಆರ್‌ಸಿಬಿ ತಂಡಕ್ಕೆ ವಿಧಾನಸೌಧ ಮತ್ತು ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಅಭಿನಂದನಾ ಸಮಾರಂಭ ಹಮ್ಮಿಕೊಂಡಿದ್ದರಿಂದ ಅಭಿಮಾನಿಗಳು ಪ್ರವಾಹೋಪಾದಿಯಲ್ಲಿ ಹರಿದು ಬಂದಿದ್ದರು. ಮಧ್ಯಾಹ್ನದ ನಂತರ ನಮ್ಮ ಮೆಟ್ರೊದಲ್ಲಿ ಜನರು ತುಂಬಿ ತುಳುಕಿದ್ದರು. ಸಂಜೆವರೆಗೆ ನಗರದೆಡೆಗೆ ಮತ್ತು ಸಂಜೆ 5 ಗಂಟೆಯ ಬಳಿಕ ನಗರದಿಂದ ಹೊರಗೆ ಹೋಗುವವರ ಸಂಖ್ಯೆ ಅಧಿಕ ಇದ್ದಿದ್ದರಿಂದ 8.7 ಲಕ್ಷ ಜನರು ಸಂಚರಿಸಿದ್ದಾರೆ ಎಂದು ಬಿಎಂಆರ್‌ಸಿಎಲ್ ಅಧಿಕಾರಿಗಳು ತಿಳಿಸಿದ್ದಾರೆ.

ರಾತ್ರಿ 11.30ರವರೆಗೆ ಮೆಟ್ರೊ ಸಂಚಾರ ಇತ್ತು. ಹೀಗಾಗಿ ಒಟ್ಟು ಪ್ರಯಾಣಿಕರ ಸಂಖ್ಯೆ 9 ಲಕ್ಷ ದಾಟುವ ನಿರೀಕ್ಷೆ ಇದೆ.

---

# IP ಸೆಟ್‌ಗಳಿಗೆ ಉಚಿತ ವಿದ್ಯುತ್ ಸರಬರಾಜು ಮಾಡಲು ರಾಜ್ಯ ಸರ್ಕಾರ ಬದ್ಧ: ಸಚಿವ ಕೆ.ಜೆ ಜಾರ್ಜ್

• ಉದಯವಾಹಿನಿ, ಬೆಂಗಳೂರು



ಕೃಷಿ ಪಂಪ್ ಸೆಟ್‌ಗಳಿಗೆ 10 ಹೆಚ್'ಪಿವರೆಗೆ ಉಚಿತ ವಿದ್ಯುತ್ ಸರಬರಾಜು ಮಾಡಲು ರಾಜ್ಯ ಸರ್ಕಾರ ಬದ್ಧವಾಗಿದೆ ಎಂದು ಸಚಿವ ಕೆಜೆ.ಜಾರ್ಜ್ ಅವರು ಹೇಳಿದರು. ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಸೆಸ್ಕ್ ಪ್ರಗತಿ ಪರಿಶೀಲನೆ ನಡೆಸಿದ ಬಳಿಕ ಸಚಿವರು ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು. ಕೃಷಿ ಪಂಪ್ ಸೆಟ್‌ಗಳ ಆರ್ ಆರ್ ಸಂಖ್ಯೆಗೆ ಆಧಾರ್ ಜೋಡಣೆ ಮಾಡುತ್ತಿರುವುದರಿಂದ ಅವುಗಳಿಗೆ ಉಚಿತ ವಿದ್ಯುತ್ ಸ್ಥಗಿತಗೊಳ್ಳಲಿದೆ ಎಂಬ ಊಹಾಪೋಹಗಳು ಹಬ್ಬುತ್ತಿವೆ. ರೈತರಿಗೆ ಎಷ್ಟು ವಿದ್ಯುತ್ ಪೂರೈಸಲಾಗುತ್ತಿದೆ ಮತ್ತು ಎಷ್ಟು ಸಂಪರ್ಕಗಳಿವೆ ಎಂಬುದನ್ನು ಖಚಿತಪಡಿಸಿಕೊಳ್ಳಲು ಈ ಕಾರ್ಯ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

ಕೃಷಿ ಪಂಬ್ ಸೆಟ್‌ಗಳಿಗೆ 10 ಹೆಚ್'ಪಿ ವರೆಗೆ ಉಚಿತ ವಿದ್ಯುತ್ ಮುಂದುವರೆಯುವುದರ ಜೊತೆಗೆ 7 ಗಂಟೆ ಸಮಪರ್ಕ ವಿದ್ಯುತ್ ಕೂಡ ಪೂರೈಕೆಯಾಗಲಿದೆ. ಇದರಲ್ಲಿ ಅನುಮಾನ ಬೇಡ. ಮುಖ್ಯಮಂತ್ರಿಗಳು ಇತ್ತೀಚೆಗೆ ಹಾಡಿಗಳಿಗೆ ಭೇಟಿ ನೀಡಿದ ಬಳಿಕ ಅವುಗಳಿಗೆ ವಿದ್ಯುತ್ ಪೂರೈಸಲು ಅಗತ್ಯ ಕ್ರಮ ಕೈಗೊಂಡಿದ್ದು, ಅಗತ್ಯ ಮೂಲಸೌಕರ್ಯ ನಿರ್ಮಿಸಲಾಗಿದೆ. 600 ಹೆಚ್ಚು ಹಾಡಿ ಮನೆಗಳಿಗೆ ವಿದ್ಯುತ್ ಪೂರೈಕೆಗೆ ಕ್ರಮ ವಹಿಸಲಾಗಿದೆ ಎಂದು ತಿಳಿಸಿದರು.

ರಾಜ್ಯದಲ್ಲಿರುವ ಎಲ್ಲಾ ಅಕ್ರಮ ಕೃಷಿ ಪಂಪ್‌ಸೆಟ್ ಗಳನ್ನು 3 ತಿಂಗಳಲ್ಲಿ ಸಕ್ರಮಗೊಳಿಸಲಾಗುವುದು. ಮೈಸೂರು ಸೇರಿದಂತೆ ರಾಜ್ಯದಲ್ಲಿ ಒಟ್ಟು 4.5 ಲಕ್ಷ ಅಕ್ರಮ ಕೃಷಿ ಪಂಪ್‌ಸೆಟ್‌ಗಳಿದ್ದು, ಅದರಲ್ಲಿ ಈಗಾಗಲೇ 2.5 ಲಕ್ಷ ಕೃಷಿ ಪಂಪ್ ಸೆಟ್‌ಗಳನ್ನು ಸಕ್ರಮಗೊಳಿಸಲಾಗಿದೆ. ಬಾಕಿ ಇರುವ 2 ಲಕ್ಷ ಕೃಷಿ ಪಂಪ್ ಸೆಟ್‌ಗಳನ್ನು ಶೀಘ್ರದಲ್ಲಿಯೇ ಸಕ್ರಮಗೊಳಿಸಲಾಗುವುದು ಎಂದರು. ವಿದ್ಯುತ್ ಮಾರ್ಗದಿಂದ 500 ಮೀ.ಅಂತರದೊಳಗೆ ಇದ್ದರೆ ಆದಷ್ಟು ಬೇಗ ಸಕ್ರಮಗೊಳಿಸಲಾಗುವುದು. ಇಲ್ಲದೇ ಇದ್ದರೆ ರೈತರು ನವೀಕೃತ ಶೀಘ್ರ ಸಂಪರ್ಕ ಯೋಜನೆಯಡಿ ಸಕ್ರಮ ಮಾಡಿಕೊಳ್ಳಬಹುದು ಎಂದು ಹೇಳಿದರು. ಮಂಡಕಳ್ಳಿ ವಿಮಾನ ನಿಲ್ದಾಣದ ರನ್ ವೇ ವಿಸ್ತರಣೆ ಹಿನ್ನೆಲೆಯಲ್ಲಿ ರಾಷ್ಟ್ರೀಯ ಹೆದ್ದಾರಿಯಲ್ಲಿ ವಿದ್ಯುತ್ ಮಾರ್ಗವನ್ನು ಬದಲಿಸಲಾಗುವುದು.

ಇದರೊಂದಿಗೆ ಬೇರೆ ರಾಷ್ಟ್ರೀಯ ಹೆದ್ದಾರಿಗಳಲ್ಲಿ ಅಗತ್ಯ ಇರುವ ಕಡೆ ವಿದ್ಯುತ್ ಮಾರ್ಗವನ್ನು ಬದಲಿಸುವ ಕಾರ್ಯ ನಡೆಸಲಾಗುವುದು.

ಈ ಸಂಬಂಧ ಸೆಸ್ಕ್ ಅಕಾರಿಗಳು ರಾಷ್ಟ್ರೀಯ ಹೆದ್ದಾರಿ ಪ್ರಾಕಾರ ಮತ್ತು ವಿಮಾನ ನಿಲ್ದಾಣ ಪ್ರಾಕಾರದ ಅಕಾರಿಗಳೊಂದಿಗೆ ಸಭೆ ನಡೆಸಲಿದ್ದಾರೆ ಎಂದರು. ಹೆಚ್ಚುವರಿ ವಿದ್ಯುತ್ ಬೇಡಿಕೆ ಹಿನ್ನೆಲೆಯಲ್ಲಿ ಮೈಸೂರು ನಗರ ಸೇರಿದಂತೆ ಜಿಲ್ಲೆಯಲ್ಲಿ ಹೆಚ್ಚುವರಿಯಾಗಿ 44 ಉಪ ವಿದ್ಯುತ್ ಕೇಂದ್ರಗಳನ್ನು ಆರಂಭಿಸಲಾಗುವುದು.

ರಾಜ್ಯದಲ್ಲಿ ವಿದ್ಯುತ್ ಕೊರತೆಯಾಗದಂತೆ ಹೆಚ್ಚುವರಿಯಾಗಿ ವಿದ್ಯುತ್ ಸಿಗುತ್ತಿದೆ. ಜತೆಗೆ ಬೇಡಿಕೆಯು ಹೆಚ್ಚಾಗುತ್ತಿರುವುದರಿಂದ ಇಡೀ ರಾಜ್ಯದಲ್ಲಿ 100 ಸಬ್ ಸ್ಟೇಷನ್‌ಗಳನ್ನು ಸ್ಥಾಪಿಸುವ ಗುರಿ ಹೊಂದಲಾಗಿದ್ದು, ಮೈಸೂರಿನಲ್ಲಿಯೂ 44 ಉಪ ವಿದ್ಯುತ್ ಕೇಂದ್ರಗಳನ್ನು ಸ್ಥಾಪಿಸಲಾಗುತ್ತಿದೆ. ಕೇಂದ್ರಗಳ ಸ್ಥಾಪನೆಗೆ ಅಗತ್ಯ ಭೂಮಿಯನ್ನು ನೀಡುವಂತೆ ಜಿಲ್ಲಾಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಹೇಳಿದರು.

---

# ಕೆಪಿಎಸ್‌ಸಿ 384 ಗೆಜೆಟೆಡ್ ಪ್ರೊಬೇಷನರ್ ನೇಮಕಾತಿ ಅಧಿಸೂಚನೆ ರದ್ದು!

## ಆರ್.ಬಿ.ಬೂದಿಹಾಳ್, ಆಡಳಿತಾತ್ಮಕ ಸದಸ್ಯ ರಾಘವೇಂದ್ರ ಔರಾದ್‌ಕರ್ ಅವರಿದ್ದ ಪೀಠವು ವಿಚಾರಣೆ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

**ರಾಜ್ಯಗಳು ಈಗಾಗಲೇ ಜಾರಿ**

ಸರ್ಕಾರಿ ನೇಮಕಾತಿಗಳಲ್ಲಿ ಮೀಸಲು ಪ್ರಮಾಣವನ್ನು ಶೇ 50ರಿಂದ ಶೇ 56ಕ್ಕೆ ಹೆಚ್ಚಳ ಮಾಡಿ ರಾಜ್ಯ ಸರ್ಕಾರ ಹೊರಡಿಸಿದ್ದ ಆದೇಶದ ಆಧಾರದಲ್ಲಿ, ಕರ್ನಾಟಕ ಲೋಕಸೇವಾ ಆಯೋಗವು 2024ರ ಫೆಬ್ರುವರಿ 26ರಂದು ಹೊರಡಿಸಿದ್ದ 384 ಗೆಜೆಟೆಡ್ ಪ್ರೊಬೇಷನರ್ ನೇಮಕ ಅಧಿಸೂಚನೆಯನ್ನು ಕರ್ನಾಟಕ ಆಡಳಿತಾತ್ಮಕ ನ್ಯಾಯಮಂಡಳಿ (ಕೆಎಟಿ) ರದ್ದುಪಡಿಸಿದೆ. ಅಧಿಸೂಚನೆಯನ್ನು ಪ್ರಶ್ನಿಸಿ 3ಎ ಕೆಟಗರಿಗೆ ಸೇರಿದ ಚನ್ನಪಟ್ಟಣದ ಎಂ.ಟೆಕ್ ಪದವೀಧರ ಬಿ.ಎನ್.ಮಧು ಸಲ್ಲಿಸಿದ್ದ ಅರ್ಜಿಯನ್ನು ಕೆಎಟಿ ಅಧ್ಯಕ್ಷ ಆರ್.ಬಿ.ಬೂದಿಹಾಳ್ ಮತ್ತು ಆಡಳಿತಾತ್ಮಕ ಸದಸ್ಯ ರಾಘವೇಂದ್ರ ಔರಾದ್‌ಕರ್ ಅವರಿದ್ದ ಪೀಠವು ವಿಚಾರಣೆ ನಡೆಸಿ ಕಳೆದ ಮೇ 28ರಂದು ಈ ಕುರಿತಂತೆ ಆದೇಶ ಹೊರಡಿಸಿದೆ. ಕೆಎಎಸ್ ಹುದ್ದೆಗಳ ಭರ್ತಿ ಜತೆಗೆ 2022ರ ಡಿಸೆಂಬರ್ 12ರಂದು ಸರ್ಕಾರ ಮೀಸಲು ಹೆಚ್ಚಳಕ್ಕೆ ಹೊರಡಿಸಿದ್ದ ಆದೇಶವನ್ನೂ ರದ್ದುಗೊಳಿಸಿರುವ ಪೀಠವು, 'ಕಾನೂನು ಪ್ರಕಾರ ಹೊಸದಾಗಿ ನೇಮಕಾತಿ ಅಧಿಸೂಚನೆ ಹೊರಡಿಸಲು ಕೆಪಿಎಸ್‌ಸಿ ಸ್ವತಂತ್ರವಿದೆ' ಎಂದು ಸ್ಪಷ್ಟಪಡಿಸಿದೆ.

'ಅಂದಿನ ರಾಜ್ಯ ಸರ್ಕಾರ 2022ರ ಅಕ್ಟೋಬರ್ 23ರಂದು ಹೊರಡಿಸಿದ್ದ ಸುಗ್ರೀವಾಜ್ಞೆಯು ಮೀಸಲು ಪ್ರಮಾಣವನ್ನು ಶೇ 50ರಿಂದ ಶೇ 56ಕ್ಕೆ ಹೆಚ್ಚಿಸಿದೆ. ಇದನ್ನು ಆಧರಿಸಿ 2022ರ ಡಿಸೆಂಬರ್ 28ರಂದು ಅಧಿಸೂಚನೆ ಪ್ರಕಟಿಸಿ ರೋಸ್ಟರ್ ಅಂಕಗಳನ್ನು ನಿಗದಿಪಡಿಸಲಾಗಿದೆ. ಆದರೆ, ಈ ಪ್ರಕ್ರಿಯೆಯಲ್ಲಿ ಶಾಸನಸಭೆಯ ಅನುಮತಿ ಪಡೆದಿರಲಿಲ್ಲ ಎಂಬುದು ಗಮನಾರ್ಹ. ಹಾಗಾಗಿ, ಇದರ ಆಧಾರದಡಿ ರಚಿಸಲಾದ 2023ರ ನಿಯಮಾವಳಿ ಊರ್ಜಿತವಲ್ಲ ಎಂದು ಪೀಠವು ಅಭಿಪ್ರಾಯಪಟ್ಟಿದೆ.

**ವಾದ-ಪ್ರತಿವಾದ ಏನಿತ್ತು:** ಸರ್ಕಾರ ರಾಜಕೀಯ ಕಾರಣಕ್ಕಾಗಿ ಮೀಸಲು ಪ್ರಮಾಣವನ್ನು ಶೇ 56ಕ್ಕೆ ಹೆಚ್ಚಳ ಮಾಡಿದೆ. ಇದರಿಂದ ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ ಕೇವಲ ಶೇ 44ರಷ್ಟು ಮಾತ್ರವೇ ಅವಕಾಶ ಲಭಿಸುತ್ತದೆ. ಸಂವಿಧಾನಬದ್ಧವಾಗಿ ಅವರಿಗೆ ಸಿಗಬೇಕಾದ ಅವಕಾಶವನ್ನು ಈ ಮೂಲಕ ಕಸಿದುಕೊಳ್ಳಲಾಗಿದೆ. ಇದು ಸುಪ್ರಿಂ ಕೋರ್ಟ್‌ನ ಸಾಂವಿಧಾನಿಕ ಪೀಠದ ಆದೇಶದ ಸ್ಪಷ್ಟ ಉಲ್ಲಂಘನೆ' ಎಂದು ಅರ್ಜಿದಾರರ ಪರ ವಕೀಲರು ಪ್ರತಿಪಾದಿಸಿದ್ದರು.

**ಸರ್ಕಾರದ ಪರ ವಕೀಲರು, ಸಾಮಾಜಿಕ ಮತ್ತು ಶೈಕ್ಷಣಿಕ ಹಿಂದುಳಿದಿರುವಿಕೆಯನ್ನು ಖಚಿತ ಪಡಿಸಿಕೊಂಡು:** ನಿವೃತ್ತ ನ್ಯಾಯಮೂರ್ತಿ ಎಚ್.ಎನ್.ನಾಗಮೋಹನ್ ದಾಸ್ ಆಯೋಗದ ಶಿಫಾರಸಿನಂತೆ ಮೀಸಲಾತಿ ಪ್ರಮಾಣ ಹೆಚ್ಚಿಸಲಾಗಿದೆ. ಆಯೋಗವು ವೈಜ್ಞಾನಿಕ ವರದಿ ನೀಡಿದ್ದು, ಹಲವಾರು ರಾಜ್ಯಗಳು ಈಗಾಗಲೇ ಜಾರಿಗೊಳಿಸಿದ ಮಾದರಿ ಯಲ್ಲಿ ಜನಸಂಖ್ಯೆಯನ್ನು ಆಧರಿಸಿ ಮೀಸಲಾತಿ ಪ್ರಮಾಣ ವಿಸ್ತರಿಸಲಾಗಿದೆ. ಆದ್ದರಿಂದ, ರಾಜ್ಯ ಶಾಸನಸಭೆ ರೂಪಿಸಿದ ಕಾಯ್ದೆಯನ್ನು ಪ್ರಶ್ನಿಸಿ ಸಲ್ಲಿಸಲಾಗಿರುವ ಈ ಅರ್ಜಿಗೆ ಮಾನ್ಯತೆ ಇಲ್ಲ' ಎಂಬ ಸಮರ್ಥನೆ ನೀಡಿದ್ದರು.

**ಪೀಠದ ಅಭಿಪ್ರಾಯ:** ಶೇ 50ರ ಮಿತಿ ದಾಟುವಂತೆ ಸುಪ್ರಿಂ ಕೋರ್ಟ್ ಎಲ್ಲೂ ಹೇಳಿಲ್ಲ. ಕೆಲವು ರಾಜ್ಯಗಳು ಮಾಡಿವೆ ಎಂಬುದನ್ನೇ ಮುಂದಿರಿಸಿಕೊಂಡು ಮಾಡಲಾಗುವ ಮೀಸಲು ಮಿತಿ ಹೆಚ್ಚಳಕ್ಕೆ ಯಾವುದೇ ಶಾಸನಾತ್ಮಕ ಬೆಂಬಲ ಇಲ್ಲ

### ಏನಿದು ಪ್ರಕರಣ?

**ಬಿಜೆಪಿ ಸರ್ಕಾರದ ಆಡಳಿತಾವಧಿಯ 2022ರಲ್ಲಿ; ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ (ಶೈಕ್ಷಣಿಕ ಸಂಸ್ಥೆಗಳಲ್ಲಿ ಸೀಟು ಹಂಚಿಕೆ, ಮೀಸಲು ಮತ್ತು ರಾಜ್ಯ ಸೇವೆಯಲ್ಲಿ ನೇಮಕ ಹುದ್ದೆಗಳಿಗೆ ಮೀಸಲು) ಸುಗ್ರೀವಾಜ್ಞೆ ಜಾರಿಗೊಳಿಸಿತ್ತು. ಇದರಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಮೀಸಲಾತಿ ಪ್ರಮಾಣವನ್ನು ಶೇ 18ರಿಂದ ಶೇ 24ಕ್ಕೆ ಹೆಚ್ಚಿಸಿ ಸುಗ್ರೀವಾಜ್ಞೆ ಹೊರಡಿಸಲಾಗಿತ್ತು. ಇದರ ಆಧಾರದಡಿ ಕರ್ನಾಟಕ ಸರ್ಕಾರಿ ಸೇವೆಯಲ್ಲಿ ರೋಸ್ಟರ್ ಮೀಸಲು ನಿಗದಿಪಡಿಸಲಾಗಿತ್ತು. ಇದನ್ನು ಆಧರಿಸಿ ಕೆಪಿಎಸ್‌ಸಿ 384 ಗ್ರೂಪ್ 'ಎ' ಮತ್ತು 'ಬಿ' ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳ ನೇಮಕಕ್ಕೆ ಅಧಿಸೂಚನೆ ಹೊರಡಿಸಿತ್ತು. ಅರ್ಜಿದಾರರು ಇದನ್ನು ಕೆಎಟಿಯಲ್ಲಿ ಪ್ರಶ್ನಿಸಿದ್ದರು.**

## ಜಿಲ್ಲೆಯ ವಿದ್ಯುತ್ ಸಮಸ್ಯೆಗೆ ಶಾಶ್ವತ ಪರಿಹಾರ – 44 ಸಬ್ ಸ್ಟೇಷನ್ ಮಂಜೂರು: ಕೆಜೆ ಜಾರ್ಜ್

# ರಾಜ್ಯದಲ್ಲಿ ವಿದ್ಯುತ್ ಕೊರತೆಯಾಗದಂತೆ ಹೆಚ್ಚುವರಿಯಾಗಿ ವಿದ್ಯುತ್

• ಉದಯವಾಹಿನಿ, ಮೈಸೂರು


ಹೆಚ್ಚುವರಿ ವಿದ್ಯುತ್ ಬೇಡಿಕೆ ಹಿನ್ನೆಲೆಯಲ್ಲಿಮೈಸೂರು ನಗರ ಸೇರಿದಂತೆ ಜಿಲ್ಲೆಯಲ್ಲಿ ಹೆಚ್ಚುವರಿಯಾಗಿ 44 ಉಪ ವಿದ್ಯುತ್ ಕೇಂದ್ರಗಳನ್ನು ಆರಂಭಿಸಲಾಗುವುದು ಎಂದು ಇಂಧನ ಸಚಿವ ಕೆ.ಜೆ. ಜಾರ್ಜ್ ಹೇಳಿದರು. ನಗರದ ಜಿಲ್ಲಾಪಂಚಾಯಿತಿ ಸಭಾಂಗಣದಲ್ಲಿ ನಡೆದ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತದ ಪ್ರಗತಿ ಪರಿಶೀಲನಾ ಸಭೆಯ ಬಳಿಕ ಅವರು ಮಾತನಾಡಿದರು. ರಾಜ್ಯದಲ್ಲಿ ವಿದ್ಯುತ್ ಕೊರತೆಯಾಗದಂತೆ ಹೆಚ್ಚುವರಿಯಾಗಿ ವಿದ್ಯುತ್ ಸಿಗುತ್ತಿದೆ. ಜತೆಗೆ ಬೇಡಿಕೆಯು ಹೆಚ್ಚಾಗುತ್ತಿರುವುದರಿಂದ ಇಡೀ ರಾಜ್ಯದಲ್ಲಿ100 ಸಬ್ ಸ್ಟೇಷನ್‌ಗಳನ್ನು ಸ್ಥಾಪಿಸುವ ಗುರಿ ಹೊಂದಲಾಗಿದ್ದು, ಮೈಸೂರಿನಲ್ಲಿಯೂ 44 ಉಪ ವಿದ್ಯುತ್ ಕೇಂದ್ರಗಳನ್ನು ಸ್ಥಾಪಿಸಲಾಗುತ್ತಿದೆ. ಕೇಂದ್ರಗಳ ಸ್ಥಾಪನೆಗೆ ಅಗತ್ಯ ಭೂಮಿಯನ್ನು ನೀಡುವಂತೆ ಜಿಲ್ಲಾಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದರು.

**ವಿದ್ಯುತ್ ಲೈನ್ ಬದಲಾವಣೆ:** ಮಂಡಕಳ್ಳಿ ವಿಮಾನ ನಿಲ್ದಾಣದ ರನ್ ವೇ ವಿಸ್ತರಣೆ ಹಿನ್ನೆಲೆಯಲ್ಲಿ ರಾಷ್ಟ್ರೀಯ ಹೆದ್ದಾರಿಯಲ್ಲಿವಿದ್ಯುತ್ ಮಾರ್ಗವನ್ನು ಬದಲಿಸಲಾಗುವುದು. ಇದರೊಂದಿಗೆ ಬೇರೆ ರಾಷ್ಟ್ರೀಯ ಹೆದ್ದಾರಿಗಳಲ್ಲಿಅಗತ್ಯ ಇರುವ ಕಡೆ ವಿದ್ಯುತ್ ಮಾರ್ಗವನ್ನು ಬದಲಿಸುವ ಕಾರ್ಯ ನಡೆಸಲಾಗುವುದು. ಈ ಸಂಬಂಧ ಇಂದು ಸೆಸ್ಕ್ ಅಕಾರಿಗಳು ರಾಷ್ಟ್ರೀಯ ಹೆದ್ದಾರಿ ಪ್ರಾಕಾರ ಮತ್ತು ವಿಮಾನ ನಿಲ್ದಾಣ ಪ್ರಾಕಾರದ ಅಕಾರಿಗಳೊಂದಿಗೆ ಸಭೆ ನಡೆಸಲಿದ್ದಾರೆ ಎಂದರು.

175 ಮೆಗಾವ್ಯಾಟ್ ವಿದ್ಯುತ್



**ಅಕ್ರಮ ಸಕ್ರಮ:** ರಾಜ್ಯದಲ್ಲಿರುವ ಎಲ್ಲಾ ಅಕ್ರಮ ಕೃಷಿ ಪಂಪ್‌ಸೆಟ್‌ಗಳನ್ನು ಇನ್ನೂ ಮೂರು ತಿಂಗಳಲ್ಲಿ ಸಕ್ರಮಗೊಳಿಸಲಾಗುವುದು. ಮೈಸೂರು ಸೇರಿದಂತೆ ರಾಜ್ಯದಲ್ಲಿ ಒಟ್ಟು 4.5 ಲಕ್ಷ ಅಕ್ರಮ ಕೃಷಿ ಪಂಪ್‌ಸೆಟ್‌ಗಳಿದ್ದು, ಅದರಲ್ಲಿ ಈಗಾಗಲೇ 2.5 ಲಕ್ಷ ಕೃಷಿ ಪಂಪ್ ಸೆಟ್‌ಗಳನ್ನು ಸಕ್ರಮಗೊಳಿಸಲಾಗಿದೆ. ಬಾಕಿ ಇರುವ 2 ಲಕ್ಷ ಕೃಷಿ ಪಂಪ್ ಸೆಟ್‌ಗಳನ್ನು ಶೀಘ್ರದಲ್ಲಿಯೇ ಸಕ್ರಮಗೊಳಿಸಲಾಗುವುದು ಎಂದರು. ವಿದ್ಯುತ್ ಮಾರ್ಗದಿಂದ 500 ಮೀ.ಅಂತರದೊಳಗೆ ಇದ್ದರೆ ಆದಷ್ಟು ಬೇಗ ಸಕ್ರಮಗೊಳಿಸಲಾಗುವುದು. ಇಲ್ಲದೇ ಇದ್ದರೆ ರೈತರು ನವೀಕೃತ ಶೀಘ್ರ ಸಂಪರ್ಕ ಯೋಜನೆಯಡಿ ಸಕ್ರಮ ಮಾಡಿಕೊಳ್ಳಬಹುದು ಎಂದರು. ಮೈಸೂರು ಜಿಲ್ಲೆಯಲ್ಲಿನ 18 ಹಾಡಿಗಳಿಗೆ ವಿದ್ಯುತ್ ಸೌಲಭ್ಯವನ್ನು ಕಲ್ಪಿಸಲಾಗಿದ್ದು, 618 ಮನೆಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದೆ. ಮೂರು ತಿಂಗಳಲ್ಲಿಹಾಡಿಗಳಲ್ಲಿನ ಎಲ್ಲಾ ಮನೆಗಳಿಗೂ ವಿದ್ಯುತ್ ಸಂಪರ್ಕ ಕಲ್ಪಿಸಲಾಗುವುದು ಎಂದರು.



ಉದಯವಾಹಿನಿ ಚಿತ್ರ

**ಕುಸುಮ್ ಸಿ ಯೋಜನೆ:** ರಾಜ್ಯದಲ್ಲಿಕುಸುಮ್ ಸಿ ಯೋಜನೆಯಡಿ 2400 ಮೆಗಾವ್ಯಾಟ್ ವಿದ್ಯುತ್ ಅನ್ನು ಸೌರ ಶಕ್ತಿಯಿಂದ ಉತ್ಪಾದನೆ ಮಾಡುವ ಗುರಿ ಹೊಂದಲಾಗಿದ್ದು, ಜೂ. 11ರಂದು ಗೌರಿಬಿದನೂರಿನಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿಸಿಎಂ ಚಾಲನೆ ನೀಡಲಿದ್ದಾರೆ.

ಮೈಸೂರಿನಲ್ಲಿಸಹ 175 ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆ ಮಾಡುವ ಗುರಿ ಹೊಂದಲಾಗಿದೆ. ಈ ಯೋಜನೆಯಡಿ ಉತ್ಪಾದನೆಯಾಗುವ ವಿದ್ಯುತ್ ಅನ್ನು ಕೃಷಿ ಚಟುವಟಿಕೆಗಳಿಗೆ ಪೂರಕವಾಗಿ ಬಳಸಿಕೊಳ್ಳಲಾಗುವುದು. ಹಗಲಿನ ವೇಳೆ ಕೃಷಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಪೂರೈಕೆ ಮಾಡಲಾಗುವುದು ಎಂದರು.

### ವಿದ್ಯುತ್ ಅವಗಢದಿಂದ 200ಕ್ಕೂ ಹೆಚ್ಚು ಮಂದಿ ಸಾವು


**ಮೈಸೂರು ಜಿಲ್ಲೆಯಲ್ಲಿ ಕಳೆದ 5 ವರ್ಷಗಳಲ್ಲಿ 200ಕ್ಕೂ ಅಧಿಕ ಮಂದಿ ವಿದ್ಯುತ್ ಅವಗಢದಿಂದ ಸಾವಿಗೀಡಾಗಿದ್ದಾರೆ ಎಂದು ಸರ್ಕಾರ ತಿಳಿಸಿದೆ. ವರ್ಷದಿಂದ ವರ್ಷಕ್ಕೆ ಇಂಥ ಅವಗಢಗಳ ಸಂಖ್ಯೆ ಹೆಚ್ಚುತ್ತಲೇ ಇದೆ. ಜಾಗೃತಿ ಕೊರತೆ ಅಥವಾ ನಿರ್ಲಕ್ಷ್ಯವೇ ಇದಕ್ಕೆ ಕಾರಣ ಎಂದು ಸರ್ಕಾರ ಆತಂಕ ವ್ಯಕ್ತಪಡಿಸಿದೆ. ವಿದ್ಯುತ್ ಅವಗಢದಿಂದಾಗಿ ಜನರೊಂದಿಗೆ ಜಾನುವಾರು ಸಾವು ಹೆಚ್ಚಾಗುತ್ತಿದೆ. ಹಾಗಾಗಿ, ಚಾಮುಂಡೇಶ್ವರಿ ವಿದ್ಯುತ್ ನಿಗಮದಿಂದ ಜನರಲ್ಲಿ ಜಾಗೃತಿ ಉಂಟು ಮಾಡಲು ನಿರ್ಧರಿಸಲಾಗಿದೆ ಎಂದು ಸರ್ಕಾರ ತಿಳಿಸಿದೆ.**

# ರಾಜ್ಯ ಸರ್ಕಾರದಿಂದ ಸೂತಕದ ವಾತಾವರಣ ಸೃಷ್ಟಿ

• ಉದಯವಾಹಿನಿ, ಚಿಕ್ಕಬಳ್ಳಾಪುರ

ರಾಜ್ಯ ಸರ್ಕಾರದ ಆಡಳಿತ ನಡೆಯ ವೈಫಲ್ಯ, ಬೇಜವಾಬ್ದಾರಿತನದ ಕಾರ್ಯ ನಿರ್ವಹಣೆ ಕಾರಣದಿಂದಾಗಿ 18ನೇ ಐಪಿಎಲ್ ಗೆದ್ದ ಆರ್ ಸಿ ಬಿ. ತಂಡವನ್ನು ಸ್ವಾಗತಿಸುವ ಕಾರ್ಯಕ್ರಮದಲ್ಲಿ 11 ಮಂದಿ ಯುವಕರು ಮರುಣ ಹೊಂದಿದ್ದು ಇದೀಗ ರಾಜ್ಯದಲ್ಲಿ ಸೂತಕದ ವಾತಾವರಣವನ್ನು ಸೃಷ್ಟಿ ಮಾಡಿದೆ ಎಂದು ರಾಜ್ಯ ಸರ್ಕಾರದ ಮಾಜಿ ಸಚಿವ, ಚಿಕ್ಕಬಳ್ಳಾಪುರ ಹಾಲಿ ಲೋಕಸಭಾ ಸದಸ್ಯ ಡಾಕ್ಟರ್ ಕೆ ಸುಧಾಕರ್ ತಿಳಿಸಿದರು. 18ನೇ ಐಪಿಎಲ್ ಗೆದ್ದು ರಾಜಧಾನಿಗೆ ಮರಳಿದ್ದ ಆರ್ ಸಿ ಬಿ ತಂಡದ ಆಟಗಾರರನ್ನು ರಾಜ್ಯ ಸರ್ಕಾರದ ಪರವಾಗಿ ಸ್ವಾಗತಿಸುವ ಕಾರ್ಯಕ್ರಮ ನಿರ್ವಹಣೆಯಲ್ಲಿ ರಾಜ್ಯ ಸರ್ಕಾರ ಸಂಪೂರ್ಣವಾಗಿ ವಿಫಲಗೊಂಡಿದೆ ಈ ಸರ್ಕಾರದ ವೈಫಲ್ಯತೆಯ ಕಾರಣ 11 ಮಂದಿ ಯುವಕರು ಪ್ರಾಣ ಕಳೆದುಕೊಂಡರು ಅಲ್ಲದೆ ಅನೇಕ ಮಂದಿ ಗಾಯಾಳುಗಳಾಗಿ ಆಸ್ಪತ್ರೆಯಲ್ಲಿ ದಾಖಲಾಗಿದ್ದಾರೆ ಇದು ವಿಶ್ವದಲ್ಲಿ ಕರ್ನಾಟಕ ರಾಜ್ಯ ತಲೆತಗ್ಗಿಸುವಂತೆ ಮಾಡಿದೆ ಎಂದು ಆರೋಪಿಸಿದರು.

ಆಟಗಾರರನ್ನು ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸುವ ಮುನ್ನ ಪೊಲೀಸ್ ಇಲಾಖೆಯೊಂದಿಗೆ ಹಾಗೂ ಗುಪ್ತಚರ ಇಲಾಖೆಯೊಂದಿಗೆ ಸರ್ಕಾರ ಚರ್ಚೆನಡೆಸಿ ಯಾವುದೇ ರೀತಿಯ ಅಹಿತಕರ ಘಟನೆಗಳು ಸಂಭವಿಸದಂತೆ ಮುನ್ನೆಚ್ಚರಿಕೆ ವಹಿಸಬೇಕಾಗಿತ್ತು ಆದರೆ ಈ ರಾಜ್ಯ ಸರ್ಕಾರದ ಪ್ರಮುಖರುಗಳು ಕ್ರಿಕೆಟ್ ಆಟಗಾರರೊಂದಿಗೆ ಸೆಲ್ಫಿ ತೆಗೆಸಿಕೊಳ್ಳುವಲ್ಲಿ ಅವರ ಕುಟುಂಬ ಸದಸ್ಯರುಗಳನ್ನು ಆಟಗಾರರಿಗೆ ಪರಿಚಯಿಸುವಲ್ಲಿ ಕಾಲ ಕಳೆದಿದ್ದು ಇವರ ಪಣಗಿಡಿತನ ಆಗಿದೆ ಎಂದು ನೇರವಾಗಿ ರಾಜ್ಯ ಸರ್ಕಾರದ ಆಡಳಿತ ಸ್ಥಾನದಲ್ಲಿರುವ ಪ್ರಮುಖರನ್ನು ತೀವ್ರ ತರಾಟೆಗೆ ತೆಗೆದುಕೊಂಡರು. ಕೆಲವು ವರ್ಷಗಳ ಹಿಂದೆ ಕನ್ನಡಿಗರ ಕಣ್ಮಣಿ ಪುನೀತ್ ರಾಜಕುಮಾರ್ ಅವರು ಮರಣ ಹೊಂದಿದಾಗ ಲಕ್ಷಾಂತರ ಮಂದಿ ಬೆಂಗಳೂರಿಗೆ ಆಗಮಿಸಿದ್ದರು ಆಗ ಅಂದಿನ ಸರ್ಕಾರ ಯಾವುದೇ ರೀತಿಯ ಅವುಗಳ ಸಂಭವಿಸಿದಂತೆ ಎಷ್ಟು ಚೆನ್ನಾಗಿ ಜನ ದಟ್ಟಣಿಯನ್ನು ಯಾವುದೇ ರೀತಿಯ ಅವುಗಳು ಸಂಭವಿಸದಂತೆ ಆಯೋಜಿಸಿತ್ತು ಎಂದು ನೆನಪು ಮಾಡಿಕೊಂಡರು. ಘಟನೆ ನಡೆದ ಸುದ್ದಿ ತಿಳಿದ ತಕ್ಷಣ ನಾನು ಗಾಯಲುಗಳಾಗಿ ಆಸ್ಪತ್ರೆಗೆ ದಾಖಲಾಗಿರುವ ರೋಗಿಗಳ ಯೋಗಕ್ಷಮ ವಿಚಾರಿಸಲು ಆಸ್ಪತ್ರೆಗಳಿಗೆ ಭೇಟಿ ನೀಡಿದ್ದೇನೆ ಅವರುಗಳು ಪಡುತ್ತಿರುವ ನೋವು ಮತ್ತು ವೇದನೆ ನನ್ನ ಕರುಳು ಹಿಂಡಿಸಿದೆ ಎಂದರು. ಒಬ್ಬನೇ ಮಗನನ್ನು ಹೊಂದಿದ್ದ ತಂದೆ ತಾಯಿ ಆತನ ಅಗಲಿಕೆಯ ದುಃಖವನ್ನು ತೋಡಿಕೊಂಡಿದ್ದು ನಿಜಕ್ಕೂ ಅತ್ಯಂತ ಕನಿಕರ ಹುಟ್ಟಿಸಿತು ಈ ಸಾವುಗಳಿಗೆ ನ್ಯಾಯ ಎಲ್ಲಿದೆ ಎಂದು ಪ್ರಶ್ನಿಸುತ್ತೇನೆ ಎಂದರು.



# ಬೀದಿನಾಯಿ ಹಾವಳಿ ಅನಾಹುತಗಳಿಗೆ ಜಿಲ್ಲಾಡಳಿತವೇ ನೇರಹೊಣೆ

• ಉದಯವಾಹಿನಿ, ಕೋಲಾರ

ನಗರದಲ್ಲಿ ಬೀದಿನಾಯಿಗಳ ಹಾವಳಿ ಮಿತಿ ಮೀರಿದ್ದು, ಶಾಲಾ ಮಕ್ಕಳು, ವೃದ್ದರು, ಬೀದಿ ವ್ಯಾಪಾರಿಗಳು, ಆತಂಕದಿಂದಲೇ ಓಡಾಡುವ ಪರಿಸ್ಥಿತಿ ಇದ್ದು, ಇದರ ತಡೆಗೆ ಅಗತ್ಯ ಕ್ರಮವಹಿಸದೇ ಮಕ್ಕಳ ಜೀವಕ್ಕೆ ಹಾನಿಯಾಗುವಂತಹ ದೊಡ್ಡಮಟ್ಟದ ಅವಘಡಗಳು ಸಂಭವಿಸಿದರೆ ಅದಕ್ಕೆ ಜಿಲ್ಲಾಡಳಿತ ಮತ್ತು ನಗರಸಭೆ ಆಡಳಿತವೇ ನೇರಹೊಣೆ ಎಂದು ನಗರಸಭಾ ಸದಸ್ಯ ಎಸ್.ಆರ್. ಮುರಳಿಗೌಡ ಎಚ್ಚರಿಸಿದರು.

ಇಲ್ಲಿನ ಜಯನಗರದ 5ನೇ ಕ್ರಾಸ್‌ನಲ್ಲಿ ನಾಗರೀಕರ ಸಮಸ್ಯೆ ಆಲಿಸುತ್ತಿದ್ದ ಸಂದರ್ಭದಲ್ಲಿ ಬೀದಿ ನಾಯಿಗಳು ಗುಂಪಿನಿಂದಾಗುತ್ತಿರುವ ತೊಂದರೆ ಕುರಿತು ನಾಗರೀಕರು ಗಮನಕ್ಕೆ ತಂದ ಸಂದರ್ಭದಲ್ಲಿ ಅವರು ಮಾತನಾಡುತ್ತಿದ್ದರು. ಬೀದಿ ನಾಯಿಗಳ ಹಾವಳಿ ಕುರಿತು ಜಿಲ್ಲಾಧಿಕಾರಿಗಳು, ರಾಜ್ಯ ಪೌರಾಡಳಿತ ನಿರ್ದೇಶಕರ ಗಮನಕ್ಕೆ ತಂದರೂ ಪ್ರಯೋಜನವಾಗಿಲ್ಲ, ನಾಯಿಗಳ ಸಂತಾನ ಹರಣ ಶಸ್ತ್ರಚಿಕಿತ್ಸೆ ನಡೆಸಲು ಅಗತ್ಯ ಕ್ರಿಯಾಯೋಜನೆ, ಟೆಂಡರ್ ಪ್ರಕ್ರಿಯೆ ಆರಂಭಿಸಲು ನಗರಸಭೆ ಆಡಳಿತದಿಂದ ಸಾಧ್ಯವಾಗಿಲ್ಲ ಎಂದು ವಿಷಾದಿಸಿದರು.

**ನಗರದಲ್ಲೇ 10 ಸಾವಿರ ನಾಯಿ:** ಕಳೆದ 2 ವರ್ಷಗಳ ಹಿಂದೆ ನಗರಸಭೆ ಪ್ರತಿ ಬೀದಿನಾಯಿಗೆ 1750 ರೂ.ನಂತೆ ಒಟ್ಟು 845 ನಾಯಿಗಳ ಸಂತಾನ ಹರಣ ಶಸ್ತ್ರಚಿಕಿತ್ಸೆ ಮಾಡಿಸಿರುವುದಾ ಹೇಳುತ್ತಾರೆ ನಂತರ ಈ ಕಾರ್ಯ ನಡೆದಿಲ್ಲ ಎಂದರು. ನಿಯಮಾ ನುಸಾರ ಸಂತಾನಹರಣ ಶಸ್ತ್ರಚಿಕಿತ್ಸೆಗೆಟೆಂಡರ್ ಕರೆದು ನಾಯಿಗಳಿಗಾಗಿ ತಾತ್ಕಾಲಿದ ಷೆಡ್ ನಿರ್ಮಿಸಿ, ಅವುಗಳಿಗೆ ಸಂತಾನಹರಣ ಶಸ್ತ್ರಚಿಕಿತ್ಸೆ ನಡೆಸಿದ ನಂತರ ಮೂರು ದಿನ ಅವುಗಳಿಗೆ ಊಟ ಹಾಕಿ ಆರೈಕೆ ಮಾಡಿ ನಂತರ ಅವು ಇದ್ದ ಜಾಗದಲ್ಲಿ ಬಿಡುವುದು ನಿಯಮವಾಗಿದೆ ಎಂದರು. ಕೋಲಾರ ನಗರದಲ್ಲೇ ಅತಿ ಹೆಚ್ಚು ನಾಯಿ ಕಡಿತದ ಪ್ರಕರಣ ವರದಿಯಾಗುತ್ತಿದೆ ಎಂಬುದನ್ನು ಇತ್ತೀಚೆಗೆ ಜಿಲ್ಲಾ ಶಸ್ತ್ರ ಚಿಕಿತ್ಸಕರೇ ತಿಳಿಸಿದ್ದಾರೆ. ಇಷ್ಟಾದರೂ ನಾಯಿಗಳ ಸಂತಾನಹರಣ ಮಾಡಿ ಸಂಖ್ಯೆ ಕಡಿಮೆ ಮಾಡುವ ಪ್ರಯತ್ನಕ್ಕೆ ನಗರಸಭೆ ಮುಂದಾಗುತ್ತಿಲ್ಲ ಎಂದರು.



ಉದಯವಾಹಿನಿ ಚಿತ್ರ

ನಾಗರೀಕರ ಆತಂಕಕ್ಕೆ ಕಾರಣ

ಇದೀಗ ನಾಯಿಗಳಿಗೆ ಸಂತಾನಹರಣ ಚಿಕಿತ್ಸೆ ನಡೆಸಲು ಪ್ರತಿ ನಾಯಿಗೆ ಕನಿಷ್ಟ 2 ಸಾವಿರ ರೂ ಅಗತ್ಯವಿದ್ದು, 10 ಸಾವಿರ ನಾಯಿಗಳಿಗೆ ಸಂತಾನಹರಣಕ್ಕೆ ಕನಿಷ್ಟ 2 ಕೋಟಿ ಬೇಕು. ಕೋಲಾರ ನಗರ ಸಭೆಯಲ್ಲಿ ಬರುವ ಆಧಾಯ ನಗರಸಭೆ ನಿರ್ವಹಣೆಗೆ ಸಾಕಾಗುತ್ತಿಲ್ಲವಾದ ಕಾರಣ ನಾಯಿಗಳನ್ನು ಹಿಡಿಯುವ ಮಾತು ಎಲ್ಲಿಯದು ಎಂದು ಆಕ್ರೋಷ ವ್ಯಕ್ತಪಡಿಸಿರುವ ಅವರು, 40 ಲಕ್ಷ ಆದಾಯ ಬಂದರೆ 80 ಲಕ್ಷ ಖರ್ಚು ಇದೆ ಎಂದು ತಿಳಿಸಿದ್ದಾರೆ. ಈ ಸಂಬಂಧ ಜಿಲ್ಲಾಧಿಕಾರಿಗಳು, ರಾಜ್ಯ ಪೌರಾಡಳಿತ ನಿರ್ದೇಶಕರಿಗೂ ಮನವಿ ಮಾಡಲಾಗಿದೆ, ಜಿಲ್ಲಾ ನಗರಾಭಿವೃದ್ದಿ ಕೋಶದ ನಿರ್ದೇಶಕರ ಗಮನಕ್ಕೂ ತರಲಾಗಿದೆ ಎಂದ ಅವರು, ಸಂತಾನಹರಣಕ್ಕೆ ನಗರಸಭೆಯಲ್ಲಿ ಹಣಕಾಸಿನ ಕೊರತೆ ಕಾಡುತ್ತಿದೆ ಎಂದರು.

ನಾಯಿಗಳ ತಡೆಗೆ ಸರ್ಕಾರ ಅಥವಾ ಜಿಲ್ಲಾಡಳಿತದ ಹಂತದಲ್ಲೇ ಒಂದು ನಿರ್ಧಾರವಾಗಬೇಕು, ಅದಕ್ಕೆ ಅನುದಾನ ಒದಗಿಸಬೇಕು ಎಂದು ತಿಳಿಸಿದ ಅವರು, ಮಾಂಸ ಮಾರಾಟ ಅಂಗಡಿಗಳ ಮುಂದೆ ಮಾತ್ರ ಗುಂಪು ಗುಂಪಾಗಿ ಇರುತ್ತಿದ್ದ ಬೀದಿ ನಾಯಿಗಳು ಈಗ ನಗರದ ಎಲ್ಲಾ ಪ್ರತಿಷ್ಟಿತ ಬಡಾವಣೆಗಳಲ್ಲೂ ಕಂಡು ಬರುತ್ತಿದ್ದು, ನಾಗರೀಕರ ಆತಂಕಕ್ಕೆ ಕಾರಣವಾಗಿದೆ ಎಂದರು.

# ಶಾಂತಿ ಸೌಹಾರ್ದತೆಯಿಂದ ಬಕ್ರೀದ್ ಹಬ್ಬ ಆಚರಣೆ

• ಉದಯವಾಹಿನಿ, ಚಾಮರಾಜನಗರ

ಜಿಲ್ಲೆಯಲ್ಲಿ ಮುಂಬರಲಿರುವ ಬಕ್ರೀದ್ ಹಬ್ಬವನ್ನು ಈ ಹಿಂದಿನಂತೆಯೇ ಶಾಂತಿ ಸೌಹಾರ್ದತೆಯಿಂದ ಆಚರಿಸುವಂತೆ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದರು. ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಗುರುವಾರ ಬಕ್ರೀದ್ ಹಬ್ಬದ ಹಿನ್ನೆಲೆಯಲ್ಲಿ ನಡೆದ ಜಿಲ್ಲಾಮಟ್ಟದ ಸೌಹಾರ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಈ ಹಿಂದಿನಿಂದಲೂ ಸಾಮರಸ್ಯದಿಂದ ಎಲ್ಲಾ ಹಬ್ಬಗಳನ್ನು ಆಚರಿಸಿಕೊಂಡು ಬರಲಾಗುತ್ತಿದೆ. ಶಾಂತಿ ಸಹಬಾಳ್ವೆಯಿಮದ ಜಿಲ್ಲೆಯ ಜನರು ಬದುಕುತ್ತಿದ್ದಾರೆ. ಈ ಬಾರಿಯೂ ಸಹ ಈ ಹಿಂದೆ ನಡೆದುಕೊಂಡ ಬಂದ ಮಾದರಿಯಲ್ಲಿಯೇ ಶಾಂತಿ ಸೌಹಾರ್ದತೆಯಿಂದ ಬಕ್ರೀದ್ ಹಬ್ಬದ ಆಚರಣೆಯಾಗಲಿ. ಇದಕ್ಕಾಗಿ ಸರ್ವರು ಸಹಕರಿಸಲಿದ್ದಾರೆ ಎಂದರು. ಹಬ್ಬದ ಸಂದರ್ಭದಲ್ಲಿ ಕುಡಿಯುವ ನೀರು, ಸ್ವಚ್ಚತೆ, ತ್ಯಾಜ್ಯಗಳ ನಿರ್ವಹಣೆ, ನಿರಂತರ ವಿದ್ಯುತ್, ಇನ್ನಿತರ ಅಗತ್ಯ ಸೌಕರ್ಯಗಳನ್ನು ಒದಗಿಸಲಾಗುತ್ತದೆ. ಒಳ್ಳೆಯ ವಾತಾವರಣದಲ್ಲಿ ಹಬ್ಬ ಆಚರಣೆ ಯಾಗಲಿ. ಸಂತೋಷ ಸಂಭ್ರಮದಿಂದ ಹಬ್ಬ ನಡೆಯಲಿ. ಮುಖಂಡರು ಎಲ್ಲಾ ಸಂದರ್ಭಗಳಲ್ಲಿಯೂ ಪರಸ್ಪರ ಪ್ರೀತಿ ವಿಶ್ವಾಸದಿಂದ ನಡೆದುಕೊಂಡು ಬಂದಿದ್ದಾರೆ. ಇದು ಹೀಗೆಯೇ ಮುಂದುವರೆಯಲೆಂದು ಜಿಲ್ಲಾಧಿಕಾರಿಯವರು ಹೇಳಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತ ಅವರು ಮಾತನಾಡಿ ಜಿಲ್ಲೆಯಲ್ಲಿ ಎಲ್ಲರು ಸಹೋದರರಂತೆ ಇದ್ದಾರೆ. ಶಾಂತಿಯುತವಾಗಿ ಹಬ್ಬವನ್ನು ಆಚರಿಸಿಕೊಂಡು ಬರಲಾಗುತ್ತಿದೆ. ಇದೇ ಮಾದರಿಯಲ್ಲಿ ಈ ಬಾರಿಯೂ ಬಕ್ರೀದ್ ಹಬ್ಬ ಸಾಂಗವಾಗಿ ನಡೆಯಲಿ ಎಂದು ತಿಳಿಸಿದರು.



ಉದಯವಾಹಿನಿ ಚಿತ್ರ

**ಹಬ್ಬದ ಸಂದರ್ಭದಲ್ಲಿ ಕುಡಿಯುವ ನೀರು ಸಮರ್ಪಕವಾಗಿ ಒದಗಿಸಿ. ಸ್ವಚ್ಚತೆಗೆ ವಿಶೇಷ ಗಮನಹರಿಸಿ. ತ್ಯಾಜ್ಯ ವಿಲೇವಾರಿ ಸಕಾಲದಲ್ಲಿ ಪೂರ್ಣವಾಗಬೇಕು. ಅಧಿಕಾರಿಗಳು ಕೇಂದ್ರ ಸ್ಥಾನದಲ್ಲಿದ್ದು ಹಬ್ಬದ ವೇಳೆ ಒದಗಿಸಬೇಕಿರುವ ಸೌಲಭ್ಯಗಳು, ಸೇವೆಗೆ ಯಾವುದೇ ವ್ಯತ್ಯಯವಾಗದಂತೆ ನೋಡಿಕೊಳ್ಳಬೇಕು**

**-ಶಿಲ್ಪಾ ನಾಗ್, ಜಿಲ್ಲಾಧಿಕಾರಿ**

# ಇ-ಖಾತೆ ವಿಳಂಭ ದೋರಣೆ ರೈತ ಸಂಘ ಆಕ್ರೋಶ

• ಉದಯವಾಹಿನಿ, ಬಂಗಾರಪೇಟೆ

ಪುರಸಭೆಗೆ ಸಂಬಂಧಿಸಿದಂತೆ, ಮ್ಯಾನುವೆಲ್ ಖಾತೆಗಳಲ್ಲಿ ಹಾಗೂ ಇ-ಸ್ವತ್ತು ಖಾತೆಗಳಲ್ಲಿ ಭಾರಿ ಅಕ್ರಮ ವಹಿವಾಟು ನಡೆಯುತ್ತಿರುತ್ತದೆ. ಪ್ರಾಮಾಣಿಕವಾಗಿ ನೋಂದಣಿಯಾದ ಸ್ವತ್ತುಗಳಿಗೆ ಇ-ಖಾತೆಗಳನ್ನು ನೀಡುವಲ್ಲಿ ವರ್ಷಾನುಗಟ್ಟಲೆ ವಿಳಂಭದೋರಣೆ ಮಾಡುತ್ತಿರುವುದು ಹಾಗೂ ವರ್ಷಾನುಗಟ್ಟಲೆ ಇದ್ದ ಕಡತಗಳನ್ನು ಕಳೆದುಹಾಕಿ ಮತ್ತೆ ನೋಂದಣಿ ಪತ್ರದ ದಾಖಲೆಗಳನ್ನು ಮರು ನೀಡುವಂತೆ ಸಿಬ್ಬಂದಿಗಳು ಹೇಳುತ್ತಿರುವುದು ಸಮಂಜಸವಲ್ಲ ಎಂದು ಜಿಲ್ಲಾಧ್ಯಕ್ಷ ಟಿ.ಎನ್.ರಾಮೇಗೌಡ ಆಕ್ರೋಶ ವ್ಯಕ್ತಪಡಿಸಿ, ಮುಖ್ಯಾಧಿಕಾರಿಗೆ ಮನವಿ ಸಲ್ಲಿಸಿದರು.

ಪಟ್ಟಣದ ಪುರಸಭೆ ಕಛೇರಿ ಮುಂಭಾಗ ಕರ್ನಾಟಕ ರಾಜ್ಯ ರೈತಸಂಘ ಹಾಗೂ ಹಸಿರು ಸೇವೆ ವತಿಯಿಂದ ಪ್ರತಿಭಟನೆ ಹಮ್ಮಿಕೊಂಡು ಮಾತನಾಡಿದ ಅವರು, ರೈತರು ಹಾಗೂ ಸಾರ್ವಜನಿಕರು ಪುರಸಭೆಯಲ್ಲಿ ಇ-ಸ್ವತ್ತು ಪಡೆಯಲು ಅರ್ಜಿ ನೀಡಿದಾಗ ಆ ವರ್ಷದ ಕಂದಾಯ ಪಾವತಿಸಬೇಕು, ಹಾಗೆ ಕಡತಗಳು ಕಳೆದು ಹಾಕಿದ ನಂತರ ಮತ್ತೆ, ಅರ್ಜಿ ನೀಡಿದಾಗ ಮತ್ತೊಂದು ಭಾರಿ ಕಂದಾಯ ಕಟ್ಟಬೇಕು, ಹೀಗೆ ಪ್ರತಿವರ್ಷದಂತೆ 3-4 ವರ್ಷ ಕಂದಾಯ ಪಾವತಿಸಿಕೊಂಡು ಇ-ಸ್ವತ್ತು ಖಾತೆ ಮಾಡಿಕೊಡದೆ ಮೀನಾಮೇಷ ಎಣಿಸುತ್ತಿದೆ.



ಉದಯವಾಹಿನಿ ಚಿತ್ರ

### ಸಾಮಾನ್ಯ ವರ್ಗದ ಜನತೆ ಅಲೆದಾಡುವ ಪರಿಸ್ಥಿತಿ

**ಭೂಗಳ್ಳರು, ರಿಯಲ್ ಎಸ್ಟೇಟ್ ಉದ್ಯಮಿಗಳಿಗೆ ಕೆಲಸಗಳು ಬೇಗ ಬೇಗ ನಡೆಯುತ್ತಿದ್ದು, ಸಾಮಾನ್ಯ ವರ್ಗದ ಜನತೆ ಅಲೆದಾಡುವ ಪರಿಸ್ಥಿತಿ ಎದುರಾಗಿದೆ. ಅಷ್ಟೇ ಅಲ್ಲದೆ ಪುರಸಭೆ ವ್ಯಾಪ್ತಿಗೆ ಬರುವ ಎಲ್ಲಾ ರಾಜಕಾಲುವೆಗಳಲ್ಲಿರುವ ಹೂಳು ತೆಗೆದಿರುವುದಿಲ್ಲ ಹಾಗೂ ಒತ್ತುವರಿದಾರರಿಂದ ತೆರುವು ಕಾರ್ಯ ನಡೆದಿರುವುದಿಲ್ಲ. ಸರ್ಕಾರಿ ಜಾಗಗಳನ್ನು ಅಕ್ರಮವಾಗಿ ಪ್ರವೇಶ ಮಾಡಿರುವವರ ವಿರುದ್ದ ಸೂಕ್ತ ಕಾನೂನು ಕ್ರಮ ಕೈಗೊಂಡಿರುವುದಿಲ್ಲ, ಎಲ್ಲಾ ವಾರ್ಡ್‌ಗಳಲ್ಲಿ ಸ್ವಚ್ಚತೆಯನ್ನು ಕಾಪಾಡುವುದರೊಂದಿಗೆ ರಸ್ತೆ, ಚರಂಡಿಗಳನ್ನು ಸರಿಪಡಿಸಬೇಕು.**

ಇದರಿಂದ ಸಾರ್ವಜನಿಕರಿಗೆ ತುಂಬಾ ತೊಂದರೆ ಉಂಟಾಗಿರುತ್ತದೆ. ಇಂತಹ ಘಟನೆಗಳು ಪ್ರತಿನಿತ್ಯ ಎದುರಾಗುತ್ತಿದ್ದು, ಈ ಬಗ್ಗೆ ಮುಖ್ಯಾಧಿಕಾರಿಗಳು ಯಾವುದೇ ಕ್ರಮ ಕೈಗೊಂಡಿರುವುದಿಲ್ಲ. ಪಿಐಡಿ ನಂಬರ್‌ಗಳನ್ನು ಇನ್ನೊಂದು ಬೇರೆ ಯಾರದ್ದೋ ಸ್ವತ್ತುಗಳಿಗೆ ನೊಂದಣಿ ಮಾಡಿ ಸಾರ್ವಜನಿಕರಿಂದ ಹಣ ಪೀಕುತ್ತಿರುವುದು ಕಾನೂನು ಬಾಹಿರ ಎಂದು ತಿಳಿದಿದ್ದರೂ ಒಂದೇ ಪಿಐಡಿ ನಂಬರ್ ಮತ್ತೊಬ್ಬರಿಗೆ ನೀಡುತ್ತಿರುವುದರ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಬೇಕು. ಈ ಎಲ್ಲಾ ಸಮಸ್ಯೆಯನ್ನು ಒಂದು ವಾರದೊಳಗೆ ಸರಿಪಡಿಸದಿದ್ದಲ್ಲಿ ಪುರಸಭೆ ಮುಂಭಾಗ ಉಗ್ರ ಪ್ರತಿಭಟನೆ ಹಮ್ಮಿಕೊಂಡು ಸರ್ಕಾರದ ಗಮನಕ್ಕೆ ತರಬಯಸುದಾಗಿ ಎಚ್ಚರಿಸಿದರು.


# ರೈತರು ಬದುಕಿದ್ದರೆ ಹೋರಾಟದಲ್ಲಿ ಭಾಗವಹಿಸಲಿ: ಶಾಸಕ

• ಉದಯವಾಹಿನಿ, ಮಾಗಡಿ

ನಮ್ಮ ನೀರು ನಮ್ಮ ಹಕ್ಕು ವಿಚಾರವಾಗಿ ಜೂನ್ 5ರಂದು ಮರೂರು ಹ್ಯಾಂಡ್ ಪೋಸ್ಟ್‌ನಲ್ಲಿ ರಸ್ತೆ ತಡೆದು ನಮ್ಮ ಶಕ್ತಿ ಪ್ರದರ್ಶನ ಮಾಡುತ್ತೇನೆ. ತಾಲ್ಲೂಕಿನಲ್ಲಿ ರೈತರು ಬದುಕಿದ್ದರೆ ಹೋರಾಟದಲ್ಲಿ ಭಾಗವಹಿಸುತ್ತಾರೆ ಎಂದು ಶಾಸಕ ಎಚ್.ಸಿ. ಬಾಲಕೃಷ್ಣ ತೀಕ್ಷ್ಣವಾಗಿ ನುಡಿದರು. ಪಟ್ಟಣದ ತಿರುಮಲೆ ಗ್ರಾಮದಲ್ಲಿ ಹಲವು ಕಾಮಗಾರಿಗೆ ಗುದ್ದಲಿ ಪೂಜೆ ನೆರವೇರಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಾಲ್ಲೂಕಿಗೆ ಹೇಮಾವತಿ ನೀರು ತರಲು ರಸ್ತೆ ತಡೆ ಹಮ್ಮಿಕೊಂಡಿದ್ದೇವೆ.

ಇದು ಪಕ್ಷದ ಕಾರ್ಯಕ್ರಮವೂ ಅಲ್ಲ, ನನ್ನ ಮಗಳ ಮದುವೆಯೂ ಅಲ್ಲ. ಸಾರ್ವಜನಿಕರ ಹಿತದೃಷ್ಟಿಯಿಂದ ಪ್ರತಿಭಟನೆ ಹಮ್ಮಿಕೊಂಡಿದ್ದೇವೆ. ತಾಲ್ಲೂಕಿನಲ್ಲಿ ರೈತರು ಜೀವಂತವಾಗಿದ್ದರೆ ಪ್ರತಿಭಟನೆಯಲ್ಲಿ ಭಾಗವಹಿಸುತ್ತಾರೆ ಎಂದರು. ತುಮಕೂರಿನವರು ಅನವಶ್ಯಕವಾಗಿ ನಮ್ಮೊಂದಿಗೆ ಜಗಳವಾಡುವುದು ಬೇಡ. ನಮಗೆ ಹಂಚಿಕೆಯಾಗಿರುವ ನೀರನ್ನು ನಮಗೆ ಕೊಡಲಿ. ಲಿಂಕ್ ಕೆನಾಲ್ ಕಾಮಗಾರಿ ನಡೆಸಲು ಅವಕಾಶ ಮಾಡಿಕೊಡಬೇಕೆಂದು ಮನವಿ ಮಾಡಿದರು.

**ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ:** ಪಟ್ಟಣದ ನಾಲ್ಕನೇ ವಾರ್ಡಿನ ತಿರುಮಲೆಯಲ್ಲಿ ಅಂಗನವಾಡಿ ಕೇಂದ್ರ ಕಟ್ಟಡ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ. ಕೊಳಚೆ ನಿರ್ಮೂಲನ ಮಂಡಳಿ ವತಿಯಿಂದ 1.20 ಕೋಟಿ ವೆಚ್ಚದಲ್ಲಿ ರಸ್ತೆ ಮತ್ತು ಚರಂಡಿ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ. ಮುಖ್ಯಮಂತ್ರಿ ವಿಶೇಷ ಅನುದಾನದಡಿ 50ಲಕ್ಷ ವೆಚ್ಚದಲ್ಲಿ ರಸ್ತೆ ಮತ್ತು ಚರಂಡಿ ಕಾಮಗಾರಿಗೆ ಭೂಮಿ ಪೂಜೆ. ಎರಡನೇ ವಾರ್ಡಿನ ತಿರುಮಲೆಯಲ್ಲಿ ಪ್ರಗತಿಪಥ ಯೋಜನೆಯಡಿ 1 ಕೋಟಿ ವೆಚ್ಚದಲ್ಲಿ ರಸ್ತೆ ಮತ್ತು ಚರಂಡಿ ಕಾಮಗಾರಿ, ಆರನೇ ವಾರ್ಡಿನ ಹೊಸಪೇಟೆ ವೃತ್ತದ ಬಳಿ ಕೆ-ಶಿಪ್ ವತಿಯಿಂದ ನಿರ್ಮಿಸಲಾಗುತ್ತಿರುವ ಸಾರ್ವಜನಿಕ ಶೌಚಾಲಯ ಕಟ್ಟಡ ಕಾಮಗಾರಿಗೆ ಭೂಮಿ ಪೂಜೆ. ಹೊಸಪೇಟೆ ವೃತ್ತದ ಬಳಿ ಆಂಜನೇಯ ಸ್ವಾಮಿ ದೇವಸ್ಥಾನ ಕಟ್ಟಡ ಭೂಮಿ ಪೂಜೆಯನ್ನು ಶಾಸಕ ಎಚ್.ಸಿ.ಬಾಲಕೃಷ್ಣ ಹಾಗೂ ಪುರಸಭಾ ಸದಸ್ಯರು ನೆರವೇರಿಸಿದರು.



ಉದಯವಾಹಿನಿ ಚಿತ್ರ

# ಪರಿಸರ ಉಳಿವಿಗೆ ಗಿಡ, ಮರ ಬೆಳೆಸಿ

• ಉದಯವಾಹಿನಿ, ಬಾಗೇಪಲ್ಲಿ


ಸರ್ಕಾರಿ ಕಚೇರಿಗಳು, ಮನೆ, ಸುತ್ತಮುತ್ತಲಿನ ಖಾಲಿ ಜಾಗಗಳಲ್ಲಿ ಗಿಡ, ಮರ ಬೆಳೆಸಬೇಕು ಎಂದು ಜೆಎಂಎಫ್‌ಸಿ ಸಿವಿಲ್ ನ್ಯಾಯಾಲಯದ ನ್ಯಾಯಾಧೀಶ ಡಿ.ಕೆ.ಮಂಜುನಾಥಾಚಾರಿ ತಿಳಿಸಿದರು. ಸರ್ಕಾರಿ ಬಾಲಕರ ಪ್ರೌಢಶಾಲೆ, ಸರ್ಕಾರಿ ಬಾಲಕರ ಪಿಯು ಕಾಲೇಜಿನ ಆಟದ ಮೈದಾನದಲ್ಲಿ ತಾಲ್ಲೂಕು ಕಾನೂನು ಸೇವಾ ಸಮಿತಿ, ವಕೀಲರ ಸಂಘ, ಶಿಕ್ಷಣ, ಅರಣ್ಯ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಗುರುವಾರ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಗಿಡ ನೆಡುವ ಕಾರ್ಯಕ್ರಮ, ಪರಿಸರದ ಜಾಗೃತಿ ಜಾಥಾಗೆ ಚಾಲನೆ ನೀಡಿ ಮಾತನಾಡಿದರು. ಪ್ರತಿಯೊಬ್ಬರು ಗಿಡ ಮರಗಳನ್ನು ಉಳಿಸಿ, ಬೆಳೆಸಬೇಕು. ಉತ್ತಮ ಪರಿಸರದಿಂದ ಆರೋಗ್ಯ ವೃದ್ಧಿಯಾಗುತ್ತದೆ. ಪರಿಸರ, ಸ್ವಚ್ಛತೆಯ ಕಾಳಜಿ ಬಗ್ಗೆ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಬೇಕು ಎಂದರು. ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿ ಎನ್.ವೆಂಕಟೇಶಪ್ಪ ಮಾತನಾಡಿ, ತಾಲ್ಲೂಕಿನ ಸರ್ಕಾರಿ ಶಾಲೆಗಳ ಶಿಕ್ಷಕರು ಶಾಲಾವರಣ, ಸುತ್ತಮುತ್ತಲಿನಲ್ಲಿ ಗಿಡ, ಮರಗಳನ್ನು ಬೆಳೆಸಿದ್ದಾರೆ. ಮಕ್ಕಳಿಗೆ ಪರಿಸರದಿಂದ ಆಗುವ ಅನುಕೂಲಗಳ ಬಗ್ಗೆ ತಿಳಿಸಿಕೊಡುತ್ತಾರೆ. ಮಕ್ಕಳಲ್ಲಿ ಸ್ವಚ್ಛತೆ, ಪರಿಸರದ ಕಾಳಜಿ ಬೆಳೆಸಿದ್ದಾರೆ. ಪರಿಸರ ದಿನಾಚರಣೆ ಅಂಗವಾಗಿ ಪಟ್ಟಣದ ಸರ್ಕಾರಿ ಶಾಲೆಗಳು ಪರಿಸರ, ಸ್ವಚ್ಛತೆ ಬಗ್ಗೆ ಅರಿವು ಮೂಡಿಸಲು ಭಿತ್ತಿಪತ್ರಗಳನ್ನು ಹಿಡಿದು ಜಾಥಾ ಮಾಡಿದ್ದಾರೆ ಎಂದರು.

## ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ವಿರುದ್ಧ 100 ಕೋಟಿ ರೂ. ಮಾನಹಾನಿ ಕೇಸ್

# ಯತ್ನಾಳ್ ಅವರದು ಕೊಳಕು ಬಾಯಿ: ಡಿಕೆ ಶಿವಕುಮಾರ್

• ಉದಯವಾಹಿನಿ, ರಾಮನಗರ

ಇ.ಡಿ, ಸಿಬಿಐ, ಸೇರಿದಂತೆ ಮತ್ತಿತರ ತನಿಖಾ ಸಂಸ್ಥೆಗಳ ಕುಣಿಕೆಯಿಂದ ತಪ್ಪಿಸಿಕೊಳ್ಳಲು ಕೇಂದ್ರ ಬಿಜೆಪಿ ಮುಖಂಡರನ್ನು ಸಂಪರ್ಕಿಸಿದ್ದೇನೆ ಎಂದು ಆರೋಪಿಸಿರುವ ಶಾಸಕ ಬಸನಗೌಡ ಯತ್ನಾಳ್ ವಿರುದ್ಧ 100 ಕೋಟಿ ರೂ. ಮಾನಹಾನಿ ಪ್ರಕರಣ ದಾಖಲಿಸಲಾಗಿದೆ ಎಂದು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹೇಳಿದರು. ಕನಕಪುರ ಸಿವಿಲ್ ನ್ಯಾಯಾಧೀಶರ ಎದುರು ವಿಚಾರಣೆಗೆ ಹಾಜರಾಗಿ ನಂತರ ಮಾಧ್ಯಮಗಳ ಜತೆ ಅವರು ಮಾತನಾಡಿದರು. ಯತ್ನಾಳ್ ಸುಳ್ಳು ಆರೋಪದ ಮೂಲಕ ಕಾರ್ಯಕರ್ತರಲ್ಲಿಗೊಂದಲ ಮೂಡಿಸಿ ನನ್ನ ಮಾನಹಾನಿ ಮಾಡಿದ್ದಾರೆ ಎಂದು ಹೇಳಿದರು.



ಈ ಹಿಂದೆ ಯತ್ನಾಳ್ ಅವರು ಮಾಡಿದ್ದ ಆರೋಪದ ವರದಿ ವಿಜಯ ಕರ್ನಾಟಕದಲ್ಲಿಪ್ರ ಕಟವಾಗಿತ್ತು. ಆ ವರದಿಯನ್ನು ವಿಚಾರಣೆ ಹಂತದಲ್ಲಿಪರಿಗಣೆಗೆ ತೆಗೆದುಕೊಂಡ ನ್ಯಾಯಾಧೀಶರು ಉಳಿದ ಪತ್ರಿಕೆಗಳ ಪರಿಶೀಲನೆಯನ್ನೂ ನಡೆಸಿದರು. ಈ ಹಿಂದೆ ಖಾಸಗಿ ಸುದ್ದಿ ಸಂಸ್ಥೆ ವಿರುದ್ಧ ಮಾನಹಾನಿ ಪ್ರಕರಣ ದಾಖಲಿಸಿದ್ದೆ. ಆ ಸಂಸ್ಥೆ ನಮ್ಮ ಬಳಿ ಕೆಲ ಒಪ್ಪಂದ ಮಾಡಿಕೊಂಡ ನಂತರ ಅದನ್ನು ಹಿಂತೆಗೆಯಲಾಯಿತು. ನಂತರ ಯತ್ನಾಳ್ ವಿರುದ್ಧ ಮಾನಹಾನಿ ಪ್ರಕರಣ ದಾಖಲಿಸಲಾಗಿದೆ. ಕನಕಪುರದ ಜನರದ್ದು ಯಾವುದೇ ರಾಜಿಗೆ ಒಪ್ಪುವ ರಕ್ತ ಅಲ್ಲ. ಅದನ್ನು ನಾನು ಈಗಾಗಲೇ ಅನುಭವಿಸಿ ಆಗಿದೆ. ನೀವು ನನಗೆ ಮತ ಹಾಕಿದ್ದೀರಿ. ನಾನು ಕನಕಪುರ ಜನರ ಭಾವನೆಗೆ ಧಕ್ಕೆ ಮಾಡುವುದಿಲ್ಲ ಎಂದರು.

### ನ್ಯಾಯಾಲಯ ಒಪ್ಪದ ಕಾರಣ ಇಲ್ಲೇ ವಿಚಾರಣೆ

**100 ಕೋಟಿ ರೂ. ಮಾನಹಾನಿ ಪ್ರಕರಣದಲ್ಲಿ ಸುಮಾರು 1 ಕೋಟಿಗೂ ಹೆಚ್ಚು ಹಣವನ್ನು ನ್ಯಾಯಾಲಯದಲ್ಲಿ ಡೆಪಾಸಿಟ್ ಮಾಡಿ ಪ್ರಕರಣದ ವಿಚಾರಣೆ ನಿಗದಿಯಾಗಿತ್ತು. ಈ ಹಿಂದೆ ಯತ್ನಾಳ್ ಇಲ್ಲಿನ ಪ್ರಕರಣವನ್ನು ಬೆಂಗಳೂರಿಗೆ ವರ್ಗಾವಣೆ ಕೋರಿದ್ದರು. ಅದಕ್ಕೆ ನ್ಯಾಯಾಲಯ ಒಪ್ಪದ ಕಾರಣ ಇಲ್ಲೇ ವಿಚಾರಣೆ ನಡೆಯಲಿದೆ ಎಂದರು.**

ಕಾಲ್ತುಳಿತದ ಸಾವುಗಳಿಗೆ ಸರ್ಕಾರವೇ ಹೊಣೆ ಎಂಬ ವಿರೋಧ ಪಕ್ಷಗಳ ಟೀಕೆ ಬಗ್ಗೆ ಕೇಳಿದಾಗ, ಬೆಳಗ್ಗೆ ವಿಮಾನ ನಿಲ್ದಾಣದಿಂದಲೇ ಮೆರವಣಿಗೆ ಮಾಡಲು ಸರ್ಕಾರಕ್ಕೆ ಮನವಿ ಮಾಡಲಾಗಿತ್ತು. ಆದರೆ ತೆರೆದ ವಾಹನದಲ್ಲಿ ಮೆರವಣಿಗೆಗೆ ಅವಕಾಶ ನೀಡಬಾರದು ಎಂದು ನಮ್ಮ ಪೊಲೀಸ್ ಅಧಿಕಾರಿಗಳು ನಮಗೆ ಸಲಹೆ ನೀಡಿದರು. ಈ ತೀರ್ಮಾನವನ್ನು ಖಂಡಿಸಿದ್ದ ಬಿಜೆಪಿ, ಪರಮೇಶ್ವರ್ ಅವರನ್ನು ಅಸಮರ್ಥ ಗೃಹಮಂತ್ರಿ ಎಂದು ಕರೆದು ಮುಂಜಾಗೃತಾ ಕ್ರಮವಾಗಿ ಪೊಲೀಸರು ಕೈಗೊಂಡ ಕ್ರಮವನ್ನು ಎಕ್ಸ್ ಖಾತೆಯಲ್ಲಿ ಟೀಕಿಸಿತ್ತು ಎಂದು ತಿಳಿಸಿದರು.

### ಬಿಜೆಪಿ ಹೆಣದ ಮೇಲೆ ರಾಜಕೀಯ

**ಬಿಜೆಪಿ ಹೆಣದ ಮೇಲೆ ರಾಜಕೀಯ ಮಾಡುತ್ತಿದೆ. ಪೊಲೀಸರು ಮುಂಜಾಗೃತಾ ಕ್ರಮವಾಗಿ ತೆರೆದ ವಾಹನ ಮೆರವಣಿಗೆಯನ್ನು ರದ್ದುಗೊಳಿಸಿದ ನಿರ್ಧಾರವನ್ನು ಇದೇ ವಿರೋಧ ಪಕ್ಷಗಳು ಟೀಕೆ ಮಾಡಿದ್ದವು. ಈಗ ಸರ್ಕಾರದ ಮೇಲೆ ಆರೋಪ ಮಾಡುತ್ತಿವೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು. ಚಿನ್ನಸ್ವಾಮಿ ಕ್ರಿಕೆಟ್ ಸ್ಟೇಡಿಯಂ ಬಳಿ ಕಾಲ್ತುಳಿತ ಸಂಬಂಧ ಸಿಎಂ ಗೃಹ ಕಚೇರಿ ಕೃಷ್ಣಾ ಆವರಣದಲ್ಲಿ ಡಿಸಿಎಂ ಡಿ ಕೆ ಶಿವಕುಮಾರ್ ಅವರು ಮಾಧ್ಯಮಗಳ ಪ್ರಶ್ನೆಗಳಿಗೆ ರಾತ್ರಿ ಪ್ರತಿಕ್ರಿಯೆ ನೀಡಿದರು.**

## ಮಿನಿ ನ್ಯೂಸ್

### ಲಿಂಕ್ ಕೆನಾಲ್‌ಗೆ ಬಿಜೆಪಿ ವಿರೋಧವಿಲ್ಲ

• ಉದಯವಾಹಿನಿ, ಕುಣಿಗಲ್

ಲಿಂಕ್ ಕೆನಾಲ್‌ಗೆ ತಾಲ್ಲೂಕು ಬಿಜೆಪಿ ವಿರೋಧವಿಲ್ಲ, ಪರವಾಗಿದೆ. ಆದರೆ ಹೇಮಾವತಿ ನೀರನ್ನು ಮಾಗಡಿಗೆ ತೆಗೆದುಕೊಂಡು ಹೋಗದಿರುವ ಬಗ್ಗೆ ಸರ್ಕಾರದಿಂದ ಆದೇಶ ಹೊರಡಿಸಿ ಎಂದು ಬಿಜೆಪಿ ಮುಖಂಡ ಡಿ.ಕೃಷ್ಣಕುಮಾರ್ ಆಗ್ರಹಿಸಿದರು. ಪಟ್ಟಣದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಲಿಂಕ್ ಕೆನಾಲ್‌ಗೆ ತಾಲ್ಲೂಕು ಬಿಜೆಪಿ ಮುಖಂಡರ ವಿರೋಧವಿದೆ ಎಂದು ಶಾಸಕ ಡಾ.ರಂಗನಾಥ್ ಆರೋಪಿಸುತ್ತಿದ್ದಾರೆ. ಒಂದೆಡೆ ಹೇಮಾವತಿ ನೀರು ಕುಣಿಗಲ್ ತಾಲ್ಲೂಕಿಗೆ ಮಾತ್ರ ಎಂದು ಹೇಳುವ ಶಾಸಕ ಮತ್ತೊಂದೆಡೆ ಹೆಚ್ಚು ನೀರು ಬಂದಾಗ ಮಾಗಡಿಗೆ ಹರಿಸುವುದರಲ್ಲಿ ತಪ್ಪೇನು ಎಂದು ಹೇಳಿ ಗೊಂದಲ ಸೃಷ್ಟಿಸಿದ್ದಾರೆ ಎಂದರು. ಲಿಂಕ್ ಕೆನಾಲ್ ಯೋಜನೆಗೆ 615 ಕೋಟಿ ಮಂಜೂರಾತಿ ನೀಡಿದ್ದು, ಅಂದಿನ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ. ಆದರೆ ಜಲಸಂಪನ್ಮೂಲ ಸಚಿವ ಡಿ.ಕೆ.ಶಿವಕುಮಾರ್, ಮಾಜಿ ಸಂಸದ ಡಿ.ಕೆ. ಸುರೇಶ್ ಮತ್ತು ಶಾಸಕ ಡಾ.ರಂಗನಾಥ್ ಅವರ ಸಾಧನೆ ಅದರ ವೆಚ್ಚವನ್ನು 990 ಕೋಟಿಗೆ ಏರಿಸಿದ್ದಷ್ಟೆ ಎಂದು ಟೀಕಿಸಿದರು. ಶಾಸಕ ರಂಗನಾಥ್ ಅಧಿಕಾರಕ್ಕೇರಿ 8ನೇ ವರ್ಷವಾಗಿದೆ. ಮೂಲ ಯೋಜನೆಯಂತೆ 240 ಕಿಮೀ ವರೆಗೆ ನಾಲಾ ಕಾಮಗಾರಿ ಪೂರ್ಣಗೊಳಿಸಿ ಹೇಮಾವತಿ ನೀರು ಹರಿಸಲು ಪ್ರಯತ್ನವೇ ಪಟ್ಟಿಲ್ಲ. ನಾಲೆಗಾಗಿ ಭೂಮಿ ನೀಡಿದ ತಾಲ್ಲೂಕಿನ ರೈತರಿಗೆ ಪರಿಹಾರ ಸಹ ವಿತರಿಸಲು ಕ್ರಮ ಕೈಗೊಂಡಿಲ್ಲ. ಕುಣಿಗಲ್ ದೊಡ್ಡಕೆರೆ ಅಚ್ಚುಕಟ್ಟು ಪ್ರದೇಶಕ್ಕೆ ನೀರು ಹರಿಸದೆ ಕಾಲಹರಣ ಮಾಡಿ ಕೋಟ್ಯಂತರ ರೂಪಾಯಿ ಹೊಸ ಕಾಮಗಾರಿಗಳಿಗೆ ಗಮನ ಹರಿಸಿದ್ದಾರೆ ಎಂದು ದೂರಿದರು.

### ಪರಿಸರ ಸಂರಕ್ಷಣೆಗೆ ಪ್ರತಿಯೊಬ್ಬರೂ ಮುಂದಾಗಿ: ಶಿಕ್ಷಕ ಶ್ರೀನಿವಾಸಯ್ಯ

• ಉದಯವಾಹಿನಿ, ನಾಗಮಂಗಲ

ಸಮಾಜದಲ್ಲಿ ಬದುಕುತ್ತಿರುವ ನಾವೆಲ್ಲರೂ ಪರಿಸರದ ಮೇಲೆ ದೌರ್ಜನ್ಯ ಮಾಡುತ್ತಾ ಮುಂದಿನ ಪೀಳಿಗೆಯನ್ನು ಸಂಕಷ್ಟಕ್ಕೆ ತಳ್ಳುವ ಕೆಲಸ ಮಾಡುತ್ತಿದ್ದು, ಉತ್ತಮ ಭವಿಷ್ಯಕ್ಕಾಗಿ ಪ್ರತಿಯೊಬ್ಬರೂ ಪರಿಸರ ಸಂರಕ್ಷಣೆ ಮಾಡಲು ಮುಂದಾಗಬೇಕಿದೆ ಎಂದು ಶಿಕ್ಷಕ ಶ್ರೀನಿವಾಸಯ್ಯ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು. ತಾಲ್ಲೂಕಿನ ಪಿ.ನೇರಲಕೆರೆ ಸರ್ಕಾರಿ ಪ್ರೌಢಶಾಲೆಯಲ್ಲಿ ಗುರುವಾರ ಶಾಲೆಯ ಇಕೋ ಕ್ಲಬ್ ವತಿಯಿಂದ ವಿಶ್ವ ಪರಿಸರ ದಿನಾಚರಣೆಯನ್ನು ಹಣ್ಣಿನ ಗಿಡಗಳನ್ನು ನೆಡುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು. ನಮ್ಮ ಮುಂದಿನ ಪೀಳಿಗೆಗಾಗಿ ಉತ್ತಮ ಪರಿಸರವನ್ನು ಉಳಿಸಬೇಕಾ ದುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ.

ಆ ನಿಟ್ಟಿನಲ್ಲಿ ಪ್ರತಿ ಯೊಬ್ಬರೂ ನಿಮ್ಮ ಸುತ್ತಮುತ್ತಲಿನ ಪ್ರದೇಶದಲ್ಲಿ ಗಿಡಗಳನ್ನು ನೆಟ್ಟು ಬೆಳೆಸುವ ಕೆಲಸ ಮಾಡಬೇಕು. ಅಲ್ಲದೇ ವಿದ್ಯಾರ್ಥಿಗಳು ಪರಿಸರದ ಕುರಿತು ಜಾಗೃತರಾಗುವ ಜೊತೆಗೆ ನಿಮ್ಮ ನೆರೆಹೊರೆಯವರಿಗೂ ಅರಿವು ಮೂಡಿಸಬೇಕುತ ಎಂದರು. ಶಿಕ್ಷಕ ಶಹಬುದ್ದೀನ್ ಡಿ.ಬಣಕಾರ್ ಮಾತನಾಡಿ, ಶಿಕ್ಷಣವನ್ನು ಪಡೆಯುವುದರ ಜೊತೆಗೆ ಪರಿಸರ ಕಾಳಜಿಯನ್ನು ಪ್ರತಿಯೊಬ್ಬ ವಿದ್ಯಾರ್ಥಿಗಳು ಬೆಳೆಸಬೇಕು ಎಂದು ಸಲಹೆ ನೀಡಿದರು.

### ದಲಿತರ ಸಮಸ್ಯೆಗಳಿಗೆ ಸ್ಪಂದಿಸಿ ಕದಸಂಸ ಪ್ರತಿಭಟನೆ

• ಉದಯವಾಹಿನಿ, ಶ್ರೀರಂಗಪಟ್ಟಣ

ತಾಲ್ಲೂಕು ಆಡಳಿತ ದಲಿತರ ಸಮಸ್ಯೆಗಳಿಗೆ ಸ್ಪಂದಿಸುತ್ತಿಲ್ಲ ಎಂದು ಆರೋಪಿಸಿ ಕರ್ನಾಟಕ ದಲಿತ ಸಂಘರ್ಷ ಸಮಿತಿಯ ಪದಾಧಿಕಾರಿಗಳು ಹಾಗೂ ಸದಸ್ಯರು ಗುರುವಾರ ಪಟ್ಟಣದಲ್ಲಿ ಪ್ರತಿಭಟನೆ ನಡೆಸಿದರು. ಇಲ್ಲಿನ ಮಿನಿ ವಿಧಾನಸೌಧದ ಎದುರು ಸಮಿತಿಯ ರಾಜ್ಯ ಘಟಕದ ಅಧ್ಯಕ್ಷ ವೆಂಕಟಗಿರಿಯಯ್ಯ ಅವರ ನೇತೃತ್ವದಲ್ಲಿ ಅರ್ಧ ತಾಸು ಪ್ರತಿಭಟನೆ ನಡೆಯಿತು. ಪ್ರತಿಭಟನಾಕಾರರು ತಾಲ್ಲೂಕು ಆಡಳಿತದ ವಿರುದ್ಧ ಘೋಷಣೆ ಕೂಗಿದರು. ತಾಲ್ಲೂಕಿನ ಚೆನ್ನೇನಹಳ್ಳಿ ಗ್ರಾಮದ ಬಳಿ ಸಿಡಿಎಸ್ ನಾಲಾ ಖರಾಬು ಜಾಗ ಒತ್ತುವರಿ ಮಾಡಿಕೊಂಡಿದ್ದು ದಲಿತರು ತಮ್ಮ ಜಮೀನಿಗೆ ಹೋಗಲು ತೊಂದರೆಯಾಗಿದೆ. ಒತ್ತುವರಿ ತೆರವುಗೊಳಿಸಿ ಬಂಡಿ ಜಾಡು ಮಾಡಿಕೊಡಬೇಕು.

ಕೆ.ಶೆಟ್ಟಹಳ್ಳಿ ಗ್ರಾಮದ ದಲಿತ ಮಹಿಳೆ ಮಹದೇವಮ್ಮ ಅವರ ಮನೆ ಮಳೆಯಿಂದ ಕುಸಿದಿದ್ದು, ಮನೆ ನಿರ್ಮಾಣಕ್ಕೆ ಅನುದಾನ ಕೊಡಿಸಬೇಕು. ತಾಲ್ಲೂಕಿನ ಮೊಗರಹಳ್ಳಿಯ ಸ.ನಂ. 128ರಲ್ಲಿ 11 ಎಕರೆ 28 ಗುಂಟೆ ಸರ್ಕಾರಿ ಜಾಗದಲ್ಲಿ ಬಡ ಜನರಿಗೆ ನಿವೇಶನ ವಿತರಿಸಬೇಕು. ಸರ್ಕಾರಿ ಕಚೇರಿಗಳಲ್ಲಿ ಲಂಚಗುಳಿತನ ತಡೆಗಟ್ಟಬೇಕು ಎಂದು ವೆಂಕಟಗಿರಿಯಯ್ಯ ಆಗ್ರಹಿಸಿದರು. ಸಮಿತಿಯ ಜಿಲ್ಲಾ ಘಟಕದ ಕಾರ್ಯದರ್ಶಿ ಸುರೇಶಕುಮಾರ್ ಮಾತನಾಡಿ, ತಾಲ್ಲೂಕಿನಲ್ಲಿ ದಲಿತರಿಗೆ ಸ್ಮಶಾನಕ್ಕೆ ಜಾಗ ಮೀಸಲಿಡಬೇಕು. ದಲಿತ ಕಾಲೊನಿಗಳ ಅಭಿವೃದ್ಧಿಗೆ ಕ್ರಮ ವಹಿಸಬೇಕು ಎಂದು ಒತ್ತಾಯಿಸಿದರು.

### ಪ್ಲಾಸ್ಟಿಕ್‌ನಿಂದ ಇಟ್ಟಿಗೆ ನಿರ್ಮಿಸಿ

• ಉದಯವಾಹಿನಿ, ಸೋಮವಾರಪೇಟೆ

ಹಾನಗಲ್ಲು ಶೆಟ್ಟಳ್ಳಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಗುರುವಾರ ಪರಿಸರ ದಿನವನ್ನು ಆಚರಿಸಲಾಯಿತು. ಚೈಲ್ಡ್ ರೈಟ್ ಟ್ರಸ್ಟ್ ಜಿಲ್ಲಾ ಕ್ಷೇತ್ರ ಸಂಯೋಜಕಿ ಸುಮನ ಪರಿಸರಕ್ಕೆ ಪ್ಲಾಸ್ಟಿಕ್ ನಿಂದಾಗುವ ಅನಾಹುತಗಳ ಬಗ್ಗೆ ವಿದ್ಯಾರ್ಥಿಗಳಿಗೆ ತಿಳಿಸಿದರು. ಪ್ಲಾಸ್ಟಿಕ್ ಮರುಬಳಕೆಯ ಬಗ್ಗೆ ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದರು. ಚಾಕಲೇಟ್ ಪ್ಲಾಸ್ಟಿಕ್ಕೇರಿದಂತೆ ಎಲ್ಲಾ ತರಹದ ಪ್ಲಾಸ್ಟಿಕ್‌ಗಳನ್ನು ಒಂದು ಪ್ಲಾಸ್ಟಿಕ್ ಬಾಟಲಿಯಲ್ಲಿ ಹಾಕಿ ಇಟ್ಟು, ಇವುಗಳನ್ನು ಇಟ್ಟಿಗೆ ರೂಪದಲ್ಲಿ ಮನೆಯ ಗೋಡೆಗಳನ್ನು ನಿರ್ಮಿಸಲು ಮರುಬಳಕೆ ಮಾಡಬಹುದು ಎಂದು ಹೇಳಿದರು. ಬಾಟಲಿಯಲ್ಲಿ ತುಂಬಿಸುವ ವಿಧಾನವನ್ನು ಪ್ರಾತ್ಯಕ್ಷಿಕೆಯ ಮೂಲಕ ಮಕ್ಕಳಿಗೆ ತಿಳಿಸಿಕೊಟ್ಟರು.

### ನೆಟ್ಟ ಗಿಡಗಳು ಉಳಿಯುವಂತೆ ನಿಗಾವಹಿಸಿ: ರಮೇಶ ಬಂಡಿಸಿದ್ದೇಗೌಡ

• ಉದಯವಾಹಿನಿ, ಶ್ರೀರಂಗಪಟ್ಟಣ

ಅರಣ್ಯ ಇಲಾಖೆ, ಸಂಘ, ಸಂಸ್ಥೆಗಳು ನೆಡುವ ಗಿಡಗಳಲ್ಲಿ ಬಹುತೇಕ ಒಣಗಿ ಹೋಗುತ್ತಿದ್ದು, ನೆಟ್ಟ ಗಿಡಗಳು ಉಳಿದು ಮರ ಗಳಾಗಿ ಬೆಳೆಯುವಂತೆ ನಿಗಾವಹಿಸಬೇಕು ಎಂದು ಶಾಸಕ ರಮೇಶ ಬಂಡಿಸಿದ್ದೇಗೌಡ ಸಲಹೆ ನೀಡಿದರು. ತಾಲ್ಲೂಕಿನ ಕರಿಘಟ್ಟ ಪ್ರಕೃತಿ ತಾಣದಲ್ಲಿ ಅರಣ್ಯ ಇಲಾಖೆಯಿಂದ ಗುರುವಾರ ಏರ್ಪಡಿಸಿದ್ದ ಪರಿಸರ ದಿನಾಚರಣೆಯಲ್ಲಿ ಗಿಡಗಳನ್ನು ನೆಟ್ಟು ಅವರು ಮಾತನಾಡಿದರು. ಮಳೆಗಾಲ ಶುರುವಾಗಿದ್ದು ಸ್ಥಳಾವಕಾಶ ಇರುವ ಎಲ್ಲಾ ಕಡೆ ಗಿಡಗಳನ್ನು ನೆಡಬೇಕು. ಪ್ರಾಣಿ, ಪಕ್ಷಿಗಳ ಅನುಕೂಲಕ್ಕಾಗಿ ಹಣ್ಣು ಕೊಡುವ ಗಿಡಗಳನ್ನು ನೆಟ್ಟು ಬೆಳೆಸಬೇಕು. ಮರ ಬೆಳೆಸುವುದರಿಂದ ಆಗುವ ಪ್ರಯೋಜನಗಳ ಬಗ್ಗೆ ಶಾಲೆ, ಕಾಲೇಜು ವಿದ್ಯಾರ್ಥಿಗಳಿಗೆ ಮನವರಿಕೆ ಮಾಡಿಕೊಡಬೇಕು. ಕನಿಷ್ಠ ಮನೆಗೆರಡು ಗಿಡಗಳನ್ನು ನೆಟ್ಟು ಬೆಳೆಸಬೇಕು. ಹಾಗಾದರೆ ಹವಾಮಾನ ವೈಪರೀತ್ಯ ತಡೆ, ಆಮ್ಲಜನಕದ ಕೊರತೆಯನ್ನು ನೀಗಿಸಲು ಸಾಧ್ಯ ಎಂದು ಅವರು ಹೇಳಿದರು.

• ಸಮಿತಿಯ ಸದಸ್ಯರು ಪಶು ವೈದ್ಯಕೀಯ ವಿಶ್ವವಿದ್ಯಾಲಯಕ್ಕೆ ಭೇಟಿ ಕೊಟ್ಟು, ವಿವಿ ಕುಲಪತಿ ಹಾಗೂ ಸಿಬ್ಬಂದಿಯೊಂದಿಗೆ ಚರ್ಚೆ

# ರಾಜ್ಯದ ಏಕೈಕ ಪಶು ವಿವಿಗೆ ಕುತ್ತು: ಸರ್ಕಾರ ವಕ್ರ ದೃಷ್ಟಿ ಬೀರಿರುವುದಕ್ಕೆ ತೀವ್ರ ವಿರೋಧ

• ಉದಯವಾಹಿನಿ ಬೀದರ್

ಪ್ರಾದೇಶಿಕ ಅಸಮತೋಲನ ನಿವಾರಣೆಯ ಉದ್ದೇಶದಿಂದ ಸ್ಥಾಪನಗೊಂಡಿರುವ ಇಲ್ಲಿನ ಕರ್ನಾಟಕ ಪಶು ವೈದ್ಯಕೀಯ, ಪಶು, ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯವನ್ನು ರಾಜ್ಯದ ಇತರೆ ವಿಶ್ವವಿದ್ಯಾಲಯಗಳೊಂದಿಗೆ ವಿಲೀನಗೊಳಿಸಲು ರಾಜ್ಯ ಸರ್ಕಾರ ಮುಂದಾಗಿದೆ.

ರಾಯಚೂರಿನ ಕೃಷಿ ವಿವಿ ಮತ್ತು ಬಾಗಲಕೋಟೆಯ ತೋಟಗಾರಿಕೆ ವಿವಿಯೊಂದಿಗೆ ಪಶು ವಿವಿಯನ್ನು ವಿಲೀನಗೊಳಿಸಲು ಉದ್ದೇಶಿಸಲಾಗಿದೆ. ವಿಲೀನ ಪ್ರಕ್ರಿಯೆಗಾಗಿ ರಾಜ್ಯ ಸರ್ಕಾರವು ಟಿ.ಎಂ. ವಿಜಯಭಾಸ್ಕರ್ ಅಧ್ಯಕ್ಷತೆಯ ಐವರ ಕೃಷಿ, ತೋಟಗಾರಿಕೆ ಹಾಗೂ ಪಶು ವೈದ್ಯಕೀಯ ವಿಶ್ವವಿದ್ಯಾಲಯ ಪುನರ್ ಸಂಘಟನೆ ಉನ್ನತಾಧಿಕಾರ ಸಮಿತಿ ರಚಿಸಿದೆ.

ಈ ಸಮಿತಿಯು ಈಗಾಗಲೇ ಇದರ ಸಾಧಕ-ಬಾಧಕಗಳ ಕುರಿತು ಅಧ್ಯಯನ ಆರಂಭಿಸಿದೆ. ಸಮಿತಿಯ ಸದಸ್ಯರು ನಗರದ ಪಶು ವೈದ್ಯಕೀಯ ವಿಶ್ವವಿದ್ಯಾಲಯಕ್ಕೆ ಭೇಟಿ ಕೊಟ್ಟು, ವಿವಿ ಕುಲಪತಿ ಹಾಗೂ ಸಿಬ್ಬಂದಿಯೊಂದಿಗೆ ಚರ್ಚಿಸಿದ್ದಾರೆ. ಯಾವ ವಿಷಯಗಳ ಕುರಿತು ಚರ್ಚೆ ನಡೆದಿದೆ ಎಂಬುದರ ವಿವರ ಹಂಚಿಕೊಳ್ಳಲು ವಿವಿ ಆಡಳಿತ ಮಂಡಳಿ ನಿರಾಕರಿಸಿದೆ.

ಆದರೆ, ವಿಶ್ವವಿದ್ಯಾಲಯಕ್ಕೆ ಸರ್ಕಾರದಿಂದ ಹಂಚಿಕೆಯಾಗುತ್ತಿರುವ ಅನುದಾನ, ಕಾಯಂ ಹಾಗೂ ಹೊರಗುತ್ತಿಗೆ ನೌಕರರು, ಆದಾಯ, ವಿಲೀನದ ಕುರಿತು ಅಭಿಪ್ರಾಯಗಳು ಸೇರಿದಂತೆ ಹಲವು ವಿಷಯಗಳ ಕುರಿತು ಮಾಹಿತಿ ಕಲೆ ಹಾಕಿದೆ ಎಂದು ಖಚಿತ ಮೂಲಗಳು ತಿಳಿಸಿವೆ.



ಉದಯವಾಹಿನಿ ಚಿತ್ರ

## ಪ್ರಾದೇಶಿಕ ಅಸಮಾನತೆ ನಿವಾರಣೆಗೆ ವಿವಿ

ಪ್ರಾದೇಶಿಕ ಅಸಮತೋಲನ ನಿವಾರಣೆಯ ಹಿನ್ನೆಲೆಯಲ್ಲಿ ಡಾ. ನಂಜುಂಡಪ್ಪ ವರದಿ ಆಧರಿಸಿ ಬೀದರ್‌ನಲ್ಲಿ ಪಶು ವೈದ್ಯಕೀಯ ವಿಶ್ವವಿದ್ಯಾಲಯ ಸ್ಥಾಪಿಸಲಾಗಿದೆ. ರಾಜ್ಯದ ಉತ್ತರ ಹಾಗೂ ದಕ್ಷಿಣದ ಭಾಗಗಳು ಸಮಾನವಾಗಿ ಅಭಿವೃದ್ಧಿ ಹೊಂದಬೇಕೆನ್ನುವುದು ಇದರ ಆಶಯವಾಗಿದ್ದು, 2005ರಲ್ಲಿ ವಿವಿ ಕಾರ್ಯಾರಂಭಮಾಡಿತು. ಒಂದುವೇಳೆ ಇದನ್ನು ಅನ್ಯ ವಿಶ್ವವಿದ್ಯಾಲಯಗಳಲ್ಲಿ ವಿಲೀನಗೊಳಿಸಿದರೆ ಇದರ ಅಸ್ತಿತ್ವ ಕೊನೆಗಾಣಲಿದೆ. ಇದರ ಉದ್ದೇಶಕ್ಕೂ ಕೊಡಲಿ ಏಟು ಬೀಳಲಿದೆ ಎನ್ನುವುದು ತಜ್ಞರು ಹಾಗೂ ವಿವಿ ಸಿಬ್ಬಂದಿಯವಾದ. ಹೈನುಗಾರಿಕೆ, ಮೀನುಗಾರಿಕೆ, ದೇಶಿ ತಳಿಗಳ ಸಂವರ್ಧನೆ, ಜಾನುವಾರುಗಳ ಹಲವಾರು ರೋಗಗಳಿಗೆ ಸಂಬಂಧಿಸಿದಂತೆ ಲಸಿಕೆ ಅಭಿವೃದ್ಧಿ ಸೇರಿದಂತೆ ಅನೇಕ ಆವಿಷ್ಕಾರಗಳು, ಕೆಲಸಗಳು ಪಶು ವಿವಿಯಲ್ಲಿ ನಡೆಯುತ್ತಿವೆ.

## ಹೋರಾಟದ ಎಚ್ಚರಿಕೆ

ಡಿಪ್ಲೊಮಾ, ಪದವಿ, ಸ್ನಾತಕೋತ್ತರ ಪದವಿ, ಪಿಎಚ್‌ಡಿ ಸೇರಿದಂತೆ ಹಲವು ಕೋರ್ಸ್‌ಗಳನ್ನು ನಡೆಸಲಾಗುತ್ತಿದೆ. ಇದರ ಅಡಿಯಲ್ಲಿ ಬೀದರ್, ಬೆಂಗಳೂರು, ಶಿವಮೊಗ್ಗ, ಹಾಸನ, ಅಥಣಿ, ಪುತ್ತೂರು ಹಾಗೂ ಗದಗದಲ್ಲಿ ಕಾಲೇಜುಗಳು ಕೆಲಸ ನಿರ್ವಹಿಸುತ್ತಿವೆ. ಶುಲ್ಕ, ಲಸಿಕೆ ಸೇರಿದಂತೆ ಇತರೆ ಮೂಲಗಳಿಂದ ಆದಾಯ ಬರುತ್ತಿದ್ದು, ಸ್ವಾವಲಂಬಿಯಾಗಿ ಮುನ್ನಡೆಯುತ್ತಿದೆ. ಆದರೂ ಸರ್ಕಾರ ವಕ್ರದೃಷ್ಟಿ ಬೀರಿರುವುದಕ್ಕೆ ತೀವ್ರ ವಿರೋಧ ವ್ಯಕ್ತವಾಗಿದೆ. ಸ್ಥಳೀಯರು ಹೋರಾಟದ ಎಚ್ಚರಿಕೆ ನೀಡಿದ್ದಾರೆ.

## ವಿಲೀನಗೊಳಿಸುವುದೇಕೆ?

'ಪಶು ವೈದ್ಯಕೀಯ ವಿವಿ 20 ವರ್ಷಗಳಲ್ಲಿ ಗಮನಾರ್ಹ ಸಾಧನೆ ಮಾಡಿದೆ. 10 ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ವಿವಿಧ ಪ್ರಕಾರದ ಪದವಿ ಪಡೆದು ನೌಕರಿ ಸೇರಿದ್ದಾರೆ. ವಿವಿ ಆರಂಭಗೊಂಡಾಗ ಹತ್ತು ಸಂಸ್ಥೆಗಳಿದ್ದವು. ಈಗ ಅವುಗಳ ಸಂಖ್ಯೆ 35ಕ್ಕೆ ಏರಿದೆ. ವಿವಿ ಕೆಲಸದಿಂದ ಪಶುಪಾಲನಾ ಸಾಮರ್ಥ್ಯ ಶೇ 20ರಿಂದ ಶೇ 30ಕ್ಕೆ ಹೆಚ್ಚಾಗಿದೆ. ಹೊಸ ತಳಿ ಲಸಿಕೆ ಸೇರಿದಂತೆ ಅನೇಕ ಗಮನಾರ್ಹ ಕೆಲಸಗಳಾದಾಗ ವಿಲೀನಗೊಳಿಸುವುದೇಕೆ' ಎಂದು ಹೆಸರು ಬಹಿರಂಗಪಡಿಸಲು ಇಚ್ಛಿಸದ ವಿವಿಯ ಹಿರಿಯ ವಿಜ್ಞಾನಿಗಳು ಪ್ರಶ್ನಿಸಿದ್ದಾರೆ.

> 2021ರಲ್ಲಿ ರಾಜ್ಯ ಸರ್ಕಾರವು ಶಿವಮೊಗ್ಗದಲ್ಲಿ ಇನ್ನೊಂದು ಪಶು ವೈದ್ಯಕೀಯ ವಿಶ್ವವಿದ್ಯಾಲಯ ಸ್ಥಾಪಿಸಲು ಮುಂದಾಗಿತ್ತು. ಇದರ ಮಹತ್ವ ಇಷ್ಟಿರುವಾಗ ಬೀದರ್ ಪಶು ವಿವಿ ವಿಲೀನಕ್ಕೆ ಮುಂದಾಗಿರುವುದು ಸರಿಯಲ್ಲ.
> – ವೀರಭದ್ರಪ್ಪ, ಉಪ್ಪಿನ ಸದಸ್ಯ ಅಖಿಲ ಭಾರತೀಯ ವಿಶ್ವವಿದ್ಯಾಲಯಗಳ ನೌಕರರ ಒಕ್ಕೂಟದ ರಾಷ್ಟ್ರೀಯ ಕಾರ್ಯಕಾರಿ ಸಮಿತಿ

# ಜೆ ಎನ್ ಕೋಟೆ ಆಯುಷ್ ಕೇಂದ್ರದಿಂದ ಹರಿತ್ (ಹಸಿರು) ಯೋಗ ಕಾರ್ಯಕ್ರಮ

• ಉದಯವಾಹಿನಿ ಚಿತ್ರದುರ್ಗ

ವಿಶ್ವ ಪರಿಸರ ದಿನದ ಅಂಗವಾಗಿ ಜಿಲ್ಲಾ ಪಂಚಾಯತ್ ಚಿತ್ರದುರ್ಗ, ಜಿಲ್ಲಾ ಆಯುಷ್ ಇಲಾಖೆ ಚಿತ್ರದುರ್ಗ ಇವರ ಸಹಯೋಗದಲ್ಲಿ ಚಿತ್ರದುರ್ಗ ತಾಲ್ಲೂಕಿನ ಜೆ ಎನ್ ಕೋಟೆ ಸರ್ಕಾರಿ ಆಯುಷ್ಮಾನ್ ಆರೋಗ್ಯ ಮಂದಿರ(ಆಯುಷ್) ವತಿಯಿಂದ ಆಯುಷ್ ಚಿಕಿತ್ಸಾಲಯದ ಆಯುರ್ವೇದ ಸಸ್ಯತೋಟದಲ್ಲಿ ಹರಿತ್ ಯೋಗ' (ಹಸಿರು ಯೋಗ) ಎಂಬ ವಿಶಿಷ್ಟ ಕಾರ್ಯಕಮ ಗುರುವಾರ ಹಮ್ಮಿಕೊಳ್ಳಲಾಗಿತ್ತು.

ಆಯುರ್ವೇದ ಗಿಡವನ್ನು ನೆಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಜೆ ಎನ್ ಕೋಟೆ ಆಯುಷ್ ಚಿಕಿತ್ಸಾ ಕೇಂದ್ರದ ಆಡಳಿತಾಧಿಕಾರಿ ಡಾ|| ವಿಜಯಲಕ್ಷ್ಮೀ ಪಿ. ಮಾತನಾಡಿ ಹರಿತ್ ಯೋಗ ಎಂಬುದು ಒಂದು ವಿಶೇಷ ಕಾರ್ಯಕ್ರಮವಾಗಿದ್ದು, ಇದು ಯೋಗವನ್ನು ಪರಿಸರ ಸಂರಕ್ಷಣೆಯೊಂದಿಗೆ ಜೋಡಿಸುತ್ತದೆ. ಪ್ರಧಾನ ಮಂತ್ರಿ ಶ್ರೀ ನರೇಂದ್ರ ಮೋದಿ ಅವರು ಮನ್ ಕಿ ಬಾತ್ ನಲ್ಲಿ ಘೋಷಿಸಿದಂತೆ, ಅಂತರರಾಷ್ಟ್ರೀಯ ಯೋಗ ದಿನ 2025 ರ ಥೀಮ್ ಒಂದು ಭೂಮಿಗಾಗಿ ಯೋಗ, ಒಂದು ಆರೋಗ್ಯ. ಈ ಥೀಮ್ ಅಡಿಯಲ್ಲಿ ಹಲವಾರು ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ, ಅವುಗಳಲ್ಲಿ ಹರಿತ್ ಯೋಗ ಕೂಡ ಒಂದು. ಯೋಗದ ಜೊತೆಗೆ ಪರಿಸರದ ಬಗ್ಗೆ ಜಾಗೃತಿ ಮೂಡಿಸುವುದು ಮತ್ತು ಪ್ರಕೃತಿಯೊಂದಿಗೆ ಸಾಮರಸ್ಯದಿಂದ ಬದುಕುವ ಮಹತ್ವವನ್ನು ತಿಳಿಸುವುದು ಇದರ ಉದ್ದೇಶವಾಗಿದೆ. ಎಂದು ಕಾರ್ಯಕ್ರಮದ ಮಹತ್ವವನ್ನು ತಿಳಿಸಿದರು.

ಹಸಿರು ಗಿಡಮರಗಳ ನಡುವೆ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಜೆ ಎನ್ ಕೋಟೆ ಗ್ರಾಮ ಪಂಚಾಯತ್ ಪಿಡಿಒ ಮಂಜುಳಾ ಕೆ ಎಸ್, ಹಾಗೂ ಸಿಬ್ಬಂದಿ ಪೂಜಾನಾಯಕ ದೊಡ್ಡಸಿದ್ಧವ್ವನಹಳ್ಳಿ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದ ಆರೋಗ್ಯ ನಿರೀಕ್ಷಣಾಧಿಕಾರಿ ಬಾಗೇಶ್ ಉಗ್ರಾಣ, ಸಮುದಾಯ ಆರೋಗ್ಯಾಧಿಕಾರಿ ರಮೇಶ್ ಟಿ. ಗ್ರಾಮದ ಮುಖಂಡರಾದ ಚಿದಾನಂದಪ್ಪ, ನಂಜುಂಡಪ್ಪ, ಸಿದ್ದೇಶ್ ಇನ್ನಿತರರು ಭಾಗವಹಿಸಿದ್ದರು.


ಉದಯವಾಹಿನಿ ಚಿತ್ರ

> ವ್ಯಕ್ತಿಯ ದೈಹಿಕ ಮತ್ತು ಮಾನಸಿಕ ಆರೋಗ್ಯವು ಉತ್ತಮ ಪರಿಸರದ ಮೇಲೆ ಅವಲಂಬಿತವಾಗಿದೆ ಹರಿತ್ ಯೋಗ ಎಂದರೆ ಯೋಗಾಭ್ಯಾಸದ ಜೊತೆಗೆ ಪರಿಸರವನ್ನು ಹಸಿರಾಗಿಸುವ ಮತ್ತು ಪರಿಸರ ನೈರ್ಮಲ್ಯತೆ ಕಾಪಾಡುವ ಚಟುವಟಿಕೆಗಳಲ್ಲಿ ಭಾಗವಹಿಸುವುದಾಗಿದೆ. ಇದು ನಮ್ಮ ಆರೋಗ್ಯ ಮತ್ತು ಪರಿಸರ ಎರಡಕ್ಕೂ ಒಳಿತನ್ನುಂಟು ಮಾಡುವ ಒಂದು ಉಪಯುಕ್ತ ಕಾರ್ಯಕ್ರಮವಾಗಿದೆ
> -ರವಿ ಕೆ.ಅಂಬೇಕರ್, ಆಯುಷ್ ಕೇಂದ್ರದ ಯೋಗ ತರಬೇತುದಾರ

# ನಕಲಿ ಪತ್ರಕರ್ತರ ಹಾವಳಿ, ನಿಯಂತ್ರಣಕ್ಕೆ ಒತ್ತಾಯ


ಉದಯವಾಹಿನಿ ಚಿತ್ರ

• ಉದಯವಾಹಿನಿ ಕೊಟ್ಟೂರು

ತಾಲ್ಲೂಕು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಪದಾಧಿಕಾರಿಗಳು ತಹಶೀಲ್ದಾರ್ ಜಿ.ಕೆ. ಅಮರೇಶ ಅವರಿಗೆ ಮನವಿ ಸಲ್ಲಿಸಿ ನಕಲಿ ಪತ್ರಕರ್ತರ ಹಾವಳಿ ತಡೆಗಟ್ಟಬೇಕೆಂದು ಒತ್ತಾಯಿಸಿದರು.

ಮೊಬೈಲ್ ಪತ್ರಿಕೆಯಲ್ಲಿ ಸುದ್ದಿ ಪ್ರಕಟವಾಗುತ್ತವೆ. ಆ ಪತ್ರಿಕೆ ಪ್ರಕಟವಾಗುವುದಿಲ್ಲ. ಯಾರೂ ಬೇಕಾದರೂ ಮೊಬೈಲ್‌ನಲ್ಲಿ ಪತ್ರಿಕೆಯನ್ನು ಸೃಷ್ಟಿಸಬಹುದು. ಇದಕ್ಕೆ ಸಂಪಾದಕರು, ಪ್ರಕಾಶಕರು ಯಾರು ಇರುವುದಿಲ್ಲ. ಇಂತವರು ಅಧಿಕಾರಿಗಳನ್ನು ಬೆದರಿಸುವುದಲ್ಲದೆ. ಬ್ಲಾಕ್ ಮೇಲ್ ಮಾಡುತ್ತಾರೆ. ಇಂತವರ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

ತಾಲೂಕಿನಲ್ಲಿ ಯೂಟ್ಯೂಬ್ ಪತ್ರಕರ್ತರ ಹಾವಳಿಯೂ ಹೆಚ್ಚಾಗಿದೆ. ಇವರಿಂದಾಗಿ ನೈಜ ಪತ್ರಕರ್ತರು ಕರ್ತವ್ಯ ನಿರ್ವಹಿಸುವುದು ಕಷ್ಟವಾಗಿದೆ. ಸರ್ಕಾರಿ ಅಧಿಕಾರಿಗಳಿಗೆ ಇವರಿಂದ ಕಿರುಕುಳ, ಬ್ಲಾಕ್ ಮೇಲ್, ಬೆದರಿಕೆ ಅಧಿಕವಾಗಿದೆ ಎಂದು ತಹಶೀಲ್ದಾರ್ ಜಿ.ಕೆ. ಅಮರೇಶಗೆ ಮನವಿ ಮಾಡಿದರು. ನಂತರ ಪಿ.ಎಸ್.ಐ ಗೀತಾಂಜಲಿ ಶಿಂಧೆ ಅವರಿಗೂ ಮನವಿ ಕೊಟ್ಟು, ಈ ಹಿಂದೆ ಎಸ್.ಪಿ. ಅವರ ಸೂಚನೆಯಂತೆ ತಾಲ್ಲೂಕಿನ ಎಲ್ಲಾ ಪತ್ರಕರ್ತರಿಗೂ ಪತ್ರಿಕೆ ಸಂಪಾದಕರು ನೀಡಿದ ಆದೇಶ ಪತ್ರವನ್ನು ಪರಿಶೀಲಿಸಿದ್ದರು. ಈಗಲೂ ಈ ಕ್ರಮ ಕೈಗೊಳ್ಳಬೇಕೆಂದು ಪತ್ರಕರ್ತರು ಕೋರಿದರು.

ಇದಕ್ಕೆ ಉತ್ತರಿಸಿದ ಪಿ.ಎಸ್.ಐ. ಗೀತಾಂಜಲಿ ಶಿಂಧೆ, ಸರ್ಕಾರಿ ಅಧಿಕಾರಿಗಳು ತಮಗೆ ಬ್ಲಾಕ್ ಮೇಲ್, ಬೆದರಿಕೆವೊಡ್ಡಿದ ಪತ್ರಕರ್ತರ ಹೆಸರನ್ನು ಹೇಳಿದರೆ ಕ್ರಮಕೈಗೊಳ್ಳುವ ಭರವಸೆ ನೀಡಿದರು. ದೇವರಮನಿ ಸುರೇಶ, ಉಜ್ಜಿನಿ ರುದ್ರಪ್ಪ, ಕಾರ್ಯದರ್ಶಿ ಎಂ. ರವಿ ಕುಮಾರ್, ಬದ್ದಿ ಮಂಜುನಾಥ್, ಸಂಘದ ಮಾಜಿ ಅಧ್ಯಕ್ಷ ಜಿ. ಸೋಮಶೇಖರ್, ಗುರುಪ್ರಸಾದ್, ಬಂದಾತರ ಪ್ರಕಾಶ, ಚಿಗಟೇರಿ ಕೊಟ್ರೇಶ ಇದ್ದರು.

# ನದಿ ಮಾಲಿನ್ಯ: ತಕ್ಷಣ ನಿಯಂತ್ರಣಕ್ಕೆ ಸಚಿವರ ಸೂಚನೆ

• ಉದಯವಾಹಿನಿ ಮಂಗಳೂರು

ಸುರತ್ಕಲ್ ಖಂಡಿಗೆ ನಂದಿನಿ ನದಿ ತ್ಯಾಜ್ಯದಿಂದ ಮಾಲಿನ್ಯವಾಗುತ್ತಿರುವ ಬಗ್ಗೆ ಸಾರ್ವಜನಿಕ ದೂರುಗಳ ಹಿನ್ನೆಲೆಯಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಅವರು ಸ್ಥಳಕ್ಕೆ ಭೇಟಿ ನೀಡಿದರು.

ನಂದಿನಿ ನದಿ ಸೇತುವೆಯಲ್ಲಿ ನಿಂತು ಪರಿಶೀಲನೆ ನಡೆಸಿದ ಅವರು ಸ್ಥಳೀಯರ ಅಹವಾಲು ಆಲಿಸಿದರು. ಕಳೆದ ಹಲವು ವರ್ಷಗಳಿಂದ ನದಿಗೆ ಸ್ಥಳೀಯ ವೈದ್ಯಕೀಯ ಕಾಲೇಜಿನಿಂದ ತ್ಯಾಜ್ಯ ಹರಿದು ಬರುತ್ತಿದೆ. ಸುರತ್ಕಲ್ ವೆಟ್ ವೆಲ್ ನಿಂದಲೂ ತ್ಯಾಜ್ಯವನ್ನು ನೇರವಾಗಿ ಬಿಡಲಾಗುತ್ತಿದೆ ಎಂದು ಸಾರ್ವಜನಿಕರು ಸಚಿವರಿಗೆ ಅಹವಾಲು ಸಲ್ಲಿಸಿದರು. ಶಾಸಕ ಉಮಾನಾಥ ಕೋಟ್ಯಾನ್ ಮಾತನಾಡಿ ನದಿ ಮಾಲಿನ್ಯದಿಂದ ಸ್ಥಳೀಯರಿಗೆ ತೀವ್ರ ಸಮಸ್ಯೆ ಆಗಿದೆ. ಇದಕ್ಕೆ ಸಾರ್ವಜನಿಕರು ಹಲವು ಬಾರಿ ಸಂಬಂಧಿಸಿದವರ ಗಮನಕ್ಕೆ ತಂದಿದ್ದರೂ ಸಮಸ್ಯೆ ಪರಿಹಾರವಾಗಿಲ್ಲ ಎಂದು ಸಚಿವರಿಗೆ ತಿಳಿಸಿದರು. ಸಚಿವರು ಈ ಸಂದರ್ಭದಲ್ಲಿ ಮಹಾನಗರಪಾಲಿಕೆ ಆಯುಕ್ತರು ಹಾಗೂ ಮಾಲಿನ್ಯ ಮಂಡಳಿ ಅಧಿಕಾರಿಗಳಿಂದ ಮಾಹಿತಿ ಪಡೆದರು.

ನದಿಗೆ ಹರಿದು ಬರುವ ತ್ಯಾಜ್ಯವನ್ನು ತಕ್ಷಣದಿಂದಲೇ ನಿಲ್ಲಿಸಬೇಕು. ಹಾಗೂ ಇದಕ್ಕೆ ಕಾರಣವಾದವರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಅವರು ಸೂಚಿಸಿದರು. ಮಂಗಳೂರು ಮಹಾನಗರಪಾಲಿಕೆಯು ತ್ಯಾಜ್ಯ ಸಂಸ್ಕರಣಾ ಘಟಕದಲ್ಲಿ ತಂತ್ರಜ್ಞಾನವನ್ನು ಬಳಸಿಕೊಂಡು ತ್ಯಾಜ್ಯ ಶುದ್ಧೀಕರಣ ಮಾಡಬೇಕು. ಶೀಘ್ರವೇ ಈ ಬಗ್ಗೆ ಸಭೆ ನಡೆಸಲಾಗುವುದು ಎಂದು ಸಚಿವರು ಸೂಚಿಸಿದರು.


ಉದಯವಾಹಿನಿ ಚಿತ್ರ

# ಪರಿಸರ ಸಂರಕ್ಷಣೆ ನಿತ್ಯ ನಡೆಯಬೇಕು: ಆರ್.ವಿ.ದೇಶಪಾಂಡೆ

• ಉದಯವಾಹಿನಿ, ದಾಂಡೇಲಿ

ಪರಿಸರ ಸಂರಕ್ಷಣೆ ಅರಣ್ಯ ಇಲಾಖೆ ಕೆಲಸ ಮಾತ್ರವಲ್ಲ, ಅದು ಎಲ್ಲರ ಕರ್ತವ್ಯವಾಗಿದೆ. ಮುಂದಿನ ಪೀಳಿಗೆಗೆ ಶುದ್ಧ ಪರಿಸರವನ್ನು ಉಳಿಸಿ, ಬೆಳೆಸುವ ಕೆಲಸ ಈಗಿನಿಂದಲೇ ಆಗಬೇಕು. ಗಿಡ ನೆಟ್ಟು ಪರಿಸರ ದಿನಾಚರಣೆ ಮಾಡಿದರೆ ಏನು ಪ್ರಯೋಜನವಿಲ್ಲ ಎಂದು ಶಾಸಕ ಆರ್.ವಿ.ದೇಶಪಾಂಡೆ ಹೇಳಿದರು.

ನಗರದ ದಂಡಕಾರಣ್ಯ ಉದ್ಯಾನವನದಲ್ಲಿ ನಗರ ಸಭೆ ಹಾಗೂ ಅರಣ್ಯ ಇಲಾಖೆಯ ಸಹಯೋಗದಲ್ಲಿ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು. ಪರಿಸರ ಸಂರಕ್ಷಣೆ ನಿತ್ಯ ನಡೆಯುವ ಕೆಲಸ. ಕಾಡಿನ ಪ್ರದೇಶದಲ್ಲಿ ಇರುವ ನಾವುಗಳು ವನ್ಯ ಜೀವಿಗಳೊಂದಿಗೆ ನಿತ್ಯವೂ ಸಂಘರ್ಷ ಇದ್ದೇ ಇರುತ್ತದೆ. ಪರಿಸರದೊಂದಿಗೆ ಹೊಂದಿಕೊಂಡು ಬದುಕಬೇಕು. ನಾವು ಪ್ಲಾಸ್ಟಿಕ್ ಬಳಕೆಯನ್ನು ಸಂಪೂರ್ಣವಾಗಿ ನಿಲ್ಲಸಬೇಕು. ಪ್ರತಿಯೊಬ್ಬರು ವರ್ಷಕ್ಕೆ ಒಂದು ಗಿಡ ನೆಟ್ಟು ಪಾಲಿಸಿ ಪೋಷಿಸಿ ಜಾಗತಿಕ ತಾಪಮಾನದ ತಡೆಗಟ್ಟುವಲ್ಲಿ ಕೊಡುಗೆ ನೀಡಬೇಕು ಎಂದು ಕರೆ ನೀಡಿದರು.

ದಾಂಡೇಲಿಯ ಎಸಿಎಫ್ ಸಂತೋಷ ಚೌಹಾಣ್ ಪರಿಸರ ಸಂರಕ್ಷಣೆಗಾಗಿ ಪ್ಲಾಸ್ಟಿಕ್ ಮುಕ್ತ ಪರಿಸರ ಜಾಗೃತಿ ಕುರಿತು ಪ್ರತಿಜ್ಞಾ ವಿಧಿ ಬೋಧಿಸಿದರು. ತಹಶೀಲ್ದಾರ ಶೈಲೇಶ ಪರಮಾನಂದ, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಟಿ.ಸಿ.ಹಾದಿಮನಿ, ನಗರಸಭೆಯ ಅಧ್ಯಕ್ಷ ಅಶ್ಪಾಕ್ ಶೇಖ, ಉಪಾಧ್ಯಕ್ಷೆ ಶಿಲ್ಪಾ ಕೊಡೆ, ಸ್ಥಾಯಿ ಸಮಿತಿ ಅಧ್ಯಕ್ಷೆ ಸುಧಾ ಜಾಧವ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮೋಹನ ಹಲವಾಯಿ, ವೆಸ್ಟ್ ಕೋಸ್ಟ್ ಕಾಗದ ಕಾರ್ಖಾನೆಯ ಕಾರ್ಯನಿರ್ವಾಹಕ ಅಧಿಕಾರಿ ರಾಜೇಂದ್ರ ಜೈನ್ ಹಾಗೂ ಕಂದಾಯ ಇಲಾಖೆ, ನಗರಸಭೆಯ ಅಧಿಕಾರಿಗಳು, ಸಿಬ್ಬಂದಿ ಇದ್ದರು. ನಗರದ 31 ವಾರ್ಡಗಳಲ್ಲಿ ನಗರಸಭೆ ಸದಸ್ಯರಿಂದ ಸ್ವಚ್ಛತಾ ಶ್ರಮದಾನ ಹಾಗೂ ಜಾಗತಿಕವಾಗಿ ಪ್ಲಾಸ್ಟಿಕ್ ಮಾಲಿನ್ಯ ನಿಯಂತ್ರಣ ಕುರಿತು ಜಾಗೃತಿ ಕಾರ್ಯಕ್ರಮ ನಡೆಯಿತು. ಪರಿಸರ ಜಾಗೃತಿ ಜಾಥಾ ಕಾರ್ಯಕ್ರಮದಲ್ಲಿ ಕಾಲೇಜು ಮಕ್ಕಳು, ಶಿಕ್ಷಕರು, ಅರಣ್ಯ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿಗಳು, ವಿವಿಧ ಪಕ್ಷಗಳ ಮುಖಂಡರು, ನಗರಸಭೆಯ ಸದಸ್ಯರು, ಸ್ಥಳೀಯರು ಪಾಲ್ಗೊಂಡಿದ್ದರು.


ಉದಯವಾಹಿನಿ ಚಿತ್ರ

> ನಗರದಲ್ಲಿ ಪ್ಲಾಸ್ಟಿಕ್ ಬಳಕೆ ನಿಷೇಧಿಸಲಾಗಿದೆ. ಅಗತ್ಯ ಜಾಗೃತಿ ಮೂಡಿಸುವ ಕೆಲಸ ನಡೆಯುತ್ತಿದೆ. ಶಾಲಾ ಕಾಲೇಜು, ಕಂದಾಯ ಇಲಾಖೆ, ಶಿಕ್ಷಣ ಇಲಾಖೆ ಸೇರಿದಂತೆ ಎಲ್ಲರ ಸಹಕಾರದಿಂದ ಈ ಪರಿಸರ ದಿನಾಚರಣೆ ಕಾರ್ಯಕ್ರಮ ಯಶಸ್ವಿಯಾಗಿದೆ
> -ವಿವೇಕ ಬನ್ನೆ , ಪೌರಾಯುಕ್ತ

# ಸಸ್ಯ ಸಂಪತ್ತು ರಕ್ಷಿಸುವ ಹೊಣೆ ಎಲ್ಲರ ಮೇಲಿದೆ: ಶಾಸಕ ಸಿ.ಎನ್. ಬಾಲಕೃಷ್ಣ

• ಉದಯವಾಹಿನಿ ಚನ್ನರಾಯಪಟ್ಟಣ

ಗಿಡಗಳನ್ನು ನೆಟ್ಟು ಸಸ್ಯ ಸಂಪತ್ತನ್ನು ಸಂರಕ್ಷಿಸುವ ಜವಾಬ್ದಾರಿ ಎಲ್ಲರ ಮೇಲಿದೆ ಎಂದು ಶಾಸಕ ಸಿ.ಎನ್. ಬಾಲಕೃಷ್ಣ ಹೇಳಿದರು.

ನಲ್ಲೂರು ಬಳಿ ಇರುವ ಘನತ್ಯಾಜ್ಯ ವಿಲೇವಾರಿ ಘಟಕದಲ್ಲಿ ಪುರಸಭೆ ವತಿಯಿಂದ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಒಂದು ಕೋಟಿ ವೆಚ್ಚದಲ್ಲಿ ವಿವಿಧ ಕಾಮಗಾರಿಗೆ ಗುರುವಾರ ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು. ಪ್ರಕೃತಿ ದೇವರು, ಅದನ್ನು ಪೂಜಿಸಬೇಕು. ಒಂದು ಮರ ತೆರವು ಮಾಡಿದರೆ 5 ಗಿಡನೆಟ್ಟು ಪರಿಸರ ಸಂರಕ್ಷಿಸಬೇಕು. ಪ್ರಾಪಂಚಿಕ ತಾಪಮಾನ ಹೆಚ್ಚಾಗುತ್ತಿದೆ. ಇದು ಜನರ ಆರೋಗ್ಯ ಮತ್ತು ಬೆಳೆಗಳ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತಿದೆ. ಹಾಗಾಗಿ ಪರಿಸರ ಕಾಪಾಡುವ ಅಗತ್ಯ ಇದೆ ಎಂದರು. ಘನತ್ಯಾಜ್ಯ ವಿಲೇವಾರಿ ಘಟಕ ಉತ್ತಮವಾಗಿ ಕೆಲಸಮಾಡುತ್ತಿದೆ. ಇದರಲ್ಲಿ ಪೌರಕಾರ್ಮಿಕರ ಶ್ರಮ ಸಾಕ್ಷಿದೆ. ಪೌರಕಾರ್ಮಿಕರು ಆರೋಗ್ಯ ಕಾಪಾಡಿಕೊಳ್ಳಬೇಕು. ಕಾಲಕಾಲಕ್ಕೆ ಉಚಿತವಾಗಿ ಆರೋಗ್ಯ ತಪಾಸಣೆ ಮಾಡಿಸಲಾಗುವುದು. ಆರೋಗ್ಯ ಚೆನ್ನಾಗಿದ್ದರೆ ಕ್ರಿಯಾಶೀಲವಾಗಿ ಕೆಲಸಮಾಡಬಹುದು. ಘನತ್ಯಾಜ್ಯ ವಿಲೇವಾರಿ ಘಟಕದಲ್ಲಿ ಗೊಬ್ಬರ ತಯಾರು ಮಾಡಲಾಗುತ್ತಿದೆ. ಈಗಾಗಲೇ 350 ಟನ್ ಗೊಬ್ಬರ ಮಾರಾಟ ಮಾಡಲಾಗಿದೆ. ಇನ್ನು 250 ಟನ್ ಗೊಬ್ಬರ ಮಾರಾಟ ಮಾಡಲಾಗುವುದು. ಕಡಿಮೆ ದರದಲ್ಲಿ ರೈತಾಪಿ ವರ್ಗದವರಿಗೆ ಗೊಬ್ಬರ ಮಾರಾಟ ಮಾಡಲಾಗುತ್ತದೆ. ರೈತರು ಹೊಲ, ಗದ್ದೆಗಳಿಗೆ ಈ ಗೊಬ್ಬರ ಅನುಕೂಲವಾಗಿ ಪರಿಣಮಿಸಿ ಫಲವತ್ತೆ ಹೆಚ್ಚಿಸಿಕೊಳ್ಳಲು ಸಹಕಾರಿಯಾಗುತ್ತದೆ ಎಂದು ತಿಳಿಸಿದರು.

ಪಟ್ಟಣದಲ್ಲಿ 58 ಸಾವಿರ ಜನಸಂಖ್ಯೆ ಇದೆ. ಚನ್ನರಾಯಪಟ್ಟಣವನ್ನು ನಗರಸಭೆಯಾಗಿ ಮೇಲ್ದರ್ಜೆಗೆ ಏರಿಸಬೇಕು ಎಂದು ಮುಖ್ಯಮಂತ್ರಿಗೆ ಮನವಿಮಾಡಲಾಗಿದೆ ಎಂದರು.

> ಪಟ್ಟಣದ ಶ್ರವಣಬೆಳಗೊಳ ರಸ್ತೆ ಬದಿ ಮತ್ತು ಹೇಮಾವತಿ ಎಡದಂಡೆ ನಾಲೆಯ ಅಕ್ಕಪಕ್ಕದಲ್ಲಿ ರಾತ್ರಿ ವೇಳೆ ವಾಹನಗಳಲ್ಲಿ ಕೆಲವರು ಕಸ ಸುರಿಯುತ್ತಾರೆ. ಈ ಭಾಗದಲ್ಲಿ ಸಿಸಿಟಿವಿ ಕ್ಯಾಮೆರಾ ಅಳವಡಿಸಿ ಅಂಥ ವಾಹನವನ್ನು ಪತ್ತೆ ಹಚ್ಚಿ ಕ್ರಿಮಿನಲ್ ಪ್ರಕರಣ ದಾಖಲಿಸಬೇಕು. ಇಲ್ಲವೇ ಖಾಸಗಿ ವಾಹನಗಳು ಕಸವನ್ನು ಪುರಸಭೆಯ ವಾಹನಗಳಿಗೆ ನೀಡಬಹುದು. ಹಣ ನಿಗದಿ ಮಾಡಿ ಖಾಸಗಿ ವಾಹನಗಳಿಂದ ಕಸ ಸಂಗ್ರಹಿಸಲಾಗುವುದು -ಸಿ.ಎನ್. ಬಾಲಕೃಷ್ಣ


ಉದಯವಾಹಿನಿ ಚಿತ್ರ

# ಕಲ್ಯಾಣದಲ್ಲಿ ಶತ ಕೋಟಿ ರೂ.ಗಳ ಅರಣ್ಯ ಆವಿಷ್ಕಾರ ಯೋಜನೆ ಸಂಕಲ್ಪ

## ಅರಣ್ಯೀಕರಣಕ್ಕೆ ಒತ್ತು ನೀಡುವ ಅರಣ್ಯ ಅವಿಷ್ಕಾರ ಯೋಜನೆ ಕೈಗೆತ್ತಿಕೊಳ್ಳಲು ಸಿದ್ಧ: ಡಾ. ಅಜಯಸಿಂಗ್ ಧರ್ಮಸಿಂಗ್

• ಉದಯವಾಹಿನಿ ಕಲಬುರಗಿ

ಕ.ಕರ್ನಾಟಕದಲ್ಲಿ ಹಸಿರು ವನಸಿರಿ ನಳನಲಿ ಸುವಂತೆ ಮಾಡುವಲ್ಲಿ ಇದೇ ಮೊದಲ ಬಾರಿಗೆ ಹೊಸ ಹೆಜ್ಜೆ ಇಡಲು ಮುಂದಾಗಿರುವ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ವಿಶ್ವ ಪರಿಸರ ದಿನದಂದೇ ಹಸಿರು ಕಲ್ಯಾಣಕ್ಕೆ ಸಂಕಲ್ಪ ಮಾಡಿ ಅರಣ್ಯ ಇಲಾಖೆ ಜೊತೆ ಸೇರಿಕೊಂಡು 100 ಕೋಟಿ ರೂ.ಗಳ ಯೋಜನೆ ರೂಪಿಸಲು ಮುಂದಾಗಿದೆ ಎಂದು ಮಂಡಳಿಯ ಅಧ್ಯಕ್ಷ ಹಾಗೂ ಕ್ಷೇತ್ರದ ಶಾಸಕ ಡಾ. ಅಜಯಸಿಂಗ್ ಧರ್ಮಸಿಂಗ್ ಅವರು ತಿಳಿಸಿದ್ದಾರೆ.

ಈಗಾಗಲೇ ಅಕ್ಷರ, ಆರೋಗ್ಯ, ಉದ್ಯೋಗ, ಕೌಶಲ್ಯ ರಂಗದಲ್ಲಿ ವಿನೂತನ ಯೋಜನೆ ರೂಪಿಸುತ್ತ ಜನಪರ ಧೋರಣೆಯೊಂದಿಗೆ ಹೊಸಹೆಜ್ಜೆ ಇಡುತ್ತಿರುವ ಮಂಡಳಿ ಇದೀಗ ತನ್ನ ಇತಿಹಾಸದಲ್ಲೇ ಮೊದಲ ಬಾರಿಗೆ ಬರ ಪೀಡಿತ ಕಲ್ಯಣ ನಾಡಲ್ಲಿ ಹಸಿರು ವನಸಿರಿ ನಳನಳಿಸುವಂತೆ ಮಾಡಲು ಅರಣ್ಯ ಅವಿಷ್ಕಾರ ಯೋಜನೆ ರೂಪಿಸಿದೆ.ಇದಕ್ಕಾಗಿ ಮಂಡಳಿ 50 ಕೋಟಿ ರೂ.ಗಳು, ಅರಣ್ಯ ಇಲಾಖೆ 50 ಕೋಟಿ ರೂ.ಗಳು ಸೇರಿದಂತೆ ಒಟ್ಟು 100 ಕೋಟಿ ರೂ.ಗಳಲ್ಲಿ ಸದರಿ ಯೋಜನೆ ಅನುಷ್ಠಾನಕ್ಕೆ ಬರಲಿದೆ ಎಂದು ಅವರು ತಿಳಿಸಿದ್ದಾರೆ. ರಾಷ್ಟ್ರೀಯ ಅರಣ್ಯ ನೀತಿಯಂತೆ ಒಟ್ಟು ಭೌಗೋಳಿಕ ಪ್ರದೇಶದ ಒಂದು ಮೂರಾಂಶರಷ್ಟು ಅರಣ್ಯ ಇರಬೇಕು. ಆದರೆ ಕಲ್ಯಣ ಕರ್ನಾಟಕದಲ್ಲಿ ಈ ಪ್ರಮಾಣ ಅಷ್ಟಿಲ್ಲ. ಅಧ್ಯಯನದ ಪ್ರಕಾರ ಶೇಕಡಾ 16 ರಷ್ಟು ಕೊರತೆ ನಮ್ಮಲ್ಲಿದೆ. ಕಲ್ಯಾಣ ನಾಡಲ್ಲಿ ಕೇವಲ ಶೇಕಡಾ 5ರಷ್ಟು ಅರಣ್ಯ ಪ್ರದೇಶವಿದ್ದು ಇದು ರಾಜ್ಯ ಹಾಗೂ ರಾಷ್ಟ್ರೀಯ ಅರಣ್ಯ ನೀತಿಗೂ ಕಮ್ಮಿಯಾಗಿದೆ ಎಂದು ಅವರು ಕಳವಳ ವ್ಯಕ್ತಪಡಿಸಿದ್ದಾರೆ.

ಅಂಕಿ ಸಂಖ್ಯೆಗಳನ್ನು ನೋಡೋದಾದಲ್ಲಿ, ಕಲ್ಯಾಣದಲ್ಲಿ ಒಟ್ಟು 4, 055 ಚದರ ಚಕಿಮೀನಷ್ಟು ಅರಣ್ಯ ಪ್ರದೇಶವಿದೆ, ಜಿಲ್ಲಾವಾರು ಗಮನಿಸಿದಾಗ, ಬಳ್ಳಾರಿ– ಶೇಕಡಾ 8.4, ಬೀದರ್– 460 ಚಕಿಮೀ, ಶೇಕಡಾ 52. 4, ಯದಗಿರಿ– 469 ಚಕೀಮೀ, ಶೇಕಡಾ 6. 9, ರಾಯೂರು– 370 ಚಕಿಮೀ, ಶೇಕಡಾ 44, ಕಲಬುರ್ಗಿ– 339. 87 ಚಕಿಮೀ, ಶೇಕಡಾ 3.1ರಷ್ಟು ಅರಣ್ಯಪ್ರದೇಶವಿದೆ. ಬಳ್ಳಾರಿ, ಬೀದರ್ ಪರವಾಗಿಲ್ಲ ಎನ್ನಬಹುದಾದರೂ ಒಟ್ಟಾರೆ ಕಲ್ಯಾಣದ ಜಿಲ್ಲೆಗಳ ಅರಣ್ಯ ಪರಿಸರ ನೋಟ, ಪರಿಸ್ಥಿತಿ ಆತಂಕಕಾರಿಯಾಗಿದೆ ಎಂದು ಅವರು ತೀವ್ರ ಬೇಸರ ಹೊರಹಾಕಿದ್ದಾರೆ.


ಇದರಿಂದಾಗಿಯೇ ಮಳೆ ಹೇರಾಫೇರಿ, ಬಿಸಿಲು ಹೆಚ್ಚಳ, ಇವೆಲ್ಲವೂ ಈ ನೆಲವನ್ನು ಕಾಡುತ್ತಿವೆ. ರೈತರು ಮಳೆ ಸಕಾಲಿಕ ಆಗದೆ ತೊಂದರೆಯಲ್ಲಿದ್ದಾರೆ. ಅಂತರ್ಜಲ ಮಟ್ಟದಲ್ಲೂ ಭಾರಿ ಕುಸಿತವಾಗುತ್ತ ಸಾಗಿದೆ.

ಇದೆಲ್ಲದಕ್ಕೂ ಪರಿಹಾರವೆಂದರೆ ಹಸಿರೀಕರಣವೆಂಬುದು ಮನಗಂಡೇ ಮಂಡಳಿ ಇದೇ ಮೊದಲ ಬಾರಿಗೆ ಅರಣ್ಯೀಕರಣಕ್ಕೆ ಒತ್ತು ನೀಡುವ ಅರಣ್ಯ ಅವಿಷ್ಕಾರ ಯೋಜನೆ ಕೈಗೆತ್ತಿಕೊಳ್ಳಲು ಸಿದ್ಧವಾಗಿದೆ ಎಂದು ಅವರು ತಿಳಿಸಿದ್ದಾರೆ.

ಈಗಾಗಲೇ ಮಂಡಳಿ ಸಭೆಯಲ್ಲಿ ಈ ಬಗ್ಗೆ ಚರ್ಚಿಸಲಾಗಿದೆ. ಅರಣ್ಯ ಇಲಾಖೆಯ ಸಚಿವರು ಬೀದರ್‌ನವರೇ ಆಗಿರುವ ಈಶ್ವರ್ ಖಂಡ್ರೆಯವರೇ ಆಗಿದ್ದಾರೆ. ಅವರೊಂದಿಗೆ ಈ ಬಗ್ಗೆ ವಿವರವಾಗಿ ಚರ್ಚಿಸಲಾಗಿದೆ. ಅವರೂ ಒಪ್ಪಿದ್ದಾರೆ, ಆರೋಗ್ಯ, ಶಿಕ್ಷಣ, ಕಂದಾಯ ಇಲಾಖೆಗಳೊಂದಿಗೆ ಈಗಾಗಲೇ ಪಾಲುದಾರಿಕೆಯಲ್ಲಿ ಯೋಜನೆ ಅನುಷ್ಠಾನಕ್ಕೆ ತಂದಂತೆಯೇ ಅರಣ್ಯ ಇಲಾಖೆಯೊಂದಿಗೆ ಹಸಿರೀಕರಣಕ್ಕೂ ಮಂಡಳಿ ಒತ್ತು ನೀಡುವ ಸಂಕಲ್ಪ ಮಾಡಿದೆ ಎಂದು ಅವರು ಘೋಷಿಸಿದ್ದಾರೆ. ಶೀಘ್ರದಲ್ಲೇ ಯೋಜನೆಯ ರೂಪರೇಷೆ, ಅನುಷ್ಠಾನದ ವಿಷಯ, ವಿಧಾನಗಳ ಬಗ್ಗೆ ಪ್ರಸ್ತಾವನೆ ಸಿದ್ಧಪಡಿಸಿ ರಾಜ್ಯಪಾಲರಿಗೆ ಸಲ್ಲಿಸಲಾಗುತ್ತಿದೆ. ಮುಂದಿನ 2 ತಿಂಗಳಲ್ಲಿ ಸದರಿ ಅರಣ್ಯೀಕರಣದ ಹೊಸ ಯೋಜನೆ ಕಲ್ಯಾಣದಲ್ಲಿ ಅನುಷ್ಠಾನಗೊಳ್ಳಲಿದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಮರಗಳ ನಾಶ, ಗಾಳಿಯಲ್ಲಿ ಇಂಗಾಲದ ಅಂಶದ ಹೆಚ್ಚಳ, ಜಲಮೂಲಗಳು ಮತ್ತು ನದಿಗಳಲ್ಲಿ ಹಾನಿಕಾರಕ ರಾಸಾಯನಿಕಗಳು ಪ್ರತ್ಯಕ್ಷವಾಗುತ್ತಿರೋದು ಇವೆಲ್ಲ ಪರಿಸರ ನಾಶದ ಪ್ರತೀಕ, ಇದರಿಂದಾಗಿ ರೈತರು, ಸಾಮಾನ್ಯ ಜನ ತೊಂದರೆಯಲ್ಲಿದ್ದಾರೆ, ಕೃಷಿಯೇ ಸಂಕಷ್ಟದಲ್ಲಿದೆ, ಇದನ್ನೆಲ್ಲ ತಪ್ಪಿಸಲು ಅರಣ್ಯೀಕರಣವೇ ಪರಿಹಾರವೆಂದು ಅರಿತು ಹಸೀರೀಕರಣಕ್ಕೆ ಮಂಡಳಿಯಿಂದ ಯೋಜನೆ ರೂಪಿಸಲಾಗುತ್ತಿದೆ ಎಂದು ಅವರು ಹೇಳಿದ್ದಾರೆ.

ಹಸಿರು ಕಲ್ಯಾಣಕ್ಕೆ ಸಂಕಲ್ಪ



> ಕಲ್ಯಾಣದಲ್ಲಿನ ಹಸಿರೀಕರಣದ ಈ ಉಪಕ್ರಮ ಮಿಷನ್ ರೀತಿಯಲ್ಲಿ ಸಾಗಬೇಕಾದರೆ ಬರೀ ರಾಜಕಾರಣಿಗಳು, ಅಧಿಕಾರಿಗಳಿಂದ ಆಗೋದಿಲ್ಲ. ಅದೇನಿದ್ದರೂ ಶಾಲೆ, ಕಾಲೇಜು ಮಕ್ಕಳು, ಯುವಕರು, ಪರಿಸರ ಪ್ರೇಮಿಗಳು ಸೇರಿದಂತೆ ಅಬಾಲವೃದ್ಧರಾದಿಯಾಗಿ ಎಲ್ಲರೂ ಕೈಜೋಡಿಸಿದಾಗ ಮಾತ್ರ ಹಸಿರು ಕಲ್ಯಾಣವಾಗುತ್ತದೆ. ಪರಿಸರಕ್ಕೆ ಆಗುವ ಹಾನಿಯನ್ನು ತಪ್ಪಿಸಲು ಮರದ ಸಸಿಗಳನ್ನು ನೆಡುವುದು ಪ್ರತಿಯೊಬ್ಬ ನಾಗರಿಕರ ಕರ್ತವ್ಯವಾಗಿದೆ. ಹೀಗಾಗಿ ಎಲ್ಲರೂ ಮಂಡಳಿಯ ಹಸಿರು ಕಲ್ಯಾಣ ಯೋಜನೆಗೆ ಕೈ ಜೋಡಿಸುವಂತೆ ಡಾ. ಅಜಯ್‌ಸಿಂಗ್ ವಿಶ್ವ ಪರಿಸರದ ದಿನದ ಈ ಸಂದರ್ಭದಲ್ಲಿ ಸಾರ್ವಜನಿಕರಲ್ಲಿ ಅವರು ಮನವಿ ಮಾಡಿದ್ದಾರೆ -ಡಾ. ಅಜಯಸಿಂಗ್ ಧರ್ಮಸಿಂಗ್

## ರೂಪರೇಶೆ ಸಿದ್ಧಪಡಿಸುವ ನಿಟ್ಟಿನಲ್ಲಿ ಸಿದ್ಧತೆ ಸಾಗಿವೆ

ಬೀದರ್‌ನಿಂದ ವಿಜಯಪುರದವರೆಗೆ ಇರುವ ಸರ್ಕಾರಿ ಜಾಗ, ಗಾವಠಾಣೆಯ ಪ್ರದೇಶಗಳಲ್ಲೆಲ್ಲಾ ಗ್ರೇಟ್ ಗ್ರೀನ್ ವಾಲ್ ಪರಿಕಲ್ಪನೆಯಂತೆ ಹಸಿರು ಗೋಡೆ ಕಟ್ಟುವ ವಿಚಾರ ಅನೇಕ ಬಾರಿ ಈ ಭಾಗದ ತಜ್ಞರು, ಪರಿಸರ ಪ್ರೇಮಿಗಳು ವ್ಯಕ್ತಪಡಿಸಿದ್ದಾರೆ. ಈ ಬಗ್ಗೆ ಅನೇಕ ಬಾರಿ ಚರ್ಚೆಗಳಾಗಿವೆ. ಇದನ್ನೆಲ್ಲ ಮನಗಂಡು ಅರಣ್ಯ ಅವಿಷ್ಕಾರ ಯೋಜನೆಯಲ್ಲಿ ತಾವು ಗ್ರೇಟ್ ಗ್ರೀನ್ ವಾಲ್ ಯೋಜನೆಯನ್ನೂ ಅನುಷ್ಠಾನಗೊಳಿಸುವ ಬಗ್ಗೆ ಉತ್ಸುಕನಾಗಿದ್ದು ಈ ಬಗ್ಗೆಯೂ ರೂಪರೇಶೆ ಸಿದ್ಧಪಡಿಸುವ ನಿಟ್ಟಿನಲ್ಲಿ ಸಿದ್ಧತೆ ಸಾಗಿವೆ ಎಂದು ಅವರು ತಿಳಿಸಿದ್ದಾರೆ.

## ಮಿನಿ ನ್ಯೂಸ್

### ಕಾರ್ಮಿಕ ಇಲಾಖೆ ವತಿಯಿಂದ ಅಂತರಾಜ್ಯ ಕಾರ್ಮಿಕರ ತಪಾಸಣೆ


ಉದಯವಾಹಿನಿ ಚಿತ್ರ

• ಉದಯವಾಹಿನಿ ಅರಸೀಕೆರೆ

ಗುರುವಾರ ಶ್ರೀಮತಿ ಯಮುನಾ, ಜಿಲ್ಲಾ ಕಾರ್ಮಿಕ ಅಧಿಕಾರಿಗಳು, ಹಾಸನ ಜಿಲ್ಲೆ ಇವರ ನೇತೃತ್ವದಲ್ಲಿ ಅರಸೀಕೆರೆ ತಾಲ್ಲೂಕು ಕಾರ್ಯವ್ಯಾಪ್ತಿಯಲ್ಲಿನ ಬಾಣಾವರ ಹಾಗೂ ಅರಕೆರೆಯ ಸುತ್ತಮುತ್ತಲಿನ ಜಲ್ಲಿ ಕ್ರಷರ್‌ಗಳನ್ನು ಅಂತರ್ ರಾಜ್ಯ ವಲಸೆ ಕಾರ್ಮಿಕ ಕಾಯ್ದೆ ಹಾಗೂ ಇತರೆ ಕಾಯ್ದೆಗಳಡಿಯಲ್ಲಿ ತಪಾಸಣೆ ನಡೆಸಲಾಯಿತು.

ಈ ಸಂದರ್ಭದಲ್ಲಿ ರಾಜ್ಯ ಗುಪ್ತಚರ ಇಲಾಖೆಯ ಅಸಿಸ್ಟೆಂಟ್ ಸಬ್ ಇನ್ಸ್‌ಪೆಕ್ಟರ್ ಶ್ರೀ ಶಿವಸ್ವಾಮಿ, ಶ್ರೀಮತಿ ಶಶಿಕಲಾ, ಕಾರ್ಮಿಕ ನಿರೀಕ್ಷಕರು ಅರಸೀಕೆರೆ, ಬಾಣಾವರ ಪೊಲೀಸ್ ಠಾಣೆ ಹಾಗೂ ಜಾವಗಲ್ ಪೋಲೀಸ್ ಠಾಣೆಯ ಅಧಿಕಾರಿಗಳು ಹಾಜರಿದ್ದರು. ತಪಾಸಣೆಯ ಸಂದರ್ಭದಲ್ಲಿ ಕಂಡು ಬಂದ ಅಂತರ್ ರಾಜ್ಯ ವಲಸೆ ಕಾರ್ಮಿಕರುಗಳ ದಾಖಲೆಗಳನ್ನು ಪರಿಶೀಲನೆ ನಡೆಸಲಾಯಿತು. ಅಂತರ್ ರಾಜ್ಯ ಕಾರ್ಮಿಕರನ್ನು ನೇಮಿಸಿಕೊಂಡಿರುವ ಮಾಲೀಕರುಗಳಿಗೆ ಕಾರ್ಮಿಕರಿಗೆ ಸಂಬಂಧಿಸಿದ ದಾಖಲೆಗಳನ್ನು ಕಾರ್ಮಿಕ ಇಲಾಖೆ ಹಾಗೂ ಸಂಬಂಧ ಪಟ್ಟ ಪೊಲೀಸ್ ಇಲಾಖೆಗೆ ಸಲ್ಲಿಸಿ ತುರ್ತಾಗಿ ಮಾಹಿತಿಗಳನ್ನು ನೀಡುವಂತೆ , ಜಿಲ್ಲಾ ಕಾರ್ಮಿಕ ಅಧಿಕಾರಿ ಶ್ರೀಮತಿ ಯಮುನಾ ಸೂಚನೆ ನೀಡಿದರು.

### ವಿಶ್ವ ತಂಬಾಕು ರಹಿತ ದಿನಾಚರಣೆ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಿಂಚೋಳಿ

ತಾಲ್ಲೂಕಾ ಸಾರ್ವಜನಿಕ ಆಸ್ಪತ್ರೆ ಹಾಗೂ ಪೋಲಕಪಳ್ಳಿಯ ಆದರ್ಶ ವಿದ್ಯಾಲಯದ ಸಂಯುಕ್ತ ಆಶ್ರಯದಲ್ಲಿ ಪಟ್ಟಣದ ಸಾರ್ವಜನಿಕ ಆಸ್ಪತ್ರೆಯಲ್ಲಿ ವಿಶ್ವ ತಂಬಾಕು ರಹಿತ ದಿನಾಚರಣೆ ಆಚರಿಸಲಾಯಿತು.

ದಂತ ವೈದ್ಯರಾದ ಡಾ.ದೀಪಾ ಮಾತನಾಡಿ ಶಾಲಾ ಮಕ್ಕಳಿಗೆ ತಂಬಾಕಿನ ದುಷ್ಪರಿಣಾಮಗಳ ಮತ್ತು ಹಲ್ಲಿನ ಸ್ವಚ್ಛತೆಯ ಬಗ್ಗೆ ಸ್ವವಿಸ್ತಾರವಾಗಿ ಅರಿವು ಮೂಡಿಸಿದರು. ಈ ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲ ದೇವಿಂದ್ರ,ಸ್ತ್ರೀ ಶಕ್ತಿ ಒಕ್ಕೂಟದ ಅಧ್ಯಕ್ಷ ನರಸಮ್ಮ ಲಕ್ಷ್ಮಣ ಅವುಂಟಿ,ಮತ್ತು ದಂತ ವೈದ್ಯರಾದ ಡಾ.ವಿಶ್ವನಾಥ,ಡಾ. ಸೂಗುರೇಶ ಜೇ.ಬುರಲಾ ಎನ್.ಸಿ.ಡಿ. ವೈದಯರು,ಮತ್ತು ವಿಜಯಶ್ರೀ ಸ್ವಪ್ನಾ ಮತ್ತು ಪ್ರೀತಿ ಅನೇಕರಿದ್ದರು.

### ಮೂಲ ಸೌಕರ್ಯ ಒದಗಿಸಲು ಒತ್ತಾಯ

• ಉದಯವಾಹಿನಿ ಕಲಬುರಗಿ

ಮಹಾನಗರ ಪಾಲಿಕೆಯ ವಾರ್ಡ್ ನಂಬರ್ 42ರಲ್ಲಿ ಬರುವ ಹೀರಾಪುರ ಬಡಾವಣೆಯ ಪರಿಶಿಷ್ಟ ಜಾತಿ (ಎಸ್‌ಸಿ) ಜನಾಂಗದ ರುದ್ರಭೂಮಿಯಲ್ಲಿ ಒಂದು ಬೋರವೆಲ್ ಇದ್ದು, ಅದಕ್ಕೆ ಸಾಕಷ್ಟು ನೀರು ಇರುವುದರಿಂದ ಮೋಟಾರ್ ಅಳವಡಿಸಿ ಒಂದು ಗುಮ್ಮಿ ಕೂಡಿಸುವುದರ ಮೂಲಕ ಸಾರ್ವಜನಿಕರಿಗೆ ನೀರಿನ ಅನುಕೂಲ ಮಾಡಿಕೊಡಬೇಕು ಎಂದು ಬಡಾವೆಯ ಪರಿಶಿಷ್ಟ ಜಾತಿ ಜನಾಂಗ ಜೀರ್ಣೋದ್ಧಾರ ಟ್ರಸ್ಟ್ ಮಹಾನಗರ ಪಾಲಿಕೆ ಆಯುಕ್ತರಿಗೆ ಮನವಿ ಮಾಡಿದೆ. ಈ ಮನವಿ ಹಿನ್ನೆಲೆಯಲ್ಲಿ ಮಹಾನಗರ ಪಾಲಿಕೆ ಆಯುಕ್ತರಾದ ಶಿಂಧೆ ಅವಿನಾಶ ಸಂಜೀವನ್ ಅವರು ಸ್ವತ: ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಈ ಸಂದರ್ಭದಲ್ಲಿ ಟ್ರಸ್ಟ್ ಅಧ್ಯಕ್ಷ ಶಿವಕುಮಾರ ಮದ್ರಿ, ಉಪಾಧ್ಯಕ್ಷ ರಾಣೋಜಿ ಡೆಪ್ಯೂಟಿ ಅವರು ಆಯುಕ್ತರಿಗೆ ಮನವಿ ಪತ್ರ ಸಲ್ಲಿಸಿ ರುದ್ರಭೂಮಿಯಲ್ಲಿರುವ ಬೋರವೆಲ್‌ಗೆ ಮೋಟಾರ್ ಅಳವಡಿಸಿ ಗುಮ್ಮಿ ಕೂಡಿಸಬೇಕು ಮತ್ತು ಅರ್ಧಕ್ಕೆ ನಿಂತಿರುವ ರುದ್ರಭೂಮಿಯ ಕಾಂಪೌಂಡ್‌ನ್ನು ಪೂರ್ಣಗೊಳಿಸಬೇಕು ಮನವಿ ಮಾಡಿಕೊಂಡರು.

### ಆರೋಗ್ಯ ಸಂಜೀವಿನಿ ಯೋಜನೆ ಪ್ರಯೋಜನ ಪಡೆಯಿರಿ

• ಉದಯವಾಹಿನಿ ಬೀದರ್

ರಾಜ್ಯ ಸರ್ಕಾರಿ ನೌಕರರು ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯ ಪ್ರಯೋಜನ ಪಡೆಯಬೇಕು ಎಂದು ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಸೋಮಶೇಖರ ಬಿರಾದಾರ ಸಲಹೆ ಮಾಡಿದರು. ನಗರದ ಪ್ರತಾಪನಗರದ ನೌಕರರ ಸಮುದಾಯ ಭವನದಲ್ಲಿ ನಡೆದ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಕಾರ್ಯಕಾರಿಣಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಯೋಜನೆ ಯಡಿ ನೌಕರರು ಹಾಗೂ ಅವರ ಅವಲಂಬಿತ ಕುಟುಂಬದ ಸದಸ್ಯರಿಗೆ ನಿಗದಿತ ಸರ್ಕಾರಿ ಹಾಗೂ ಖಾಸಗಿ ಆಸ್ಪತ್ರೆಗಳಲ್ಲಿ ನಗದು ರಹಿತ ವೈದ್ಯಕೀಯ ಸೌಲಭ್ಯ ಸಿಗಲಿದೆ. ಹೃದಯ ಸಂಬಂಧಿ ಕಾಯಿಲೆ, ಕ್ಯಾನ್ಸರ್, ಕಿಡ್ನಿ ವೈಫಲ್ಯ, ಡಯಾಲಿಸಿಸ್, ಅಂಗಾಂಗ ಕಸಿ, ಮೂಳೆ ಸಮಸ್ಯೆ, ನವಜಾತ ಶಿಶುಗಳ ಚಿಕಿತ್ಸಾ ಸೇವೆ, ತುರ್ತು ಶಸ್ತ್ರಚಿಕಿತ್ಸೆ, ಲಘು ಶಸ್ತ್ರಚಿಕಿತ್ಸೆ, ಲಘು ವೈದ್ಯಕೀಯ ಸೇವೆ ಇದರ ವ್ಯಾಪ್ತಿಗೆ ಬರಲಿವೆ ಎಂದು ತಿಳಿಸಿದರು.

### ಉದ್ಯೋಗ ಖಾತ್ರಿ ಯೋಜನೆ ಕೂಲಿ ಕಾರ್ಮಿಕರನ್ನು ಆರ್ಥಿಕವಾಗಿ ಸಬಲರಾಗಿಸಲಿದೆ

• ಉದಯವಾಹಿನಿ ಹುಮನಾಬಾದ

ಉದ್ಯೋಗ ಖಾತ್ರಿ ಯೋಜನೆಯಡಿ ಕೆಲಸ ನೀಡುವ ಮೂಲಕ ಗ್ರಾಮೀಣ ಭಾಗದ ಕೂಲಿ ಕಾರ್ಮಿಕರನ್ನು ಆರ್ಥಿಕವಾಗಿ ಸಬಲರನ್ನಾಗಿ ಮಾಡಬೇಕು ಎಂದು ತಾ.ಪಂ ಎಡಿ ಜಗನ್ನಾಥ್ ತಿಳಿಸಿದರು. ತಾಲ್ಲೂಕಿನ ಧೂಮ್ಮನಸೂರು ಗ್ರಾಮದಲ್ಲಿ ನರೇಗಾ ಯೋಜನೆಯಡಿಯಲ್ಲಿ ಕೆರೆ ಹೊಳೆತುವ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಮಾತನಾಡಿದವರು, ಒಂದು ಆರ್ಥಿಕ ವರ್ಷದಲ್ಲಿ 100 ದಿವಸ ಕೂಲಿ ಕೆಲಸ ನೀಡುವುದರ ಜೊತೆಗೆ ಫಲಾನುಭಾವಿಗಳ ಜೀವನಧಾರಕ್ಕೆ ನೆರವಾಗುವ ವೈಯಕ್ತಿಕ ಕಾಮಗಾರಿಗಳಿನ್ನು 5 ಲಕ್ಷ ರೂ. ಯೋಜನೆಯಡಿ ಪಡೆಯಲು ಅವಕಾಶವಿದೆ ಎಂದು ತಿಳಿಸಿದರು. ತಾಯಿ ಮತ್ತು ಮಕ್ಕಳಿಗೆ ಅನುಕೂಲವಾಗುವಂತೆ ಮಕ್ಕಳಿಗಾಗಿ ತಮ್ಮ ಗ್ರಾ.ಪಂ ಯಲ್ಲಿ ಕೂಸಿನ ಮನೆ ಸ್ಥಾಪನೆ ಮಾಡಲಾಗಿದೆ ಹಾಗಾಗಿ ತಾವು ಕೆಲಸಕ್ಕೆ ಬರುವ ಸಮಯದಲ್ಲಿ ತಮ್ಮ ಮಕ್ಕಳನ್ನು ಆ ಕೇಂದ್ರದಲ್ಲಿ ಬಿಟ್ಟು ಬರಬೇಕೆಂದು ಹೇಳಿದರು.


## ಸಿಮೆಂಟ್ ಟ್ರಕ್ ಹರಿದು ಒಂದೇ ಕುಟುಂಬದ ಒಂಬತ್ತು ಮಂದಿ ಸಾವು

**ಝುಬುವಾ:** ಮಧ್ಯಪ್ರದೇಶದ ಝುಬುವಾ ಜಿಲ್ಲೆಯಲ್ಲಿ ಬೆಳಗಿನ ಜಾವ ಸಿಮೆಂಟ್ ತುಂಬಿದ ಟ್ರಕ್‌ವೊಂದು ಪ್ರಯಾಣಿಕರ ವ್ಯಾನ್ ಮೇಲೆ ಉರುಳಿಬಿದ್ದ ಪರಿಣಾಮ ಒಂದೇ ಕುಟುಂಬಕ್ಕೆ ಸೇರಿದ ಒಂಬತ್ತು ಜನರು ಸಾವನ್ನಪ್ಪಿದ್ದಾರೆ.

ಮದುವೆ ಕಾರ್ಯಕ್ರಮದಿಂದ ಹಿಂತಿರುಗುತ್ತಿದ್ದಾಗ ಬೆಳಗಿನ ಜಾವ 2.30 ರ ಸುಮಾರಿಗೆ ಈ ಅಪಘಾತ ಸಂಭವಿಸಿದೆ. ಮೇಘನಗರ ತಹಶೀಲ್ ಪ್ರದೇಶದ ಸಂಜೆಲಿ ರೈಲ್ವೆ ಕ್ರಾಸಿಂಗ್ ಬಳಿ ತಾತ್ಕಾಲಿಕ ರಸ್ತೆಯ ಮೂಲಕ ನಿರ್ಮಾಣ ಹಂತದಲ್ಲಿರುವ ರೈಲು ಮೇಲೇತುವೆ (ಆರ್‌ಒಬಿ) ದಾಟುತ್ತಿದ್ದ ಟ್ರಕ್ ಸಮತೋಲನ ತಪ್ಪಿ ವ್ಯಾನ್ ಮೇಲೆ ಉರುಳಿದೆ ಎಂದು ಝುಬುವಾ ಪೊಲೀಸ್ ವರಿಷ್ಠಾಧಿಕಾರಿ ಪದವಿಲೋಚನ್ ಶುಕ್ಲಾ ತಿಳಿಸಿದ್ದಾರೆ.

ಅಪಘಾತದಲ್ಲಿ ಒಂಬತ್ತು ಜನರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ ಮತ್ತು ಇಬ್ಬರು ಗಾಯಗೊಂಡಿದ್ದಾರೆ ಎಂದು ಅವರು ಹೇಳಿದರು. ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲಿಸಲಾಗಿದ್ದು ಘಟನೆ ಕುರಿತಂತೆ ತನಿಖೆ ನಡೆದಿದೆ ಎಂದು ಹೇಳಿದರು.

## ಪ್ರವಾಹ: ಮೃತರ ಸಂಖ್ಯೆ 19ಕ್ಕೆ ಏರಿಕೆ, ಸಂಕಷ್ಟದಲ್ಲಿ 7 ಲಕ್ಷ ಜನ



**ಗುವಾಹಟಿ:** ಅಸ್ಸಾಂನಲ್ಲಿ ಭಾರಿ ಮಳೆಯಿಂದಾಗಿ ಪ್ರವಾಹ ಸ್ಥಿತಿ ಮುಂದುವರಿದಿದ್ದು, 21 ಜಿಲ್ಲೆಗಳಲ್ಲಿ ಸುಮಾರು ಏಳು ಲಕ್ಷ ಜನರು ಸಂಕಷ್ಟಕ್ಕೀಡಾಗಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಪ್ರಮುಖ ನದಿಗಳಲ್ಲಿ ನೀರಿನ ಮಟ್ಟ ಏರಿಕೆಯಾಗುತ್ತಿವೆ. ಪ್ರವಾಹ ಹಾಗೂ ಭೂಕುಸಿತದಲ್ಲಿ ಮತಪಟ್ಟವರ ಸಂಖ್ಯೆ 19ಕ್ಕೆ ಏರಿಕೆಯಾಗಿದೆ. ಬ್ರಹ್ಮಪುತ್ರ ಸೇರಿದಂತೆ ರಾಜ್ಯದ ಒಂಬತ್ತು ಪ್ರಮುಖ ನದಿಗಳು ಅಪಾಯ ಮಟ್ಟವನ್ನು ಮೀರಿ ಹರಿಯುತ್ತಿವೆ. ರಾಜ್ಯದಲ್ಲಿ 5,15,737 ಪ್ರಾಣಿಗಳು ಸಂಕಷ್ಟಕ್ಕೊಳಗಾಗಿವೆ.

405 ಪರಿಹಾರ ಕೇಂದ್ರಗಳನ್ನು ತೆರೆಯಲಾಗಿದ್ದು, 1,12,324 ನಿರಾಶ್ರಿತರು ಆಶ್ರಯ ಪಡೆದಿದ್ದಾರೆ. ರಾಜ್ಯದೆಲ್ಲೆಡೆ ರಸ್ತೆ, ಸೇತುವೆ, ವಿದ್ಯುತ್ ಕಂಬ, ಶಿಕ್ಷಣ ಸಂಸ್ಥೆ ಹಾಗೂ ಮೂಲಸೌಕರ್ಯಗಳಿಗೆ ಹಾನಿಯಾಗಿವೆ. ಭಾರಿ ಮಳೆ ಹಾಗೂ ಪ್ರವಾಹದಿಂದಾಗಿ ಹಲವೆಡೆ ರೈಲು ಸೇವೆಯನ್ನು ಸ್ಥಗಿತಗೊಳಿಸಲಾಗಿದೆ.

## ಪ್ರಿಯಕರನ ಜತೆ ಸೇರಿ ಹೆತ್ತ ಮಗಳ ಮೇಲೆ ಲೈಂಗಿಕ ದೌರ್ಜನ್ಯ

**ಹರಿದ್ವಾರ:** ಯಾತ್ರಾ ಸ್ಥಳ ಪವಿತ್ರ ಭೂಮಿ ಹರಿದ್ವಾರದಲ್ಲಿ ಮಾಜಿ ಬಿಜೆಪಿ ನಾಯಕಿ ಅನೈತಿಕ ಕೃತ್ಯ ಬೆಳಕಿಗೆ ಬಂದಿದೆ. ಬಿಜೆಪಿ ನಾಯಕಿಯ ಅಪ್ರಾಪ್ತ ಮಗಳು ತನ್ನ ತಾಯಿಯ ವಿರುದ್ಧ ಗಂಭೀರ ಆರೋಪಗಳನ್ನು ಮಾಡಿದ್ದಾಳೆ. ತಾನು ಹೆತ್ತ ಮಗಳ ಮೇಲೆ ತಾಯಿ ತನ್ನ ಪ್ರಿಯಕರನಿಂದ ಮಗಳ ಮೇಲೆ ಲೈಂಗಿಕ ದೌರ್ಜನ್ಯ ನಡೆಸುತ್ತಿದ್ದಳು ಎಂದು ಆರೋಪಿಸಲಾಗಿದೆ. ಸಂತ್ರಸ್ತ ಹುಡುಗಿಯ ದೂರಿನ ಮೇರೆಗೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು

ಬಿಜೆಪಿ ಮಹಿಳಾ ಮೋರ್ಚಾದ ಮಾಜಿ ಜಿಲ್ಲಾ ಅಧ್ಯಕ್ಷೆ ಮತ್ತು ಆಕೆಯ ಗೆಳೆಯನನ್ನು ತಮ್ಮ ಅಪ್ರಾಪ್ತ ಮಗಳ ಮೇಲೆ ಅತ್ಯಾಚಾರ ಮಾಡಿದ ಆರೋಪದ ಮೇಲೆ ಬಂಧಿಸಲಾಗಿದೆ. ಆರೋಪಿ ಮಹಿಳೆಯನ್ನು ಬಿಜೆಪಿ ಪಕ್ಷದಿಂದ ಹೊರಹಾಕಿದೆ.

ಮತ್ತೊಬ್ಬ ಆರೋಪಿ ಇನ್ನೂ ತಲೆಮರೆಸಿಕೊಂಡಿದ್ದು, ಪೊಲೀಸರು ಆತನಿಗಾಗಿ ಹುಡುಕಾಟ ನಡೆಸುತ್ತಿದ್ದಾರೆ.



ಆರೋಪಿ ಮಹಿಳೆ ತನ್ನ ಪತಿಯೊಂದಿಗೆ ಬಹಳ ದಿನಗಳಿಂದ ಜಗಳವಾಡುತ್ತಿದ್ದಳು ಎಂದು ಪೊಲೀಸ್ ತನಿಖೆಯಲ್ಲಿ ತಿಳಿದುಬಂದಿದೆ. ಸಂತ್ರಸ್ತೆ ತನ್ನ ತಂದೆಯೊಂದಿಗೆ ಒಂದು ತಿಂಗಳಿನಿಂದ ವಾಸಿಸುತ್ತಿದ್ದು. ಲವಲವಿಕೆಯಿಂದ ಇದ್ದ ಮಗಳು ತುಂಬಾ ಮೌನವಾಗಿರುವುದನ್ನು ಕಂಡು ತಂದೆ ಮಗಳನ್ನು ಪ್ರಶ್ನಿಸಿದ್ದಾರೆ. ಆಗ ಮಗಳು ನಡೆದ ಸಂಗತಿ ಕುರಿತು ತಂದೆಯ ಬಳಿ ಹೇಳಿದ್ದಾಳೆ. ಮಗಳು ಹೇಳಿದ ವಿಷಯ ಕೇಳಿ ತಂದೆ ತೀವ್ರ ಆಘಾತಕ್ಕೆ ಒಳಗಾಗಿದ್ದಾರೆ.

ತನ್ನ ತಾಯಿ ಆಕೆಯ ಪ್ರಿಯಕರ ಮತ್ತು ಇತರರು ತನ್ನ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದಾರೆ ಎಂದು ಅಪ್ರಾಪ್ತ ಬಾಲಕಿ ಆರೋಪಿಸಿದ್ದಾರೆ. ಸಂತ್ರಸ್ತೆ ಪೊಲೀಸರಿಗೆ ಲಿಖಿತ ದೂರು ಸಹ ನೀಡಿದ್ದು ದೂರಿನ ಆಧಾರದ ಮೇಲೆ ಪೊಲೀಸರು ಪ್ರಕರಣದ ತನಿಖೆ ನಡೆಸಿ ಸಂತ್ರಸ್ತೆಯನ್ನು ವೈದ್ಯಕೀಯ ಪರೀಕ್ಷೆಗೆ ಒಳಪಡಿಸಿದ್ದಾರೆ. ಇದಲ್ಲದೆ, ಸೆಕ್ಷನ್ 164 ರ ಅಡಿಯಲ್ಲಿ ಸಂತ್ರಸ್ತೆಯ ಹೇಳಿಕೆಯನ್ನು ಸಹ ದಾಖಲಿಸಲಾಗಿದೆ. ತನಿಖೆ ಮತ್ತು ವೈದ್ಯಕೀಯ ಪರೀಕ್ಷೆಯಲ್ಲಿ ಎಲ್ಲಾ ಆರೋಪಗಳು ನಿಜವೆಂದು ಕಂಡುಬಂದಿದೆ.

● ಇದೇ ಸಂಕೀರ್ಣದಲ್ಲಿರುವ ಎಂಟು ದೇವಸ್ಥಾನಗಳಲ್ಲಿ ಕೂಡ ವಿವಿಧ ದೇವತಾ ಮೂರ್ತಿಗಳ ಪ್ರಾಣ ಪ್ರತಿಷ್ಠಾಪನೆ

# ಅಯೋಧ್ಯೆ: 'ರಾಜಾ ರಾಮ' ಮೂರ್ತಿ ಪ್ರತಿಷ್ಠಾಪನೆ

**ಅಯೋಧ್ಯೆ:** ರಾಮ ದೇವರು ರಾಜನ ಸ್ವರೂಪದಲ್ಲಿರುವ 'ರಾಜಾ ರಾಮ' ಮೂರ್ತಿಯ ಪ್ರಾಣ ಪ್ರತಿಷ್ಠಾಪನೆ ಕಾರ್ಯ ಇಲ್ಲಿ ಗುರುವಾರ ವಿಧ್ಯುಕ್ತವಾಗಿ ನೆರವೇರಿತು. ಶ್ರೀರಾಮ ಮಂದಿರ ದೇಗುಲ ಸಂಕೀರ್ಣದಲ್ಲಿ, ಅತ್ಯಂತ ಮಂಗಳಕರ ಎಂದು ಭಾವಿಸಲಾದ ಅಭಿಜಿನ್ ಮುಹೂರ್ತದಲ್ಲಿ ಪ್ರಾಣ ಪ್ರತಿಷ್ಠಾಪನೆ ಕಾರ್ಯ ನೆರವೇರಿತು.

ಇದೇ ಸಂಕೀರ್ಣದಲ್ಲಿರುವ 8 ದೇವಸ್ಥಾನಗಳಲ್ಲಿ ಕೂಡ ವಿವಿಧ ದೇವತಾ ಮೂರ್ತಿಗಳ ಪ್ರಾಣ ಪ್ರತಿಷ್ಠಾಪನೆ ಕೂಡ ಇದೇ ಸಂದರ್ಭದಲ್ಲಿ ನೆರವೇರಿತು. ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ ಅವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದು, ಪೂಜೆ ನೆರವೇರಿಸಿದರು.

ಕಳೆದ ವರ್ಷ ಜನವರಿ 22ರಂದು, ಪ್ರಧಾನಿ ನರೇಂದ್ರ ಮೋದಿ ಸಮ್ಮುಖದಲ್ಲಿ ಬಾಲ ರಾಮನ ಮೂರ್ತಿಯ ಪ್ರಾಣ ಪ್ರತಿಷ್ಠಾಪನೆ ನಡೆದಿತ್ತು. ಇಂದು ಎರಡನೇ ಪ್ರಮುಖ ಪ್ರಾಣ ಪ್ರತಿಷ್ಠಾಪನೆಗೆ ರಾಮ ಮಂದಿರ ಸಂಕೀರ್ಣ ಸಾಕ್ಷಿಯಾಯಿತು.

**ಧಾರ್ಮಿಕ ವಿಧಿಗಳು:** 'ಯಜ್ಞ ಮಂಟಪ'ದಲ್ಲಿ ಬೆಳಿಗ್ಗೆ 6.30ಕ್ಕೆ ಪ್ರಾರ್ಥನೆಗಳೊಂದಿಗೆ ವಿವಿಧ ದೇವರ ಮೂರ್ತಿಗಳ ಪ್ರಾಣ ಪ್ರತಿಷ್ಠಾಪನೆ ಕಾರ್ಯಕ್ಕೆ ಚಾಲನೆ ದೊರೆಯಿತು. ನಂತರ, 9.30ಕ್ಕೆ ಹವನ, ನಂತರ ಏಕ ಕಾಲಕ್ಕೆ ಎಲ್ಲಾ ದೇವಸ್ಥಾನಗಳಲ್ಲಿ ಧಾರ್ಮಿಕ ವಿಧಿಗಳು ನಡೆದವು. ನೇರ ಪ್ರಸಾರದಲ್ಲಿ ದೊಡ್ಡ ಪರದೆಗಳಲ್ಲಿ ಮೂಡಿಬಂದ ಪೂಜಾ ಕಾರ್ಯಕ್ರಮಗಳನ್ನು ಜನರು ಕಣ್ತುಂಬಿಕೊಂಡರು. ಬಾಲ ರಾಮನ ಮೂರ್ತಿಯ ದರ್ಶನ ಪಡೆದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ ಅವರು, ನಂತರ ಮೊದಲ ಮಹಡಿಗೆ ತೆರಳಿ ರಾಮನ ದರ್ಬಾರದ ದರ್ಶನ ಪಡೆದರು. ಬಳಿಕ, ದೇಗುಲ ಸಂಕೀರ್ಣ ಸನಿಹದಲ್ಲಿರುವ ಹನುಮಾನ್‌ಗಡಿಗೂ ಭೇಟಿ ನೀಡಿದರು.



**ಈ ವರ್ಷದ ಗಂಗಾ ದಶಹರವು ಪವಿತ್ರವಷ್ಟೇ ಅಲ್ಲ ಐತಿಹಾಸಿಕ ಮಹತ್ವವನ್ನೂ ಹೊಂದಿದೆ. 500 ವರ್ಷಗಳ ಸುದೀರ್ಘ ಹೋರಾಟದ ನಂತರ 'ರಾಜಾ ರಾಮ' ಸ್ವರೂಪದ ರಾಮ ದೇವರ ಪ್ರಾಣ ಪ್ರತಿಷ್ಠಾಪನೆಯನ್ನು ಅಯೋಧ್ಯೆಯ ಭವ್ಯ ಮಂದಿರದಲ್ಲಿ ನೆರವೇರಿಸಲಾಗಿದೆ -ಮಹಂತ ರಘುವರ ಶರಣ, ರಸಿಕ ನಿವಾಸ ದೇವಸ್ಥಾನದ ಮುಖ್ಯ ಅರ್ಚಕ**

### ದೇವತಾ ಮೂರ್ತಿಗಳ ಪ್ರತಿಷ್ಠಾಪನೆ

ರಾಜಾಂಗಣದಲ್ಲಿ ಶ್ರೀರಾಮ ದೇವರ ಮೂರ್ತಿಯ ಪ್ರಾಣ ಪ್ರತಿಷ್ಠಾಪನೆ ನೆರವೇರಿತು. ಈಶಾನ್ಯ ಮೂಲೆಯಲ್ಲಿ ಶೇಷಾವತಾರ ಹಾಗೂ ಶಿವನ ಮೂರ್ತಿಗಳು ಆಗ್ನೇಯ ಮೂಲೆಯಲ್ಲಿ ಗಣೇಶ ದಕ್ಷಿಣದಲ್ಲಿ ಹನುಮಾನ್ ನೈರುತ್ಯದಲ್ಲಿ ಸೂರ್ಯದೇವರು ವಾಯವ್ಯ ಮೂಲೆಯಲ್ಲಿ ಭಗವತಿ ದೇವಿ ಹಾಗೂ ಉತ್ತರದಲ್ಲಿ ದೇವಿ ಅನ್ನಪೂರ್ಣಾ ಮೂರ್ತಿ ಪ್ರಾಣ ಪ್ರತಿಷ್ಠಾಪನೆ ಮಾಡಲಾಗಿದೆ ಎಂದು ಶ್ರೀರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್ ತಿಳಿಸಿದೆ. ಪ್ರಾಣ ಪ್ರತಿಷ್ಠಾಪನೆ ಕಾರ್ಯವನ್ನು ವೈದಿಕ ಸಂಪ್ರದಾಯದಂತೆ ನೆರವೇರಿಸಲಾಯಿತು. ದೇಶದ ವಿವಿಧ ಭಾಗಗಳಿಂದ ಆಗಮಿಸಿದ್ದ ಪಂಡಿತರು ಎಲ್ಲಾ ಧಾರ್ಮಿಕ ವಿಧಿಗಳನ್ನು ನಡೆಸಿಕೊಟ್ಟರು' ಎಂದು ಶ್ರೀರಾಮ ಜನ್ಮಭೂಮಿ ತೀರ್ಥಕ್ಷೇತ್ರ ಟ್ರಸ್ಟ್‌ನ ಟ್ರಸ್ಟಿ ಅನಿಲ್ ಮಿಶ್ರಾ ಹೇಳಿದ್ದಾರೆ. ಗಂಗಾ ದಶಹರ ದಿನವೇ ಪ್ರಾಣ ಪ್ರತಿಷ್ಠಾಪನೆ ನೆರವೇರಿರುವುದು ಹೊಸ ಆರಂಭದ ಸಂಕೇತವೆನಿಸಿದೆ. ಶತಮಾನಗಳ ತಪಸ್ಸು ಹೋರಾಟ ಹಾಗೂ ನಂಬಿಕೆಗಳು ಸಾಕಾರಗೊಂಡ ಕ್ಷಣವೂ ಇದಾಗಿದು' ಎಂದು ಹೇಳಿದ್ದಾರೆ.


**ಗಂಗಾ ದಶಹರದಂದು ನೆರವೇರಿಸಲಾಗುವ ಯಾವುದೇ ಕಾರ್ಯದಿಂದ ಹಲವು ಪಟ್ಟು ಪ್ರತಿಫಲ ಲಭಿಸುತ್ತದೆ ಎಂಬ ನಂಬಿಕೆ ಇದೆ. ಇದೇ ಕಾರಣಕ್ಕೆ ಈ ದಿನವೇ 'ರಾಜಾ ರಾಮ'ನ ಮೂರ್ತಿ ಪ್ರಾಣ ಪ್ರತಿಷ್ಠಾಪನೆಗೆ ಟ್ರಸ್ಟ್ ನಿರ್ಧರಿಸಿರಬಹುದು**
**-ಪಂಡಿತ ಕಲ್ಕಿ ರಾಮ, ಅಯೋಧ್ಯೆ ಮೂಲದ ವಿದ್ವಾಂಸ**

ರಾಮ ದೇವರು ಜನಿಸಿದ ಈ ಪವಿತ್ರ ಭೂಮಿಯಲ್ಲಿ ವಿವಿಧ ದೇವತಾ ಮೂರ್ತಿಗಳ ಪ್ರಾಣ ಪ್ರತಿಷ್ಠಾಪನೆಗೆ ಸಾಕ್ಷಿಯಾಗುವ ಪುಣ್ಯ ನಮಗೆ ಲಭಿಸಿದೆ' ಎಂದು ಅವರು 'ಎಕ್ಸ್'ನಲ್ಲಿ ಪೋಸ್ಟ್ ಮಾಡಿದ್ದಾರೆ.

## ಕೇಂದ್ರ ಸರಕಾರದ ಜನಗಣತಿ, ಜಾತಿಗಣತಿಗೆ ಡೇಟ್ ಫಿಕ್ಸ್

**ಹೊಸದಿಲ್ಲಿ:** ಬಹು ನಿರೀಕ್ಷಿತ ಜನಗಣತಿ, ಜಾತಿಗಣತಿಗೆ ಕೇಂದ್ರ ಸರಕಾರ ಮುಹೂರ್ತ ಪ್ರಕಟಿಸಿದೆ. 2027ರಲ್ಲಿ ದೇಶದ 16ನೇ ಜನಗಣತಿಯ ಜತೆ ಜತೆಗೇ ಜಾತಿಗಣತಿ ನಡೆಸಲಾಗುವುದು ಎಂದು ಕೇಂದ್ರ ಗೃಹ ಸಚಿವಾಲಯ ಬುಧವಾರ ಮಾಹಿತಿ ನೀಡಿದೆ. ಎರಡು ಹಂತಗಳಲ್ಲಿ ಜನಗಣತಿ ಮತ್ತು ಜಾತಿಗಣತಿ ನಡೆಯಲಿದೆ. ಜಮ್ಮು - ಕಾಶ್ಮೀರ, ಲಡಾಖ್, ಹಿಮಾಚಲ ಪ್ರದೇಶ ಮತ್ತು

- 2027ರಲ್ಲಿ ದೇಶದ 16ನೇ ಜನಗಣತಿಯೊಂದಿಗೆ ಜಾತಿಗಣತಿ ನಡೆಸಲು ನಿರ್ಧರಿಸಿದೆ ಕೇಂದ್ರ ಗೃಹ ಸಚಿವಾಲಯ
- ಹಿಮಚ್ಛಾದಿತ ಪ್ರದೇಶಗಳಲ್ಲಿ 2026ರ ಅಕ್ಟೋಬರ್ 1ರಿಂದಲೇ ಜನಗಣತಿ ಆರಂಭ
- ಉಳಿದ ಭಾಗಗಳಲ್ಲಿ 2027ರ ಮಾರ್ಚ್ 1ರಿಂದ ನಡೆಯಲಿದೆ ಜನಗಣತಿ, ಜಾತಿ ಗಣತಿ
- ಸುಮಾರು 30 ಲಕ್ಷ ಕಾರ್ಯಕರ್ತರು ಈ ಬೃಹತ್ ಪ್ರಕ್ರಿಯೆಯಲ್ಲಿ ಭಾಗವಹಿಸುವ ನಿರೀಕ್ಷೆ




ಉತ್ತರಾಖಂಡದಂತಹ ಹಿಮಚ್ಛಾದಿತ ಪ್ರದೇಶಗಳಲ್ಲಿ 2026ರ ಅಕ್ಟೋಬರ್ 1ರಿಂದಲೇ ಜನಗಣತಿ ಆರಂಭವಾಗಲಿದೆ. ದೇಶದ ಉಳಿದ ಭಾಗಗಳಲ್ಲಿ 2027ರ ಮಾರ್ಚ್ 1ರಿಂದ ಜನ ಗಣತಿಯೊಂದಿಗೆ ಜಾತಿ ಗಣತಿ ನಡೆಸಲಾಗುವುದು ಎಂದು ಗೃಹ ಸಚಿವಾಲಯ ಪ್ರಕಟಣೆಯಲ್ಲಿ ತಿಳಿಸಿದೆ.

ವಿಶ್ವದಲ್ಲೇ ಅತಿ ಹೆಚ್ಚು ಜನಸಂಖ್ಯೆ ಇರುವ ಭಾರತ ದೇಶದಲ್ಲಿ ನಡೆಯಲಿರುವ ಈ ಬೃಹತ್ ಪ್ರಕ್ರಿಯೆಯಲ್ಲಿ ಸುಮಾರು 30 ಲಕ್ಷ ಕಾರ್ಯಕರ್ತರು ಭಾಗಿಯಾಗುವ ಸಾಧ್ಯತೆಯಿದೆ. ಕಡೆಯ ಬಾರಿಗೆ 2011ರಲ್ಲಿ ಜನಗಣತಿ ನಡೆದಿತ್ತು. ಇದಾಗಿ 16 ವರ್ಷಗಳ ಬಳಿಕ ಮತ್ತೊಮ್ಮೆ ಈ ಪ್ರಕ್ರಿಯೆಗೆ ಚಾಲನೆ ದೊರೆಯಲಿದೆ.

## ಜನನ ಪ್ರಮಾಣ ತೀವ್ರ ಕುಸಿತ

**ಟೋಕಿಯೊ:** ಜಪಾನ್‌ನಲ್ಲಿ ಜನನ ಪ್ರಮಾಣವು ನಿರೀಕ್ಷೆಗಿಂತ ವೇಗವಾಗಿ ಕುಸಿಯುತ್ತಿದೆ. ಕಳೆದ ವರ್ಷದ ವಾರ್ಷಿಕ ಜನನ ಪ್ರಮಾಣವು ಕನಿಷ್ಠ ಮಟ್ಟವನ್ನು ದಾಖಲಿಸಿದೆ ಎಂದು ಸರ್ಕಾರ ಬಿಡುಗಡೆ ಮಾಡಿದ ವರದಿಯಲ್ಲಿ ತಿಳಿಸಿದೆ. 2024ರಲ್ಲಿ ದೇಶದಲ್ಲಿ 6,86,061 ಶಿಶುಗಳು ಜನಿಸಿವೆ. 2023ಕ್ಕೆ ಹೋಲಿಸಿದರೆ ಜನನ ಪ್ರಮಾಣ ಶೇಕಡ 5.7ರಷ್ಟು ಕುಸಿತವಾಗಿದೆ. 1899ರ ಬಳಿಕ ಇದೇ ಮೊದಲಿಗೆ ವರ್ಷವೊಂದರಲ್ಲಿ 7 ಲಕ್ಷಕ್ಕಿಂತ ಕಡಿಮೆ ಶಿಶುಗಳು ಜನಿಸಿವೆ.


ಇದರೊಂದಿಗೆ 16ನೇ ವರ್ಷವೂ ಜನನ ಪ್ರಮಾಣ ಕುಸಿತ ಮುಂದುವರಿದಿದೆ. ಕುಸಿಯುತ್ತಿರುವ ಜನನ ಪ್ರಮಾಣ ಮತ್ತು ಹೆಚ್ಚು ವೃದ್ಧರ ಸಂಖ್ಯೆ ಇರುವ ಪೂರ್ವ ಏಷ್ಯಾದ ರಾಷ್ಟ್ರಗಳಲ್ಲಿ ಜಪಾನ್ ಕೂಡ ಒಂದಾಗಿದೆ. ಪರಿಸ್ಥಿತಿ ಕುರಿತು ಪ್ರಧಾನಿ ಶಿಗೆರು ಇಶಿಬಾ ಕಳವಳ ವ್ಯಕ್ತಪಡಿಸಿದ್ದಾರೆ. ಕೆಲಸ ಮತ್ತು ಮಕ್ಕಳ ಪಾಲನೆಯನ್ನು ಸರಿದೂಗಿಸಲು ವಿವಾಹಿತರಿಗೆ ಅನುಕೂಲವಾಗುವಂತೆ ಕೆಲಸದ ವಾತಾವರಣ ಸೃಷ್ಟಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ.

## ಉಕ್ರೇನ್ ವಿರುದ್ಧ ಪ್ರತೀಕಾರಕ್ಕೆ ರಷ್ಯಾ ಪ್ರತಿಜ್ಞೆ

**ಮಾಸ್ಕೋ:** ರಷ್ಯಾದ ವಾಯುನೆಲೆಗಳ ಮೇಲೆ ಉಕ್ರೇನ್ ನಡೆಸಿದ ಪ್ರಮುಖ ಡ್ರೋನ್ ದಾಳಿಗೆ ಪ್ರತಿಯಾಗಿ ಸೇಡು ತೀರಿಸಿಕೊಳ್ಳುವುದಾಗಿ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಗುಡುಗಿದ್ದಾರೆ ಈ ಕುರಿತು ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಉಕ್ರೇನ್ ಅಧ್ಯಕ್ಷ ವಲೋಡಿಮಿರ್ ಝೆಲೆನ್ಸ್ಕಿ ಅವರಿಗೆ ಎಚ್ಚರಿಕೆ ವಹಿಸುವಂತೆ ತಿಳಿಸಿದ್ದಾರೆ. ಜೊತೆಗೆ ಉಕ್ರೇನ್ ಮೇಲೆ ದಾಳಿ ನಡೆಸದಂತೆ ರಷ್ಯಾಗೂ ಸೂಚಿಸಿದ್ದಾರೆ.

ರಷ್ಯಾದ ಅಧ್ಯಕ್ಷ ಪುಟಿನ್ ಅವರೊಂದಿಗೆ ದೂರವಾಣಿಯಲ್ಲಿ ಮಾತನಾಡಿದ ಡೊನಾಲ್ಡ್ ಟ್ರಂಪ್, ಉಕ್ರೇನ್ ನಡೆಸಿದ ದಾಳಿಗೆ ಯಾವುದೇ ಪ್ರತಿದಾಳಿ ನಡೆಸಬೇಡಿ. ಹಾಗೊಂದು ವೇಳೆ ದಾಳಿ ಮಾಡಿದರೆ ಪರಿಣಾಮ ಎದುರಿಸಬೇಕಾಗುತ್ತದೆ ಎಂದು ಎಚ್ಚರಿಸಿರುವುದಾಗಿ ಶ್ವೇತಭವನದ ಮೂಲಗಳು ತಿಳಿಸಿವೆ.

ರಷ್ಯಾ ಮೇಲೆ ನಡೆದಿರುವ ದಾಳಿ ನಡೆದಿರುವುದನ್ನು ಯಾವುದೇ ಕಾರಣಕ್ಕೂ ಸಹಿಸಲು ಸಾಧ್ಯವಿಲ್ಲ, ಉಕ್ರೇನ್‌ಗೆ ತಕ್ಕ ಪ್ರತ್ಯುತ್ತರ ನೀಡುತ್ತೇವೆ ಎಂದು ರಷ್ಯಾ ಪಣತೊಟ್ಟಿದೆ ಎನ್ನಲಾಗಿದೆ. ಅಮೇರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರು ಒಂದು ಗಂಟೆಗೂ ಅಧಿಕ ಸಮಯದ ಅವಧಿಯ ಮಾತುಕತೆಯ ವೇಳೆ ಉಭಯ ನಾಯಕರು ಉಕ್ರೇನ್ ವಿಷಯ ಸೇರಿದಂತೆ ಹಲವು ವಿಷಯಗಳ ಕುರಿತು ಸುದೀರ್ಘ ಚರ್ಚೆ ನಡೆಸಿದ್ದಾರೆ ಎಂದು ತಿಳಿಸಲಾಗಿದೆ. ನಿರಂತರ ರಷ್ಯಾದ ಕ್ಷಿಪಣಿ ಮತ್ತು ಡ್ರೋನ್ ದಾಳಿಗಳಿಗೆ ಅಮೆರಿಕ ''ಹೆಚ್ಚಿನ ನಿರ್ಬಂಧ ಮತ್ತು ಒತ್ತಡ ಹೇರಿದೆ. ಯಾವುದೇ ದೇಶದ ಮೇಲೆ ದಾಳಿ, ಪ್ರತಿದಾಳಿ ನಡೆಸುವುದು ಸರಿಯಲ್ಲ ಎಂದು ಸಲಹೆ ನೀಡಿದ್ದಾರೆ ಎಂದು ಶ್ವೇತಭವನದ ಮೂಲಗಳು ತಿಳಿಸಿವೆ. ರಷ್ಯಾ ಮತ್ತು ಉಕ್ರೇನ್ ನಡುವೆ ಕಳೆದ 3 ವರ್ಷಗಳಿಗೂ ಅಧಿಕ ಸಮಯದಿಂದ ನಡೆಯುತ್ತಿರುವ ಯುದ್ಧ ಕೊನೆಗೊಳಿಸಿ ಶಾಂತಿ ನೆಲೆಸುವಂತೆ ಮಾಡಲು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಗೆ ಅಮೇರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಎರಡು ವಾರಗಳ ಗಡುವು ನೀಡಿದ್ದರು.



**''ಅಗಾಧ ಸಾಮರ್ಥ್ಯ ಹೊಂದಿರುವ ದೇಶಗಳ ನಡುವಿನ ಸಹಕಾರ ಮತ್ತು ಉತ್ತಮ ಬಾಂಧವ್ಯ ಮರು ಸ್ಥಾಪನೆ ಬಗ್ಗೆ ಉಭಯ ನಾಯಕರು ಚರ್ಚೆ ನಡೆಸಿದ್ದಾರೆ. ಜೂನ್ 1ರಂದು ರಷ್ಯಾದ ವಾಯುನೆಲೆಗಳ ಮೇಲೆ ಉಕ್ರೇನ್ ನಡೆಸಿದ ದಾಳಿಗೆ ಪುಟಿನ್ ಕೋಪಗೊಂಡಿದ್ದು ಸೇಡು ತೀರಿಸಿಕೊಳ್ಳಲು ಮುಂದಾಗಿದ್ದಾರೆ ಎಂದು ಹೇಳಲಾಗಿದೆ**

## ಅಮೆರಿಕ ಅಧ್ಯಕ್ಷಸ್ಥಾನದ ಬಗ್ಗೆ ಗೌರವವಿದೆ, ಮಧ್ಯಸ್ಥಿಕೆ ಅವಶ್ಯಕತೆ ಇಲ್ಲ


**ವಾಷಿಂಗ್ಟನ್:** ಭಾರತವು ಅಮೆರಿಕದ ಅಧ್ಯಕ್ಷ ಸ್ಥಾನದ ಬಗ್ಗೆ ಅಪಾರ ಗೌರವವನ್ನು ಹೊಂದಿದೆ ಆದರೆ ನವದೆಹಲಿ ಯಾರನ್ನೂ ಮಧ್ಯಸ್ಥಿಕೆ ವಹಿಸಲು ಎಂದಿಗೂ ಬಯಸಿಲ್ಲ ಮತ್ತು ಯಾರೂ ನಮಗೆ ನಿಲ್ಲಿಸಿ ಎಂದು ಹೇಳುವ ಅಗತ್ಯವಿರಲಿಲ್ಲ ಎಂದು ಕಾಂಗ್ರೆಸ್ ಸಂಸದ ಶಶಿ ತರೂರ್ ಹೇಳಿದರು.

ಭಾರತ ಮತ್ತು ಪಾಕಿಸ್ತಾನ ನಡುವಿನ ಇತ್ತೀಚಿನ ಮಿಲಿಟರಿ ಸಂಘರ್ಷದಲ್ಲಿ ಮಧ್ಯಸ್ಥಿಕೆ ವಹಿಸುತ್ತಿದ್ದಾರೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಪದೇ ಪದೇ ಹೇಳುತ್ತಿರುವ ನಡುವೆ. ನಾನು ಹೇಳಬಲ್ಲೆ, ನಮಗೆ ಅಮೆರಿಕದ ಅಧ್ಯಕ್ಷ ಸ್ಥಾನ ಮತ್ತು ಅಮೆರಿಕದ ಅಧ್ಯಕ್ಷರ ಬಗ್ಗೆ ಅಪಾರ ಗೌರವವಿದೆ. ನಾವು ಸ್ವತಃ ಹೇಳಬಹುದಾದದ್ದು. ನಾವು ಯಾರನ್ನೂ ಮಧ್ಯಸ್ಥಿಕೆ ವಹಿಸಲು ಎಂದಿಗೂ ಬಯಸಿಲ್ಲ ಎಂದು ಅವರು ತಿಳಿಸಿದರು.

ಅಮೆರಿಕ ಸಂಸದರು ಮತ್ತು ಸರ್ಕಾರಿ ಅಧಿಕಾರಿಗಳೊಂದಿಗೆ ಸಭೆಗಳ ದಿನವನ್ನು ಆರಂಭಿಸಿದ ಸರ್ವಪಕ್ಷ ಸಂಸದೀಯ ನಿಯೋಗದ ನಾಯಕ ತರೂರ್ ಅವರು ರಾಷ್ಟ್ರೀಯ ಪ್ರೆಸ್ ಕ್ಲಬ್‌ನಲ್ಲಿ ನಡೆದ ಸಂವಾದದ ಸಂದರ್ಭದಲ್ಲಿ, ಪಾಕಿಸ್ತಾನಿಗಳಂತೆಯೇ ಮಾತನಾಡುವಲ್ಲಿ ಭಾರತಕ್ಕೆ ನಿಜವಾದ ತೊಂದರೆ ಇಲ್ಲ ಎಂದು ತರೂರ್ ಒತ್ತಿ ಹೇಳಿದರು. ಅವರು ಭಯೋತ್ಪಾದನೆಯ ಭಾಷೆಯನ್ನು ಬಳಸುವವರೆಗೆ, ನಾವು ಬಲದ ಭಾಷೆಯನ್ನು ಬಳಸುತ್ತೇವೆ.

ಅದಕ್ಕೆ ಮೂರನೇ ವ್ಯಕ್ತಿಯ ಅಗತ್ಯವಿಲ್ಲ ಎಂದು ಅವರು ಹೇಳಿದರು. ಸಂಸದರಾದ ಸರ್ಫರಾಜ್ ಅಹ್ಮದ್, ಗಂಟಿ ಹರೀಶ್ ಮಧುರ್ ಬಾಲಯೋಗಿ, ಶಶಾಂಕ್ ಮಣಿ ತ್ರಿಪಾಠಿ, ಭುವನೇಶ್ವರ್ ಕಲಿತಾ, ಮಿಲಿಂದ್ ದಿಯೋರಾ, ತೇಜಸ್ವಿ ಸೂರ್ಯ ಮತ್ತು ಅಮೆರಿಕಕ್ಕೆ ಭಾರತದ ಮಾಜಿ ರಾಯಭಾರಿ ತರಂಜಿತ್ ಸಂಧು ಅವರನ್ನೊಳಗೊಂಡ ನಿಯೋಗವು ಮೇ 24 ರಂದು ಭಾರತದಿಂದ ನ್ಯೂಯಾರ್ಕ್‌ಗೆ ಆಗಮಿಸಿ, ಗಯಾನಾ, ಪನಾಮ, ಕೊಲಂಬಿಯಾ ಮತ್ತು ಬ್ರೆಜಿಲ್‌ಗೆ ಪ್ರಯಾಣ ಬೆಳೆಸಿ, ಭಯೋತ್ಪಾದಕ ದಾಳಿ ಅಪರೇಷನ್ ಸಿಂಧೂರ್ ನಂತರದ ಭಾರತದ ನಿಲುವನ್ನು ತಿಳಿಸಲು ಪ್ರವಾಸದ ಕೊನೆಯ ಹಂತವಾದ ವಾಷಿಂಗ್ಟನ್‌ಗೆ ಆಗಮಿಸಿತು.

**ಪಾಕಿಸ್ತಾನ ಭಯೋತ್ಪಾದನೆಯ ಮೂಲಸೌಕರ್ಯವನ್ನು ಕೆಡವಿದರೆ, ನಾವು ಅವರೊಂದಿಗೆ ಮಾತನಾಡಬಹುದು ಎಂದು ತರೂರ್ ಹೇಳಿದರು. ನಮ್ಮೊಂದಿಗೆ ಸಾಮಾನ್ಯ ಸಂಬಂಧಗಳನ್ನು ಪುನಃಸ್ಥಾಪಿಸಲು ಅವರು ಬಯಸುತ್ತಾರೆ ಎಂದು ತೋರಿಸಲು ಅವರು ಗಂಭೀರ ಕ್ರಮಗಳನ್ನು ತೆಗೆದುಕೊಂಡರೆ, ನಾವು ಖಂಡಿತವಾಗಿಯೂ ಮಧ್ಯವರ್ತಿಯ ಅಗತ್ಯವಿಲ್ಲದೆ ಅವರೊಂದಿಗೆ ಮತ್ತೆ ಮಾತನಾಡಬಹುದು. ಆದ್ದರಿಂದ ಇದು ಯಾವುದೇ ರೀತಿಯಲ್ಲಿ ಜನರ ಸದ್ಭಾವನೆಯ ಬಗ್ಗೆ ನಕಾರಾತ್ಮಕ ಕಾಮೆಂಟ್ ಅಲ್ಲ -ಶಶಿ ತರೂರ್, ಕಾಂಗ್ರೆಸ್ ಸಂಸದ**



## ಇವಿಎಂ ಬದಲು ಮತಪತ್ರಗಳ ಮೂಲಕ ಚುನಾವಣೆ ನಡೆಯಲಿ



**ಲಖನೌ:** ವಿದ್ಯುನ್ಮಾನ ಮತಯಂತ್ರಗಳ (ಇವಿಎಂ) ಬದಲು ಮತ ಪತ್ರಗಳ (ಬ್ಯಾಲೆಟ್ ಪೇಪರ್) ಮೂಲಕ ಚುನಾವಣೆ ನಡೆದರೆ ಬಿಎಸ್‌ಪಿಯು ಕಳೆದುಹೋದ ತನ್ನ ರಾಜಕೀಯ ನೆಲೆಯನ್ನು ಮತ್ತೆ ಪಡೆಯಲಿದೆ' ಎಂದು ಬಹುಜನ ಸಮಾಜ ಪಕ್ಷದ (ಬಿಎಸ್‌ಪಿ) ಮುಖ್ಯಸ್ಥೆ ಮಾಯಾವತಿ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಎಸ್‌ಪಿ ಅಭ್ಯರ್ಥಿಗಳು ಗೆಲ್ಲದಂತೆ ತಡೆಯಲು ಇವಿಎಂಗಳನ್ನು ತಿರುಚಲಾಗುತ್ತಿದೆ ಎಂದು ಆರೋಪಿಸಿದರು. ಚುನಾವಣೆಗಳು ದೊಡ್ಡದಾಗಿರಲಿ, ಚಿಕ್ಕದಾಗಿರಲಿ ಹಿಂದಿನಂತೆ ಬ್ಯಾಲೆಟ್ ಪೇಪರ್‌ಗಳ ಮೂಲಕವೇ ಮತದಾನ ನಡೆಸುವಂತೆ ಬಿಎಸ್‌ಪಿ ಸೇರಿದಂತೆ ಎಲ್ಲಾ ವಿರೋಧ ಪಕ್ಷಗಳು ಒತ್ತಾಯಿಸುತ್ತಿವೆ' ಎಂದು ಹೇಳಿದರು. 'ಇವಿಎಂಗಳನ್ನು ಬಳಸಿಕೊಂಡು ಬಿಎಸ್‌ಪಿ ಅಭ್ಯರ್ಥಿಗಳನ್ನು ಸೋಲಿಸಲಾಗುತ್ತಿದೆ. ಆ ಮೂಲಕ ಬಿಎಸ್‌ಪಿ ಪಕ್ಷದ ಮೇಲೆ ದಲಿತ ಮತ್ತು ವಂಚಿತ ವರ್ಗದ ಮತದಾರರಲ್ಲಿ ನಂಬಿಕೆ ಮುರಿಯುವ ಕೆಲಸ ನಡೆಯುತ್ತಿದೆ' ಎಂದರು.

## ಒಂದು ದೇಶ, ಒಂದು ಗಂಡ - ಪಂಜಾಬ್ ಸಿಎಂ ಭಗವಂತ್ ಮಾನ್ ಅಪಹಾಸ್ಯ



**ಚಂಡೀಗಢ:** ಬಿಜೆಪಿಯನ್ನು ಟೀಕಿಸುವ ಭರದಲ್ಲಿ ಪಂಜಾಬ್ ಮುಖ್ಯಮಂತ್ರಿ ಭಗವಂತ್ ಮಾನ್, ಆಪರೇಷನ್ ಸಿಂಧೂರ್ ಬಗ್ಗೆ ವಿವಾದಾತ್ಮಕ ಹೇಳಿಕೆಯನ್ನು ನೀಡಿದ್ದಾರೆ. ಪಂಜಾಬ್ ಸಿಎಂ ಹೇಳಿಕೆ ವ್ಯಾಪಕ ಆಕ್ರೋಶಕ್ಕೆ ಕಾರಣವಾಗಿದೆ. ಕೂಡಲೇ ವ

ಆಪರೇಷನ್ ಸಿಂಧೂರ್ ವಿಚಾರವನ್ನು ಬಿಜೆಪಿ ತನ್ನ ಚುನಾವಣಾ ರಾಜಕೀಯಕ್ಕಾಗಿ ಬಳಸಿಕೊಳ್ಳುತ್ತಿದೆ. ಇದರ ಯಶಸ್ಸನ್ನು ಬಿಜೆಪಿಯು ತನ್ನ ಪಾರ್ಟಿಯ ಜಯ ಎನ್ನುವ ರೀತಿಯಲ್ಲಿ ಬಿಜೆಪಿ ಕಾರ್ಯಕರ್ತರು ಮನೆಮನೆಗೆ ಸಿಂಧೂರ ಹಂಚುತ್ತಿದ್ದಾರೆ. ಇದೇನು ಒಂದು ದೇಶ ಒಂದು ಗಂಡ ಯೋಜನೆಯೇ ಎಂದು ಭಗವಂತ್ ಮಾನ್ ವ್ಯಂಗ್ಯವಾಡಿದ್ದಾರೆ. ತನ್ನ ಹೇಳಿಕೆ ವ್ಯಾಪಕ ವಿರೋಧಕ್ಕೆ ಕಾರಣವಾಗುತ್ತಿದ್ದಂತೆಯೇ, ಭಗವಂತ್ ಮಾನ್ ತನ್ನ ಹೇಳಿಕೆಯ ಉದ್ದೇಶ ಸ್ಪಷ್ಟ. ಬಿಜೆಪಿಯು ರಾಷ್ಟ್ರೀಯ ಭದ್ರತೆಯ ವಿಚಾರದಲ್ಲೂ ರಾಜಕೀಯ ಲಾಭ ಹುಡುಕುತ್ತದೆ. ಈ ಕಾರಣಕ್ಕಾಗಿ ಹೇಳಿದೆನೋ ಹೊರತು, ಆಪರೇಷನ್ ಸಿಂಧೂರ್ ಕಾರ್ಯಾಚರಣೆಯನ್ನು ಟೀಕಿಸುವುದು ನನ್ನ ಉದ್ದೇಶ ಆಗಿರಲಿಲ್ಲ ಎಂದು ಭಗವಂತ್ ಮಾನ್ ಹೇಳಿದ್ದಾರೆ.

ಬಿಜೆಪಿ ಮತ್ತು ಆಮ್ ಆದ್ಮಿ ಪಾರ್ಟಿಯ ನಡುವೆ, ಪಂಜಾಬ್ ಸಿಎಂ ಹೇಳಿಕೆ ವಾಗ್ಯುದ್ಧಕ್ಕೆ ಕಾರಣವಾಗಿದೆ. ಸದಾ ಒಂದಲ್ಲೊಂದು ವಿವಾದವನ್ನು ಹುಟ್ಟು ಹಾಕುವ ಭಗವಂತ್ ಮಾನ್, ರಾಜೀನಾಮೆ ನೀಡಬೇಕು ಎಂದು ಬಿಜೆಪಿ ಒತ್ತಾಯಿಸಿದೆ. ಇದು, ಸೈನಿಕರಿಗೆ ಮಾಡಿದ ಅವಮಾನ ಎನ್ನುವುದು ಬಿಜೆಪಿಯ ಆರೋಪ. ಆಪರೇಷನ್ ಸಿಂಧೂರ್ ಯಶಸ್ಸಿನ ನಂತರ ಬಿಜೆಪಿಯ ಕಾರ್ಯಕರ್ತರು ಮನೆಮನೆಗೆ ಸಿಂಧೂರ್ ಹಂಚುತ್ತಿದ್ದಾರೆ. ಯಾವ ಗಂಡ ತನ್ನ ಹೆಂಡತಿಯನ್ನು ಮೋದಿ ಹೆಸರಿನಲ್ಲಿ ಸಿಂಧೂರ ಹಚ್ಚಲು ಹೇಳುತ್ತಾನೆ. ಇದು, ಒಂದು ರಾಷ್ಟ್ರ ಒಂದು ಗಂಡ ಯೋಜನೆಯೇ ಎಂದು ಭಗವಂತ್ ಮಾನ್ ಹೇಳಿದ್ದಾರೆ.

ಆದರೆ, ಮನೆಮನೆಗೆ ಸಿಂಧೂರ ಹಂಚುತ್ತಿರುವ ವಿಷಯವನ್ನು ಬಿಜೆಪಿ ತಳ್ಳಿಹಾಕಿದೆ. ಬಿಜೆಪಿಯು ಯಾವುದೇ ಅಭಿಯಾನವನ್ನು ನಾವು ಆರಂಭಿಸಿಲ್ಲ. ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಸೇಡು ತೀರಿಸಿಕೊಳ್ಳಲು ನಡೆಸಲಾದ ಮಿಲಿಟರಿ ಕಾರ್ಯಾಚರಣೆ ಇದಾಗಿತ್ತು ಎಂದು ಬಿಜೆಪಿ ನಾಯಕರು ಹೇಳಿದ್ದಾರೆ.

- ಸಿಎಂ ಭಗವಂತ್ ಮಾನ್ ಹೇಳಿಕೆಗೆ ತೀವ್ರ ವಿಷಾದ ವ್ಯಕ್ತಪಡಿಸಿದ ಬಿಜೆಪಿ
- ಬಿಜೆಪಿ ಮತ್ತು ಆಮ್ ಆದ್ಮಿ ಪಾರ್ಟಿಯ ನಡುವೆ ಪಂಜಾಬ್ ಹೇಳಿಕೆಗೆ ವಾಗ್ಯುದ್ದ
- ಮನೆಮನೆಗೆ ಸಿಂಧೂರ ಹಂಚುತ್ತಿರುವ ವಿಷಯವನ್ನು ತಳ್ಳಿ ಹಾಕಿದ ಬಿಜೆಪಿ

# ಭಾರತದ ಆಕ್ಷೇಪದ ನಡುವೆಯೂ ಪಾಕ್‌ಗೆ ಸಾಲ ಮಂಜೂರು

● ಪಾಕಿಸ್ತಾನಕ್ಕೆ 80 ಕೋಟಿ ಡಾಲರ್ ಸಾಲ ಒದಗಿಸಿದ ಎಡಿಬಿ ಸಾಲ ದುರ್ಬಳಕೆ ಮಾಡಿಕೊಳ್ಳುವ ಬಗ್ಗೆ ಭಾರತ ದೂರು

**ಹೊಸದಿಲ್ಲಿ:** ಏಷ್ಯನ್ ಅಭಿವೃದ್ಧಿ ಬ್ಯಾಂಕ್ (ಎಡಿಬಿ) ಪಾಕಿಸ್ತಾನಕ್ಕೆ 80 ಕೋಟಿ ಡಾಲರ್ ಸಾಲ ಒದಗಿಸಿರುವುದನ್ನು ಭಾರತ ತೀವ್ರವಾಗಿ ಖಂಡಿಸಿದೆ. ಆರ್ಥಿಕ ಸುಸ್ಥಿರತೆಗೆ ಮತ್ತು ಸಾರ್ವಜನಿಕ ಹಣಕಾಸು ನಿರ್ವಹಣಾ ವ್ಯವಸ್ಥೆಯ ಸುಧಾರಣೆಯೇ ನಮ್ಮ ಗುರಿ ಎಂದು ಪಾಕ್ ಹೇಳಿದೆ. ಆದರೆ, ಇದು ನಿಜವಲ್ಲ. ಆ ದೇಶದ ರಕ್ಷಣಾ ವೆಚ್ಚ ಮಿತಿಮೀರಿದೆ. ಅಗತ್ಯ ಸೇವೆಗಳ ಮೇಲಿನ ವೆಚ್ಚ ಕಡಿಮೆಯಾಗಿದೆ. ಇದರಿಂದ ತೆರಿಗೆ ಮತ್ತು ಜಿಡಿಪಿ ಅನುಪಾತ ಇಳಿಮುಖವಾಗಿದೆ. ಸುಸ್ಥಿರತೆ ಹಾಗೂ ಸಾರ್ವಜನಿಕ ಹಣಕಾಸು ನಿರ್ವಹಣೆಯ ಲೋಪಗಳು ಯಾರಿಗೇ ಆದರೂ ಕಾಣುವಂತಿದೆ. ಆರ್ಥಿಕ ಸುಧಾರಣೆಗಳ ಪ್ರಗತಿ ಕಾಣುತ್ತಿಲ್ಲ. ಇದೆಲ್ಲವೂ ಕಳವಳಕಾರಿ ಸಂಗತಿಗಳು, ಎಂದು ಭಾರತ ಪ್ರತಿಪಾದಿಸಿದೆ.''ಪಾಕಿಸ್ತಾನದ ಆರ್ಥಿಕ ವ್ಯವಹಾರಗಳಲ್ಲಿ ಮಿಲಿಟರಿಯ ಹಸ್ತಕ್ಷೇಪ ಹೆಚ್ಚಿದೆ. ಇದರಿಂದ ಯಾವ ನೀತಿಯೂ ಕಾರ್ಯರೂಪಕ್ಕೆ ಬರುತ್ತಿಲ್ಲ. ಸುಧಾರಣೆಗಳ ಹಿಮ್ಮುಖ ನಡಿಗೆ ಕಾಣುತ್ತಿದೆ. ಪಾಕ್‌ನ ದ್ವಿಮುಖ ನೀತಿಯನ್ನು ಎಡಿಬಿ ಗಣನೆಗೆ ತೆಗೆದುಕೊಳ್ಳಬೇಕು ಎಂದು ಭಾರತ ಒತ್ತಾಯಿಸಿದೆ.

- ಪಾಕಿಸ್ತಾನಕ್ಕೆ 80 ಕೋಟಿ ಡಾಲರ್ ಸಾಲ ಒದಗಿಸಿದ ಎಡಿಬಿ
- ಸಾಲ ದುರ್ಬಳಕೆ ಮಾಡಿಕೊಳ್ಳುವ ಬಗ್ಗೆ ಭಾರತ ದೂರು
- ಪಾಕ್‌ನ ದ್ವಿಮುಖ ನೀತಿಯನ್ನು ಎಡಿಬಿ ಗಣನೆಗೆ ತೆಗೆದುಕೊಳ್ಳಬೇಕು:ಭಾರತ

ದೇಶದ ಆರ್ಥಿಕ ಬಲಹೀನತೆ ಎಡಿಬಿಗೆ ಅಪಾಯ: ಪ್ರಧಾನಿ ನರೇಂದ್ರ ಮೋದಿ ಜೂನ್ 1 ರಂದು ಎಡಿಬಿ ಅಧ್ಯಕ್ಷ ಮಸಾಟೊ ಕಾಂಡಾ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದ್ದರು. ಇದರ ಬೆನ್ನಲ್ಲೇ ಪಾಕ್‌ಗೆ 80 ಕೋಟಿ ಡಾಲರ್ ಸಾಲ ನೀಡಿದೆ ಎಂದು ಕಾಂಗ್ರೆಸ್ ಟೀಕಿಸಿದೆ. ಸಾಲ ಪಡೆಯುವ ದೇಶದ ಆರ್ಥಿಕ ಬಲಹೀನತೆಯು ಎಡಿಬಿಗೆ ಅಪಾಯವನ್ನುಂಟು ಮಾಡುತ್ತದೆ ಎಂಬುದನ್ನು ಭಾರತ ತೋರಿಸಿದೆ ಎಂದು ಮೂಲಗಳು ತಿಳಿಸಿವೆ. ಪಾಕಿಸ್ತಾನ ಮತ್ತು ಭಾರತದ ನಡುವಿನ ಉದ್ವಿಗ್ನತೆಯು ಆರ್ಥಿಕ ಮತ್ತು ಸುಧಾರಣಾ ಗುರಿಗಳಿಗೆ ಅಪಾಯವನ್ನುಂಟುಮಾಡುತ್ತದೆ. ಈ ನಿಟ್ಟಿನಲ್ಲಿ ಹೊಸ ಸಾಲದ ಕಂತುಗಳನ್ನು ಬಿಡುಗಡೆ ಮಾಡುವ ಮೊದಲು, ಪಾಕಿಸ್ತಾನ 11 ಹೊಸ ಷರತ್ತುಗಳ ಪಾಲನೆಯ ಭರವಸೆ ನೀಡಬೇಕು ಎಂದು ಅಂತಾರಾಷ್ಟ್ರೀಯ ಹಣಕಾಸು ನಿಧಿ ಒತ್ತಾಯಿಸಿದೆ.




### ಐಎಂಎಫ್ ಪಾಕಿಸ್ತಾನಕ್ಕೆ ಎಚ್ಚರಿಕೆ

ಭಾರತದೊಂದಿಗೆ ಉದ್ವಿಗ್ನತೆ ಹೆಚ್ಚಾದರೆ ಆರ್ಥಿಕ ಯೋಜನೆಗಳಿಗೆ ತೊಂದರೆಯಾಗಬಹುದು ಎಂದು ಐಎಂಎಫ್ ಪಾಕಿಸ್ತಾನಕ್ಕೆ ಎಚ್ಚರಿಕೆ ನೀಡಿದೆ. ಹೊಸ ಬಜೆಟ್ ಮಂಜೂರು, ವಿದ್ಯುತ್ ಬಿಲ್ ಮೇಲೆ ಹೆಚ್ಚುವರಿ ಶುಲ್ಕ, ಹಳೆಯ ಕಾರುಗಳ ಆಮದು ಮೇಲಿನ ನಿರ್ಬಂಧ ತೆಗೆಯುವುದು ಸೇರಿದಂತೆ ಹಲವು ಷರತ್ತುಗಳನ್ನು ವಿಧಿಸಿರುವ ಐಎಂಎಫ್, ಸಾಲದ ಕಂತು ಬಿಡುಗಡೆಗೆ ಈ ಷರತ್ತುಗಳ ಪಾಲನೆ ಕಡ್ಡಾಯ ಎಂದು ಸ್ಪಷ್ಟಪಡಿಸಿದೆ.

### ಯಾವ ಉದ್ದೇಶಕ್ಕೆ ಸಾಲ?

ಸಂಪನ್ಮೂಲ ಕ್ರೋಢೀಕರಣ ಸುಧಾರಣಾ ಯೋಜನೆಯಡಿ 80 ಕೋಟಿ ಡಾಲರ್ ನೀಡಲಾಗಿದೆ. ಇದರಲ್ಲಿ30 ಕೋಟಿ ಡಾಲರ್ ನೀತಿ ಆಧಾರಿತ ಸಾಲವಾಗಿದೆ. 50 ಕೋಟಿ ಡಾಲರ್ ಮೊತ್ತವು ಕಾರ್ಯಕ್ರಮ ಆಧಾರಿತ ಖಾತ್ರಿಯನ್ನು ಒಳಗೊಂಡಿದೆ. ಸಾಲದ ಉದ್ದೇಶಗಳನ್ನು ಯಾವ ರೀತಿ ಪೂರೈಸಲಾಗಿದೆ ಎಂಬುದನ್ನು ಎಡಿಬಿ ಅವಲೋಕನ ಮತ್ತು ಪರಾಮರ್ಶೆ ಮಾಡುತ್ತದೆ.


### ಐಎಂಎಫ್ ನಿಂದಲೂ ಸಾಲ ಪಡೆದಿದ್ದ ಪಾಕಿಸ್ತಾನ

ಐಎಂಎಫ್ ಬಳಿಯೂ ಸಾಲಕ್ಕಾಗಿ ಪಾಕಿಸ್ತಾನ ಕೈಚಾಚಿತ್ತು. ಯಾವುದೇ ಕಾರಣಕ್ಕೂ ಹಣ ಮಂಜೂರು ಮಾಡಬಾರದು ಎಂದು ಭಾರತ ಒತ್ತಡವನ್ನು ಹೇರಿತ್ತು. ಈ ಹಣವನ್ನು, ಪಾಕಿಸ್ತಾನ ಮತ್ತೆ ಉಗ್ರ ಚಟುವಟಿಕೆಗಳಿಗೆ ಬಳಸಿಕೊಳ್ಳುತ್ತದೆ ಎಂದು ಭಾರತ ವಾದಿಸಿತ್ತು. ಆದರೆ, ಈ ಮಧ್ಯೆಯೂ ಪಾಕಿಸ್ತಾನಕ್ಕೆ 1 ಬಿಲಿಯನ್ ಡಾಲರ್ ಸಾಲ ಅಂದರೆ ಸುಮಾರು 19 ಸಾವಿರ ಕೋಟಿ ರೂಪಾಯಿ ಸಾಲ ಮಂಜೂರು ಮಾಡಿತ್ತು.

## ಆಫ್ಘಾನ್ ಸೇರಿ 12 ದೇಶಗಳ ಪ್ರಜೆಗಳಿಗೆ ಅಮೆರಿಕ ಪ್ರವಾಸ ನಿರ್ಬಂಧ

**ವಾಷಿಂಗ್ಟನ್:** ವಿದೇಶಿ ಭಯೋತ್ಪಾದಕರು ಮತ್ತು ದೇಶದ ಭದ್ರತಾ ಬೆದರಿಕೆ ಹಿನ್ನೆಲೆಯಲ್ಲಿ ಅಫ್ಘಾನಿಸ್ತಾನ, ಮ್ಯಾನ್ಮಾರ್ ಸೇರಿದಂತೆ 12 ರಾಷ್ಟ್ರಗಳ ಪ್ರಜೆಗಳು ಅಮೇರಿಕಾಕ್ಕೆ ಬರುವುದಕೆ ನಿರ್ಬಂಧಿಸಿ ಅಮೇರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಕಾರ್ಯಾದೇಶಕ್ಕೆ ಸಹಿ ಹಾಕಿದ್ದಾರೆ. ಅಫ್ಘಾನಿಸ್ತಾನ, ಮ್ಯಾನ್ಮಾರ್ ಅಲ್ಲದೆ ಚಾಡ್, ಕಾಂಗೋ, ಈಕ್ವಟೋರಿಯಲ್ ಗಿನಿಯಾ, ಎರಿಟ್ರಿಯಾ, ಹೈಟಿ, ಇರಾನ್, ಲಿಬಿಯಾ, ಸೊಮಾಲಿಯಾ, ಸುಡಾನ್ ಮತ್ತು ಯೆಮೆನ್ ದೇಶದ ಪ್ರಜೆಗಳಿಗೆ ಅಮೇರಿಕಾದ ಬಾಗಿಲು ಬಂದ್ ಮಾಡಿ ಆದೇಶಿಸಿದ್ದಾರೆ. 12 ದೇಶಗಳ ಜನರು ಅಮೇರಿಕಾಕ್ಕೆ ಬರುವುದನ್ನು ನಿರ್ಬಂಧಿಸಿದ ಆದೇಶಕ್ಕೆ ಸಹಿಹಾಕಿದ್ದು ಈ ಆದೇಶ ಜೂನ್ 9 ರಿಂದ ಈ ಆದೇಶ ಜಾರಿ ಬರಲಿದೆ.

ಇನ್ನು ಮುಂದೆ ಮುಂದಿನ ಆದೇಶದ ತನಕ ನಿಯಮ ಜಾರಿಯಲ್ಲಿರಲಿದೆ ಎಂದು ತಿಳಿಸಿದ್ದಾರೆ. ಈಗಾಗಲೇ ಬುರುಂಡಿ, ಕ್ಯೂಬಾ, ಲಾವೋಸ್, ಸಿಯೆರಾ ಲಿಯೋನ್, ಟೋಗೊ, ತುರ್ಕಮೆನಿಸ್ತಾನ್ ಮತ್ತು ವೆನೆಜುವೆಲಾ ಸೇರಿದಂತೆ ಏಳು ಇತರ ದೇಶಗಳ ಜನರ ಪ್ರವೇಶಕ್ಕೆ ಈಗ ಭಾಗಶ ನಿರ್ಬಂಧಿಸಲಾಗಿದೆ. ಇದರ ಜೊತೆಗೆ ಇನ್ನೂ 12 ದೇಶಗಳ ಜನ ಪ್ರಯಾಣ ನಿರ್ಬಂಧ ವಿಧಿಸಲಾಗಿದೆ ಎಂದಿದ್ದಾರೆ. ದೇಶಕ್ಕೆ ಹಾನಿ ಮಾಡುವ ಯಾವುದೇ ದೇಶದ ಜನರು ಅಮೇರಿಕಾಕ್ಕೆ ಬರುವುದಕ್ಕೆ ಅವಕಾಶ ಮಾಡಿ ಕೊಡುವುದಿಲ್ಲ. ನಮಗೆ ನಮ್ಮ ದೇಶ ಮುಖ್ಯ, ದೇಶದ ಭದ್ರತೆ ಸುರಕ್ಷತೆ ಮುಖ್ಯ ಎಂದು ಅವರು ಮಾಹಿತಿ ಹಂಚಿಕೊಂಡಿದ್ದಾರೆ. ಹೊಸ ವೀಸಾಗಳಿಗೆ ಮಾತ್ರ ನಿರ್ಬಂಧ ಹೇರಲಾಗಿದೆ, ಜೂನ್ 9ರ ಒಳಗೆ ನೀಡುವ ಎಲ್ಲಾ ವೀಸಾಗಳಿಗೆ ಅನುಮತಿ ಇರಲಿದೆ, ಆದರೆ ಜೂ. 9 ರ ನಂತರ 12 ದೇಶಗಳ ಜನರಿಗೆ ಯಾವುದೇ ವೀಸಾ ನೀಡುವುದಿಲ್ಲ, ಎಂದು ತಿಳಿಸಿದ್ದಾರೆ.



# ರೆಬಲ್ ಸ್ಟಾರ್ ದಾನ ಶೂರ ಕರ್ಣ ಅಂಬರೀಶ್ ಹುಟ್ಟೂರಲ್ಲಿ ಸರ್ಕಾರಿ ನ್ಯಾಯಬೆಲೆ ಅಂಗಡಿ ಚಲನಚಿತ್ರ ಚಿತ್ರೀಕರಣ

## • 20 ಸಾವಿರಕ್ಕೂ ಹೆಚ್ಚು ಸರ್ಕಾರಿ ನ್ಯಾಯ ಬೆಲೆ ಅಂಗಡಿ ಮಾಲೀಕರು ಎದುರಿಸುತ್ತಿರುವ ಸಂಕಷ್ಟಗಳನ್ನು ಮುಂದಿಟ್ಟುಕೊಂಡು ನಿರ್ಮಿಸುತ್ತಿರುವ ಚಲನಚಿತ್ರ



• ಉಮೇಶ್ ಬಾಣಾವರ ಉದಯವಾಹಿನಿ

ಕರ್ನಾಟಕ ರಾಜ್ಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸುಮಾರು 20 ಸಾವಿರಕ್ಕೂ ಹೆಚ್ಚು ಸರ್ಕಾರಿ ನ್ಯಾಯ ಬೆಲೆ ಅಂಗಡಿ ಮಾಲೀಕರು ಎದುರಿಸುತ್ತಿರುವ ಸಂಕಷಗಳನ್ನು ಮುಂದಿಟ್ಟುಕೊಂಡು ನಿರ್ಮಿಸುತ್ತಿರುವ ಚಲನಚಿತ್ರದಲ್ಲಿ **ರಾಗಿಣಿ ತ್ರಿವೇದಿಯವರು** ನಟಿಸುತ್ತಿದ್ದು **ಕುಮಾರ್ ಬಂಗಾರಪ್ಪ** ಹಿರಿಯ ನಟ **ದೊಡ್ಡಣ್ಣ** ಸೇರಿದಂತೆ ಹಲವರು ನಟಿಸುತ್ತಿದ್ದಾರೆ ಬುಧವಾರ ನಡೆದ ಚಿತ್ರೀಕರಣ ಮಂಡ್ಯ ಜಿಲ್ಲೆ, ಮದ್ದೂರು ತಾಲ್ಲೂಕು ರೆಬಲ್ ಸ್ಟಾರ್ ದಾನ ಶೂರ ಕರ್ಣ ಹಿರಿಯ ನಟ ಅಂಬರೀಶ್ ರವರ ಸ್ವಗ್ರಾಮವಾದ ದೊಡ್ಡಅರಸಿಕೆರೆಯಲ್ಲಿ ಚಿತ್ರೀಕರಣ ಬರದಿಂದ ಸಾಗಿತು ಮದ್ದೂರು ಸುತ್ತಮುತ್ತಲೂ ಸಹ ಚಿತ್ರೀಕರಣ ಮುಂದುವರಿಯಿತು . ಅಲ್ಲದೆ **ಜಯಶಂಕರ್ ಟಾಕೀಸ್** ಬ್ಯಾನರ್ ಮೂಲಕ **ತೇಜು ಮೂರ್ತಿ**, ಎಸ್ ಪದ್ಮಾವತಿ ಶಂಕರ್ ಅವರು ಸಿನಿಮಾವನ್ನು ನಿರ್ಮಿಸುತ್ತಿದ್ದಾರೆ ಈ ಚಲನಚಿತ್ರದಲ್ಲಿ ಉತ್ತಮ ಮಾಹಿತಿಗಳು ಮನರಂಜನೆಗಳು ಕೂಡ ಇವೆ ಹೀಗಾಗಿ ಚಲನಚಿತ್ರ ಯಶಸ್ವಿಯಾಗುವುದು ಖಂಡಿತ ಮುಂದಿನ ದಿನಗಳಲ್ಲಿ **ಕರ್ನಾಟಕ ಸರ್ಕಾರಿ ನ್ಯಾಯಬೆಲೆ ಅಂಗಡಿ** ಚಲನಚಿತ್ರ ಪಂಚ ಭಾಷೆಗಳಲ್ಲಿಯೂ ಸಹ ಮೂಡಿ ಬರಲಿದೆ ಎಂದು ಕೃಷ್ಣಪ್ಪ ಪ್ರತಿಕ್ರಿಯಿಸಿದರು ಬಿ ರಾಮಮೂರ್ತಿಯವರ ಕಥೆ ಚಿತ್ರಕಥೆ. ತಾಯವ್ವ ಸಿನಿಮಾ ಖ್ಯಾತಿಯ **ಸಾತ್ವಿಕ್ ಪವನ್ ಕುಮಾರ್** ನಿರ್ದೇಶನ ಮತ್ತು ಛಾಯಾಗ್ರಹಣ ಇದ್ದಾರೆ **ಅನಂತ ಆರ್ಯನ್** ಅವರು ಸಂಗೀತ ನೀಡುತ್ತಿದ್ದಾರೆ ಎಂದು ತಿಳಿದು ಬಂದಿದೆ.

**ಪಂಚ ಭಾಷೆಗಳಲ್ಲಿ ಬರಲಿದೆ**



ರಾಜ್ಯ ಸರ್ಕಾರ ಜಾರಿಗೆ ತಂದಿರುವ ಮಹತ್ವಕಾಂಕ್ಷಿ ಯೋಜನೆಯದ ಅನ್ನಭಾಗ್ಯ ಯೋಜನೆಯು ದೇಶದಲ್ಲಿ ಕರ್ನಾಟಕದಲ್ಲಿ ಉತ್ತಮವಾಗಿ ಪಡಿತರ ಕಾರ್ಡ್‌ದಾರರಿಗೆ ದವಸ ಧಾನ್ಯಗಳು ತಲುಪುತ್ತಿವೆ ಈ ಯೋಜನೆಯ ಯಶಸ್ವಿಯಾಗಿರುವುದರಲ್ಲಿ ಸರ್ಕಾರಿ ನ್ಯಾಯಬೆಲೆ ಅಂಗಡಿ ಮಾಲೀಕರ ಪಾತ್ರ ಬಹುಮುಖ್ಯವಾಗಿದೆ ಎಂದು ರಾಜ್ಯ ಪಡಿತರ ವಿತರಕರ ಸಂಘದ ಅಧ್ಯಕ್ಷ, ರಾಷ್ಟ್ರೀಯ ಕಾರ್ಯ ಅಧ್ಯಕ್ಷ ಕೃಷ್ಣಪ್ಪ ಉದಯವಾಹಿನಿಗೆ ಪ್ರತಿಕ್ರಿಯಿಸಿದರು



### ಚಲನಚಿತ್ರದ ಯಶಸ್ವಿಗೆ ಶುಭ ಹಾರೈಸಿದ ಉದಯವಾಹಿನಿ ಪತ್ರಿಕೆ ಸಂಪಾದಕ ಹೊಂಬೆ ಗೌಡ



ಕಳೆದ ಹಲವಾರು ವರ್ಷಗಳಿಂದ ರಾಜ್ಯ ಪಡಿತರ ವಿತರಕರ ಸಂಘದ ಕೃಷ್ಣಪ್ಪ ರಾಜ್ಯ ಸರ್ಕಾರಗಳ ವಿರುದ್ಧ ಪಡಿತರ ವಿತರಕರಿಗೆ ಕಮಿಷನ್ ಹೆಚ್ಚಿಸುವಲ್ಲಿ, ಪಡಿತರ ವಿತರಕರಿಗೆ ಸರ್ಕಾರದಿಂದ ತೊಂದರೆಗಳು ಎದುರಾದಾಗ ಹೋರಾಟ ನಡೆಸುತ್ತಿದ್ದ ಸನ್ನಿವೇಶಗಳನ್ನು ಸಮರ್ಥವಾಗಿ ಪತ್ರಿಕೆಯ ಮುಖಾಂತರ ಪ್ರಕಟಿಸಿ ಸರ್ಕಾರದ ಗಮನ ಸೆಳೆಯುವಲ್ಲಿ ಉದಯವಾಹಿನಿ ಪತ್ರಿಕೆಯು ಸಹ ಕಾಳಜಿ ವಹಿಸುತ್ತಾ ಬಂದಿದೆ ಇದರಿಂದ ದೊಡ್ಡಅರಸಿನಕೆರೆಯಲ್ಲಿ ಬುಧವಾರ ನಡೆದ ಸರ್ಕಾರಿ ನ್ಯಾಯ ಬೆಲೆ ಅಂಗಡಿ ಚಲನಚಿತ್ರದ ಚಿತ್ರೀಕರಣದಲ್ಲಿ ಭಾಗವಹಿಸಿ ಮಾತನಾಡಿದ ಉದಯವಾಹಿನಿ ಪತ್ರಿಕೆ ಸಂಪಾದಕ ಹೊಂಬೇಗೌಡರು ಸರ್ಕಾರದ ಅನ್ನಭಾಗ್ಯ ಯೋಜನೆ ಯಶಸ್ವಿಯಲ್ಲಿ ಪಡಿತರ ವಿತರಕರ ಕಾಳಜಿ ಬಹು ಮುಖ್ಯವಾಗಿದೆ ಇದರ ರಾಜ್ಯಾಧ್ಯಕ್ಷ ಕೃಷ್ಣಪ್ಪ ಪ್ರಾಮಾಣಿಕ ಹೋರಾಟದಲ್ಲಿ ಪಾಲ್ಗೊಂಡಿದ್ದಾರೆ ಹೀಗಾಗಿ ಚಲನಚಿತ್ರ ಮೂಡಿ ಬರುತ್ತಿರುವುದು ಸಹ ಸುಸಂದರ್ಭವಾಗಿದೆ ಹೀಗಾಗಿ ಈ ಚಲನಚಿತ್ರ ಯಶಸ್ವಿಯಾಗಲಿ ರಾಜ್ಯದ ಪಡಿತರ ವಿತರಕರಿಗೆ ಸರ್ಕಾರ ಇವರ ಜೀವನ ಭದ್ರತೆಗೆ ಗಮನಹರಿಸಬೇಕಿದೆ ಎಂದು ಶುಭ ಹಾರೈಸುತ್ತೇನೆ

-ಟಿ.ಹೊಂಬೇಗೌಡ, ಉದಯವಾಹಿನಿ ಸಂಪಾದಕರು

**ಪಾರ್ವತಿ ಎಂಬ ಪಾತ್ರದಿಂದ ರಾಗಿಣಿ**

**ಚಲನಚಿತ್ರದ ಸಾರಾಂಶ:** ಹಳ್ಳಿಯ ಹೆಣ್ಣುಮಗಳೊಬ್ಬಳು ತನ್ನ ಊರಿನಲ್ಲಿರುವ ಸರ್ಕಾರಿ ನ್ಯಾಯಬೆಲೆ ಅಂಗಡಿಯ ಅನ್ಯಾಯವನ್ನು ಹೇಗೆ ಎದುರಿಸುತ್ತಾಳೆ ಮತ್ತು ಜನರಿಗೆ ಹೇಗೆ ನ್ಯಾಯ ಕೊಡಿಸುತ್ತಾಳೆ ಎಂಬ ಸಾರಾಂಶವನ್ನು ಮುಂದಿಟ್ಟುಕೊಂಡು **ಪಾರ್ವತಿ** ಎಂಬ ಪಾತ್ರದಿಂದ **ರಾಗಿಣಿ ತ್ರಿವೇದಿ** ನಟಿಸುತ್ತಿದ್ದಾರೆ ಎಂದು ತಿಳಿದಿದೆ.

# ಕಾಲ್ತುಳಿತದಲ್ಲಿ ಸಾವನ್ನಪ್ಪಿದವರಿಗೆ 10 ಲಕ್ಷ ರೂ. ಪರಿಹಾರ ಘೋಷಿಸಿದ ಆರ್‌ಸಿಬಿ

## ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಗಾಯಾಳು ಅಭಿಮಾನಿಗಳ ಚಿಕಿತ್ಸೆಗಾಗಿ ಆರ್‌ಸಿಬಿ ಕೇರ್ ನಿಧಿ ರಚನೆ

ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಉಂಟಾದ ಕಾಲ್ತುಳಿತದಿಂದ 11 ಮಂದಿ ಆರ್‌ಸಿಬಿ ಅಭಿಮಾನಿಗಳು ಸಾವನ್ನಪ್ಪಿದ್ದರು. ಸರ್ಕಾರದ ಭದ್ರತಾ ವೈಫಲ್ಯದಿಂದಾಗಿ ಈ ಸಾವು ನೋವು ಉಂಟಾಗಿದೆ ಎಂದು ಮೇಲ್ನೋಟಕ್ಕೆ ಕಂಡು ಬಂದರೂ ಸರ್ಕಾರ ಮಾತ್ರ ಇದನ್ನು ಒಪ್ಪಲು ಸಿದ್ಧವಿಲ್ಲ. ಆದಾಗ್ಯೂ ಸರ್ಕಾರದ ವತಿಯಿಂದ ಈ ಅವಘಡದಲ್ಲಿ ಸಾವಿಗೀಡದವರ ಕುಟುಂಬಗಳಿಗೆ 10 ಲಕ್ಷ ರೂ ಪರಿಹಾರ ಘೋಷಿಸಲಾಗಿತ್ತು. ಹಾಗೆಯೇ ಗಾಯಾಳುಗಳಿಗೂ ಉಚಿತ ಚಿಕಿತ್ಸೆ ನೀಡುವುದಾಗಿ ಹೇಳಿಕೊಂಡಿತ್ತು. ಸರ್ಕಾರದ ಬಳಿಕ ಕೆಎಸ್‌ಸಿಎ ಕೂಡ ಸಾವನ್ನಪ್ಪಿದವರ ಕುಟುಂಬಗಳಿಗೆ ಪರಿಹಾರ ಧನವಾಗಿ 5 ಲಕ್ಷ ನೀಡುವುದಾಗಿ ಹೇಳಿತ್ತು. ಇದೀಗ ಆರ್‌ಸಿಬಿ ಫ್ರಾಂಚೈಸಿ ಕೂಡ ಮಡಿದ ಆರ್‌ಸಿಬಿ ಅಭಿಮಾನಿಗಳ ಕುಟುಂಬಗಳ ನೆರವಿಗೆ ಮುಂದಾಗಿದೆ.ಅಲ್ಲದೆ ಈ ಅವಘಡದಿಂದ ಗಾಯಗೊಂಡು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಗಾಯಾಳು ಅಭಿಮಾನಿಗಳ ಚಿಕಿತ್ಸೆಗಾಗಿ ಆರ್‌ಸಿಬಿ ಕೇರ್ ನಿಧಿಯನ್ನು ಸಹ ರಚನೆ ಮಾಡಲಾಗಿದೆ.

ಎಂ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದ ಐಪಿಎಲ್ ವಿಜಯೋತ್ಸವದ ಸಂದರ್ಭದಲ್ಲಿ ಕ್ರೀಡಾಂಗಣದ ಹೊರಗೆ ಸಾವಿರಾರು ಅಭಿಮಾನಿಗಳು ಜಮಾಯಿಸಿದ್ದರು.





ಈ ಸಂದರ್ಭದಲ್ಲಿ, ಕ್ರೀಡಾಂಗಣಕ್ಕೆ ಪ್ರವೇಶಿಸಲು ಪ್ರಯತ್ನಿಸುವಾಗ ಕಾಲ್ತುಳಿತ ಸಂಭವಿಸಿತು, ಇದರಲ್ಲಿ 11 ಅಭಿಮಾನಿಗಳು ಪ್ರಾಣ ಕಳೆದುಕೊಂಡರೆ, 20ಕ್ಕೂ ಹೆಚ್ಚು ಅಭಿಮಾನಿಗಳು ಗಾಯಗೊಂಡಿದ್ದು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

**ಕೇವಲ ಒಂದೇ ಒಂದು ಪೋಸ್ಟ್:** ವಾಸ್ತವವಾಗಿ ಅವಘಡ ನಡೆದ ಆರೇಳು ಗಂಟೆಗಳ ನಂತರ ಆರ್‌ಸಿಬಿ, ಮಡಿದವರಿಗೆ ಸಂತಾಪ ಸೂಚಿಸಿತ್ತು. ಫ್ರಾಂಚೈಸಿಯ ಈ ನಡೆ ಅಭಿಮಾನಿಗಳನ್ನು ಕೆರಳು ವಂತೆ ಮಾಡಿತು. ಅಲ್ಲದೆ ಈ ಸಾವು ನೋವಿನ ನಡುವೆಯೂ ಕ್ರೀಡಾಂಗಣದ ಒಳಗೆ 15 ನಿಮಿಷಗಳ ಕಾರ್ಯಕ್ರಮವನ್ನು ನಡೆಸಲಾಗಿತ್ತು. ಇದು ಕೂಡ ಕನ್ನಡಿಗರನ್ನು ಕೋಪಗೊಳ್ಳುವಂತೆ ಮಾಡಿತ್ತು. ತನ್ನ ಸೋಶಿಯಲ್ ಮೀಡಿಯಾ ಖಾತೆಯಲ್ಲಿ ಪೋಸ್ಟ್‌ವೊಂದನ್ನು ಹಂಚಿಕೊಂಡಿದ್ದ ಆರ್‌ಸಿಬಿ, ಗುರುವಾರ ಮಧ್ಯಾಹ್ನ ತಂಡದ ಆಗಮನದ ನೀರಿಕ್ಷೆಯಲ್ಲಿ ಬೆಂಗಳೂರಿನವರು ಇದ್ದರು. ಆದರೆ, ಈ ವೇಳೆ ಸಂಭವಿಸಿದ ದುರದೃಷ್ಟಕರ ಘಟನೆಯಿಂದ ನಾವು ದುಃಖಿತರಾಗಿದ್ದೇವೆ. ಎಲ್ಲರ ಸುರಕ್ಷತೆ ನಮಗೆ ಅತ್ಯಂತ ಮುಖ್ಯ ವಿಷಯ ಆಗಿದೆ. ದುರಂತದಿಂದ ಆದ ಜೀವ ಹಾನಿಗೆ ಆರ್‌ಸಿಬಿ ಶೋಕ ವ್ಯಕ್ತಪಡಿಸುತ್ತಿದೆ. ಸಂತ್ರಸ್ತ ಕುಟುಂಬಕ್ಕೆ ನಮ್ಮ ಸಂತಾಪ ಬರೆದುಕೊಂಡಿತ್ತು. ಇದು ಕೂಡ ಆರ್‌ಸಿಬಿ ಅಭಿಮಾನಿಗಳ ಅಸಮಾಧಾನಕ್ಕೆ ಕಾರಣವಾಗಿತ್ತು.

**ಆರ್‌ಸಿಬಿ ಕೇರ್ಸ್ ನಿಧಿ ಸ್ಥಾಪನೆ**

**ಏಕೆಂದರೆ ಇತರೆ ತಂಡಗಳಿಗೆ ಹೋಲಿಸಿದರೆ, ತನ್ನ ಪಂದ್ಯಗಳ ಟಿಕೆಟ್ ಬೆಲೆಯನ್ನು ದುಪ್ಪಟ್ಟು ಮಾಡುವ ಆರ್‌ಸಿಬಿ ಫ್ರಾಂಚೈಸಿ, ತನ್ನ ಅಭಿಮಾನಿಗಳು ಸಾವನ್ನಪ್ಪಿದಾಗ ಕೇವಲ 1 ಪೋಸ್ಟ್ ಮೂಲಕ ಸಂತಾಪ ಸೂಚಿಸಿದ್ದು, ಮಡಿದವರ ಕುಟುಂಬಗಳಿಗೆ, ಗಾಯಾಳುಗಳ ನೆರವಿಗೆ ಬರದಿರುವುದು ಅಭಿಮಾನಿಗಳು ಕೋಪಗೊಳ್ಳುವಂತೆ ಮಾಡಿತ್ತು. ಆದರೆ ಘಟನೆ ನಡೆದ ಒಂದು ದಿನದ ಬಳಿಕ ಮೃತರಿಗೆ ಆರ್ಥಿಕ ಪರಿಹಾರವನ್ನು ಘೋಷಿಸಿರುವ ಫ್ರಾಂಚೈಸಿ ಸಾಮಾಜಿಕ ಮಾಧ್ಯಮದಲ್ಲಿ ಹೇಳಿಕೆ ಬಿಡುಗಡೆ ಮಾಡಿ ಮೃತರಿಗೆ ತಲಾ 10 ಲಕ್ಷ ರೂ. ಪರಿಹಾರ ನೀಡುವುದಾಗಿ ತಿಳಿಸಿದೆ. ಇದಲ್ಲದೆ, ಫ್ರಾಂಚೈಸಿ ಆರ್‌ಸಿಬಿ ಕೇರ್ಸ್ ಎಂಬ ನಿಧಿಯನ್ನು ರಚಿಸುವುದಾಗಿ ಘೋಷಿಸಿದೆ. ಅದರ ಮೂಲಕ ಈ ದುರಂತದಲ್ಲಿ ಗಾಯಗೊಂಡ ಅಭಿಮಾನಿಗಳಿಗೂ ಸಹ ಸಹಾಯ ಮಾಡಲಾಗುವುದು ಎಂದು ತಿಳಿಸಿದೆ.**



# ಪಾಕ್ ಕ್ರಿಕೆಟಿಗರನ್ನು ತಂಡದಿಂದ ಹೊರ ಹಾಕ್ತಾರಾ ಕಿಂಗ್ ಖಾನ್?

ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯ ನಂತರ, ಭಾರತ ಮತ್ತು ಪಾಕಿಸ್ತಾನದ ನಡುವೆ ಯುದ್ಧದಂತಹ ಪರಿಸ್ಥಿತಿ ಉದ್ಭವಿಸಿದೆ. ಅಲ್ಲದೆ ಉಭಯ ದೇಶಗಳ ನಡುವೆ ಎಲ್ಲಾ ರೀತಿಯ ಸಂಬಂಧಗಳು ಮುರಿದು ಬಿದ್ದಿದೆ. ಹಾಗೆಯೇ ಎರಡೂ ದೇಶಗಳ ಕ್ರಿಕೆಟ್ ತಂಡಗಳು ಕೂಡ ಇನ್ಮುಂದೆ ಪರಸ್ಪರ ಪಂದ್ಯಗಳನ್ನಾಡುವ ಸಾಧ್ಯತೆಗಳು ತೀರ ಕಡಿಮೆ. ಹೀಗಿರುವಾಗ ಪಾಕಿಸ್ತಾನಿ ಮೂಲಕ ಆಟಗಾರರು ಬಾಲಿವುಡ್ ಸ್ಟಾರ್ ಶಾರುಖ್ ಖಾನ್ ಮಾಲೀಕತ್ವದ ಟಿ20 ತಂಡದಲ್ಲಿ ಆಡುತ್ತಿದ್ದು, ಅವರನ್ನು ತಂಡದಿಂದ ಹೊರ ಹಾಕಲಾಗುತ್ತದೆಯೋ, ಇಲ್ಲವೋ ಎಂಬ ಪ್ರಶ್ನೆ ಮೂಡಿದೆ. ಶಾರುಖ್ ಖಾನ್ ಐಪಿಎಲ್‌ನಲ್ಲಿ ಕೋಲ್ಕತ್ತಾ ನೈಟ್ ರೈಡರ್ಸ್ ಜೊತೆಗೆ, ಅಂತರರಾಷ್ಟ್ರೀಯ ಲೀಗ್ ಟಿ20, ಮೇಜರ್ ಲೀಗ್ ಕ್ರಿಕೆಟ್‌ನಲ್ಲಿಯೂ ತಂಡಗಳನ್ನು ಹೊಂದಿದ್ದಾರೆ. ಈ ತಂಡಗಳಲ್ಲಿ ಪಾಕಿಸ್ತಾನಿ ಮೂಲದ ಆಟಗಾರರು ಸಹ ಸೇರಿದ್ದಾರೆ. ಯುಎಇಯಲ್ಲಿ ನಡೆಯುವ ಅಂತರರಾಷ್ಟ್ರೀಯ ಟಿ20 ಲೀಗ್‌ನಲ್ಲಿ ಶಾರುಖ್ ಖಾನ್ ಮಾಲೀಕತ್ವದ ಅಬುಧಾಬಿ ನೈಟ್ ರೈಡರ್ಸ್ ತಂಡ ಕೂಡ ಆಡುತ್ತದೆ. ಈ ತಂಡದಲ್ಲಿ ಇಬ್ಬರು ಪಾಕಿಸ್ತಾನಿ ಅಥವಾ ಪಾಕಿಸ್ತಾನಿ ಮೂಲದ ಆಟಗಾರರು ಇದ್ದಾರೆ. ಅದರಲ್ಲಿ ಪಾಕಿಸ್ತಾನಿ ಮೂಲದ ವೇಗದ ಬೌಲರ್ ಅಲಿ ಖಾನ್ ಒಬ್ಬರಾಗಿದ್ದು, ಪ್ರಸ್ತುತ ಅವರು ಅಮೇರಿಕ ಅಂತರರಾಷ್ಟ್ರೀಯ ತಂಡದ ಪರವಾಗಿ ಆಡುತ್ತಿದ್ದಾರೆ.



# ಹೆಸರಿಡದ ಚಿತ್ರಕ್ಕೆ ಈಗಾಗಲೇ ಕ್ಯಾಮೆರಾ

ರವಿಚಂದ್ರನ್ ಪುತ್ರ, ವಿಕ್ರಮ್ ರವಿಚಂದ್ರನ್ ಅಭಿನಯದ ಎರಡನೇ ಸಿನಿಮಾ 'ಮುಧೋಳ್' ಚಿತ್ರೀಕರಣ ಮುಕ್ತಾಯದ ಹಂತಕ್ಕೆ ಬಂದಿದ್ದು, ಇನ್ನೂ ಕೇವಲ 10 ರಿಂದ 14 ದಿನಗಳ ಚಿತ್ರೀಕರಣ ಬಾಕಿ ಉಳಿದಿದೆ. ಈ ನಡುವೆ ನಟ ಮಂಜುನಾಥ್ ರೆಡ್ಡಿ ನಿರ್ಮಾಣದ ಇನ್ನೂ ಹೆಸರಿಡದ ಚಿತ್ರಕ್ಕೆ ಈಗಾಗಲೇ ಕ್ಯಾಮೆರಾ ಎದುರಿಸುತ್ತಿದ್ದಾರೆ. ನನ್ನ ಕೈಯಲ್ಲಿ ಪ್ರಸ್ತುತ ಮೂರು ಚಿತ್ರಗಳಿವೆ. ಎಲ್ಲವೂ ಹೊಸ ನಿರ್ದೇಶಕರು, ಹೊಸ ಕಥೆಗಳಾಗಿವೆ. ಅದರಲ್ಲಿ ಒಂದನ್ನು ಮಂಜುನಾಥ್ ರೆಡ್ಡಿ ನಿರ್ಮಿಸುತ್ತಿದ್ದಾರೆ.

ಚಿತ್ರದ ಹೆಸರನ್ನು ಶೀಘ್ರದಲ್ಲೇ ಘೋಷಿಸುತ್ತೇವೆ. ಮೂರನೇ ಸಿನಿಮಾದ ಬಗ್ಗೆ ಅಂತಿಮ ಹಂತದ ಚರ್ಚೆ ನಡೆಯುತ್ತಿದೆ ಎಂದು ವಿಕ್ರಮ್ ತಿಳಿಸಿದರು. ಒಂದು ವರ್ಷದಿಂದ ಸ್ನಾಯು ಎಳೆತ ಸಮಸ್ಯೆಯಿಂದ ಬಳಲುತ್ತಿದ್ದು, ಈಗ ಎರಡೂ ಭುಜಗಳಿಗೆ ಶಸ್ತ್ರಚಿಕಿತ್ಸೆಯ ಅಗತ್ಯವಿದೆ. ಅದಕ್ಕೂ ಮುನ್ನಾ ಶೂಟಿಂಗ್ ಮುಗಿಸಲು ಪರ್ಯಾಯ ಮಾರ್ಗ ಹುಡುಕುತ್ತಿರುವುದಾಗಿ ಅವರು ಹೇಳಿದರು. ಸಂಭಾವನೆ ಹೊರತಾಗಿ ವೃತ್ತಿಪರತೆಗೆ ಬದ್ಧತೆ ದೃಢವಾಗಿ ಉಳಿದಿದೆ.

ನೆಲ್ಸನ್ ಚಿತ್ರದಲ್ಲಿ ಒಂದು ಪಾತ್ರವಿದ್ದರೂ ಆ ಪ್ರಾಜೆಕ್ಟ್ ಸದ್ಯ ಸ್ಥಗಿತಗೊಂಡಿದೆ. ಮೂರು ನಿರ್ಮಾಪಕರಿಗೆ ಮುಂಗಡ ಹಣವನ್ನು ಹಿಂದಿರುಗಿಸಿದ್ದೇನೆ. ನನ್ನಗೆ ಪಾತ್ರ ಹೊಂದಿಕೆಯಾಗದಿದ್ದರೆ ನಿರ್ಮಾಪಕರ ಹಣ ದುರುಪಯೋಗವಾಗಲು ಬಯಸುವುದಿಲ್ಲ. ಪ್ರತಿಯೊಂದು ಪ್ರಾಜೆಕ್ಟ್‌ಗೂ ಸೂಕ್ತ ಸಮಯ, ಶ್ರಮವನ್ನು ಗೌರವಿಸುತ್ತೇನೆ ಎನ್ನುತ್ತಾರೆ ವಿಕ್ರಮ್. ಮಂಜುನಾಥ್ ರೆಡ್ಡಿ ಅವರ ಸಹಯೋಗದಲ್ಲಿ ನಿರ್ಮಾಣವಾಗುತ್ತಿರುವ ಚಿತ್ರ ಕಮರ್ಷಿಯಲ್ ಸಿನಿಮಾವಾಗಿದೆ. ಆದರೆ ಪೌರಾಣಿಕ ಹಿನ್ನೆಲೆಯ ಕಥಾಹಂದರವೂ ಇದೆ. ಹೊಸ ಪ್ರಕಾರದ ಚಿತ್ರಗಳಲ್ಲಿ ಅಭಿನಯಿಸಲು ಪ್ರಯತ್ನಿಸುತ್ತಿದ್ದೇನೆ ಮತ್ತು ಹೊಸ ನಿರ್ದೇಶಕರೊಂದಿಗೆ ಕೆಲಸ ಮಾಡುತ್ತಿದ್ದೇನೆ ಎಂದು ಅವರು ಹೇಳಿದರು.



# ಅನುಷ್ಕಾ ಶೆಟ್ಟಿಯ ಒಂದು ಚಿತ್ರದಿಂದ ಸರಣಿ ಅಪಘಾತ

ಅನುಷ್ಕಾ ಶೆಟ್ಟಿ ದಕ್ಷಿಣ ಭಾರತದ ಸ್ಟಾರ್ ನಟಿ ಆಗಿದ್ದವರು. ದಶಕಗಳ ಕಾಲ ಅವರು ತಮ್ಮ ನಂಬರ್ 1 ಸ್ಥಾನವನ್ನು ಉಳಿಸಿಕೊಂಡಿದ್ದರು. ನಾಯಕಿಯಾಗಿ ಕೇವಲ ಮರ ಸುತ್ತುವ ಪಾತ್ರಗಳನ್ನು ಮಾಡದೆ ತಮ್ಮ ನಟನೆ, ಅಂದ, ವ್ಯಕ್ತಿತ್ವದದಿಂದಾಗಿ ಭಾರಿ ದೊಡ್ಡ ಅಭಿಮಾನಿ ವರ್ಗವನ್ನೇ ಸೃಷ್ಟಿಸಿಕೊಂಡಿದ್ದಾರೆ. ಅನುಷ್ಕಾ ಶೆಟ್ಟಿ ಇತ್ತೀಚೆಗೆ ಸಿನಿಮಾ ನಟನೆ ಕಡಿಮೆ ಮಾಡಿದ್ದಾರೆ. ಆದರೆ ಒಂದು ಕಾಲದಲ್ಲಿ ವರ್ಷಕ್ಕೆ ಹತ್ತಾರು ಸಿನಿಮಾಗಳಲ್ಲಿ ನಟಿಸುತ್ತಿದ್ದರು. ಅನುಷ್ಕಾ ಶೆಟ್ಟಿಯ ಒಂದು ಚಿತ್ರದಿಂದ 40 ಅಪಘಾತಗಳು ಸಂಭವಿಸಿದ್ದವು. ಯಾವುದು ಆ ಚಿತ್ರ, ಅಪಘಾತ ಆಗಿದ್ದು ಏಕೆ? 15 ವರ್ಷದ ಹಿಂದೆ ಅನುಷ್ಕಾ ಶೆಟ್ಟಿ 'ವೇದಂ' ಹೆಸರಿನ ತೆಲುಗು ಸಿನಿಮಾನಲ್ಲಿ ನಟಿಸಿದ್ದರು. ಸಿನಿಮಾದಲ್ಲಿ ಅಲ್ಲು ಅರ್ಜುನ್ ಸಹ ಇದ್ದರು. ಕ್ರಿಶ್ ನಿರ್ದೇಶನ ಮಾಡಿದ್ದ ಆ ಸಿನಿಮಾ ಅಂಥಾಲಜಿ ಸಿನಿಮಾ ಆಗಿತ್ತು. ಒಂದಕ್ಕೊಂದು ಸಂಬಂಧ ಇಲ್ಲದ ನಾಲ್ಕು ಜನರ ಕತೆಯನ್ನು ಒಳಗೊಂಡಿದ್ದ ಸಿನಿಮಾ ಅದು. ಸಿನಿಮಾನಲ್ಲಿ ಅನುಷ್ಕಾ ಶೆಟ್ಟಿ ಮೊದಲ ಬಾರಿಗೆ ವೇಶ್ಯೆಯ ಪಾತ್ರದಲ್ಲಿ ನಟಿಸಿದ್ದರು. ಸಿನಿಮಾ ಬಿಡುಗಡೆಗೆ ಮುಂಚೆ ಪ್ರಚಾರಕ್ಕೆಂದು ಅವರ ಚಿತ್ರದ ಪೋಸ್ಟರ್ ಅನ್ನು ಹೈದರಾಬಾದ್‌ನ ಹಲವು ಕಡೆ ಹಾಕಲಾಗಿತ್ತು. ಹಳದಿ ಬಣ್ಣದ ಸೀರೆಯುಟ್ಟ ಅನುಷ್ಕಾರ ದೊಡ್ಡ ಪೋಸ್ಟರ್ ಒಂದನ್ನು ಹೈದರಾಬಾದ್‌ನ ಪಂಜಾಗುಟ್ಟ ಸರ್ಕಲ್‌ನಲ್ಲಿ ಹಾಕಲಾಗಿತ್ತು. ಆ ಪೋಸ್ಟರ್ ಅದೆಷ್ಟು ಆಕರ್ಷವಾಗಿತ್ತೆಂದರೆ ಆ ಪೋಸ್ಟರ್ ನೋಡಿಕೊಂಡು ಗಾಡಿ ಓಡಿಸಿ ಹಲವು ಅಪಘಾತಗಳು ಆಗಿದ್ದವು. ಒಂದಲ್ಲ ಎರಡಲ್ಲ ಬರೋಬ್ಬರಿ 40 ಅಪಘಾತಗಳು ಕೆಲವೇ ದಿನಗಳಲ್ಲಿ ಪಂಜಾಗುಟ್ಟ ಸರ್ಕಲ್‌ನಲ್ಲಿ ನಡೆದಿತ್ತು. ಈ ಸರಣಿ ಅಪಘಾತ ಗಮನಿಸಿದ ಹೈದರಾಬಾದ್ ಪೊಲೀಸರು ಹೈದರಾಬಾದ್ ಮುನ್ಸಿಪಲ್‌ಗೆ ಮನವಿ ನೀಡಿ ಕೊನೆಗೆ ಅನುಷ್ಕಾ ಶೆಟ್ಟಿಯ ಪೋಸ್ಟರ್ ಅನ್ನು ಪಂಜಾಗುಟ್ಟ ಸರ್ಕಲ್‌ನಿಂದ ತೆಗೆಸಬೇಕಾಯ್ತು. 'ವೇದಂ' ಸಿನಿಮಾ ತೆಲುಗು ಚಿತ್ರರಂಗದ ಅದ್ಭುತ ಸಿನಿಮಾಗಳಲ್ಲಿ ಒಂದು. ಸಿನಿಮಾದ ಹಾಡುಗಳು ಇಂದಿಗೂ ಎವರ್ ಗ್ರೀನ್. ಸಿನಿಮಾನಲ್ಲಿ ಅನುಷ್ಕಾ ಶೆಟ್ಟಿ ವೇಶ್ಯೆಯ ಪಾತ್ರದಲ್ಲಿ ನಟಿಸಿದ್ದರು. ತನ್ನ ವೇಶ್ಯಾ ಅಡ್ಡೆಯಿಂದ ತಪ್ಪಿಸಿಕೊಂಡು ಹೋಗಿ ನೆಮ್ಮದಿಯಾದ ಬದುಕು ಬಾಳುವುದು ಆಕೆಯ ಗುರಿ. ಅಲ್ಲು ಅರ್ಜುನ್, ತ್ವರಿತವಾಗಿ ಶ್ರೀಮಂತನಾಗುವ ಕನಸು ಕಂಡು ಶ್ರೀಮಂತ ಯುವತಿಯೊಬ್ಬಾಕೆಯನ್ನು ಪ್ರೀತಿಸಿರುವ ಯುವಕನ ಪಾತ್ರದಲ್ಲಿ ನಟಿಸಿದ್ದರು.





# ನೆಗೆಟಿವ್ ಪಾತ್ರ

# ಹೊಸ ಧಾರಾವಾಹಿಯಲ್ಲಿ ಐಶ್ವರ್ಯಾ

ಬಿಗ್ ಬಾಸ್ ಕನ್ನಡ ಸೀಸನ್ 11ರ ಸ್ಪರ್ಧಿ ಆಗಿ ಗಮನ ಸೆಳೆದವರು ಐಶ್ವರ್ಯಾ ಶಿಂಧೋಗಿ. ಅವರು ಬಿಗ್ ಬಾಸ್ ಮನೆ ಮಗಳು ಎಂದು ಕರೆಸಿಕೊಂಡರು. ಅವರಿಗೆ ತಂದೆ-ತಾಯಿ ಇಲ್ಲ. ಈ ಸ್ಥಾನವನ್ನು ಸ್ವತಃ ಬಿಗ್ ಬಾಸ್ ತುಂಬಿದರು ಎಂದರೂ ತಪ್ಪಾಗಲಾರದು. ಈಗ ಅವರಿಗೆ ಧಾರಾವಾಹಿಯಲ್ಲಿ ನೆಗೆಟಿವ್ ಶೇಡ್‌ನ ಪಾತ್ರ ಸಿಕ್ಕಿದೆ. ಈ ಸಂದರ್ಭದ ಪ್ರೋಮೋನ ಸ್ಟಾರ್ ಸುವರ್ಣ ವಾಹಿನಿಯು ಹಂಚಿಕೊಂಡಿದೆ.ಸಾಮಾನ್ಯವಾಗಿ ಬಿಗ್ ಬಾಸ್‌ನಲ್ಲಿ ಭಾಗಿ ಆದ ಬಳಿಕ ವಿವಿಧ ಸಿನಿಮಾ, ಸೀರಿಯಲ್ ಆಫರ್‌ಗಳು ಬರುತ್ತವೆ. ಈಗಾಗಲೇ ನಮ್ರತಾ ಗೌಡ, ಭವ್ಯಾ ಗೌಡಗೆ ಧಾರಾವಾಹಿ ಆಫರ್ ಸಿಕ್ಕಿದೆ. ಕಾರ್ತಿಕ್ ಮಹೇಶ್ ಅವರು ಸಿನಿಮಾ ಮಾಡುತ್ತಿದ್ದಾರೆ. ಇವರೆಲ್ಲರೂ ಬಿಗ್ ಬಾಸ್ ಸ್ಪರ್ಧಿಗಳೇ ಆಗಿದ್ದರು. ಅದೇ ರೀತಿ ಐಶ್ವರ್ಯಾ ಶಿಂಧೋಗಿ ಕೂಡ ಬಿಗ್ ಬಾಸ್ ಸ್ಪರ್ಧಿಯಾಗಿ ಗಮನ ಸೆಳೆದರು. ಅವರಿಗೆ ಧಾರಾವಾಹಿಯ ಆಫರ್ ಬಂದಿದೆ. ಸ್ಟಾರ್ ಸುವರ್ಣ ವಾಹಿನಿಯು ಕನ್ನಡದ ಪ್ರಮುಖ ವಾಹಿನಿಗಳಲ್ಲಿ ಒಂದು. ಈ ವಾಹಿನಿಯಲ್ಲಿ ನಿನ್ನ ಜೊತೆ ನನ್ನ ಕಥೆ ಹೆಸರಿನ ಧಾರಾವಾಹಿಯು ಈಗಾಗಲೇ ಪ್ರಸಾರ ಕಾಣುತ್ತಿದೆ. ಈ ಧಾರಾವಾಹಿ ಯಲ್ಲಿ ವಿಲನ್ ಪಾತ್ರದಲ್ಲಿ ಅವರು ನಟಿಸೋ ಸಾಧ್ಯತೆ ಇದೆ. ಹೆಸರು ಮಾತ್ರ ಸಾಕ್ಷಿ, ಆದರೆ ಮನಸಾಕ್ಷಿ ಇಲ್ಲ. ಮಹಾಭಾರತದಲ್ಲಿ ಮೆರೆಯೋ ದುರಹಂಕಾರಿ ಧುರ್ಯೋದನ ಇಷ್ಟ ಎಂದು ಐಶ್ವರ್ಯಾ ಅವರ ಪಾತ್ರ ಪರಿಚಯ ಆಗುತ್ತದೆ. ಇದು ನೆಗೆಟಿವ್ ಶೇಡ್ ಎಂಬುದು ಸ್ಪಷ್ಟವಾಗಿದೆ. ಕಥಾ ನಾಯಕ-ನಾಯಕಿ ಮಧ್ಯೆ ಸಾಕ್ಷಿ ಬರುತ್ತಾಳೆ. ರಾಣಾ ಪಾತ್ರದಲ್ಲಿ ಸುಂದರ್ ಅವರು ನಟಿಸಿದ್ದಾರೆ.

**ಸಿನಿ ವಾಹಿನಿ**

# ಸಿಕ್ಕಾಪಟ್ಟೆ ಗ್ಲಾಮರ್ ಪಾತ್ರ ಮಾಡಲು ಒಪ್ಪಿಕೊಂಡ ರಶ್ಮಿಕಾ

ನಟಿ ರಶ್ಮಿಕಾ ಮಂದಣ್ಣ ಅವರಿಗೆ ಹಲವಾರು ಆಫರ್‌ಗಳು ಸಿಗುತ್ತಿವೆ. ಅವುಗಳಲ್ಲಿ ತಮಗೆ ಬೆಸ್ಟ್ ಎನಿಸಿದ್ದನ್ನು ಅವರು ಆಯ್ಕೆ ಮಾಡಿಕೊಳ್ಳುತ್ತಿದ್ದಾರೆ. ಈಗಾಗಲೇ ಅವರು ಹಲವು ಬಗೆಯ ಪಾತ್ರಗಳನ್ನು ಮಾಡಿ ಸೈ ಎನಿಸಿಕೊಂಡಿದ್ದಾರೆ. ರಶ್ಮಿಕಾ ಮಂದಣ್ಣ ನಟಿಸಿದ ಸಿನಿಮಾಗಳು ಸೂಪರ್ ಹಿಟ್ ಆಗಿವೆ. ಮುಂಬರುವ ದಿನಗಳಲ್ಲಿ ಇನ್ನೂ ಚಾಲೆಂಜಿಂಗ್ ಆದಂತಹ ಪಾತ್ರಗಳನ್ನು ಮಾಡಬೇಕು ಎಂಬುದು ರಶ್ಮಿಕಾ ಉದ್ದೇಶ. ಹಾಗಾಗಿ ಅವರೀಗ ಸಖತ್ ಗ್ಲಾಮರಸ್ ಆದಂತಹ ಪಾತ್ರವನ್ನು ಒಪ್ಪಿಕೊಂಡಿದ್ದಾರೆ ಎಂಬ ಮಾಹಿತಿ ಕೇಳಿಬಂದಿದೆ. ಹೌದು, ಕಾಕ್‌ಟೇಲ್ 2 ಸಿನಿಮಾದಲ್ಲಿ ರಶ್ಮಿಕಾ ಮಂದಣ್ಣ ಅವರು ತುಂಬ ಬೋಲ್ಡ್ ಆಗಿ ಕಾಣಿಸಿಕೊಳ್ಳಲಿದ್ದಾರೆ ಎನ್ನಲಾಗಿದೆ. 2012ರಲ್ಲಿ 'ಕಾಕ್‌ಟೇಲ್ ಸಿನಿಮಾ ಬಿಡುಗಡೆ ಆಗಿತ್ತು. ಆ ಸಿನಿಮಾದಲ್ಲಿ ಸೈಫ್ ಅಲಿ ಖಾನ್, ಡೈನಾ ಪೆಂಟಿ, ದೀಪಿಕಾ ಪಡುಕೋಣೆ ಅವರು ಮುಖ್ಯ ಪಾತ್ರಗಳನ್ನು ನಿಭಾಯಿಸಿದ್ದರು. ಈಗ ಆ ಸಿನಿಮಾಗೆ ಸೀಕ್ವೆಲ್ ಬರಲಿದೆ. ಆದರೆ ಪಾತ್ರಧಾರಿಗಳು ಬದಲಾಗುತ್ತಿದ್ದಾರೆ. ಕಾಕ್‌ಟೇಲ್ 2 ಸಿನಿಮಾದಲ್ಲಿ ಶಾಹಿದ್ ಕಪೂರ್, ಕೃತಿ ಸನನ್ ಮತ್ತು ರಶ್ಮಿಕಾ ಮಂದಣ್ಣ ಅವರು ನಟಿಸಲಿದ್ದಾರೆ. ಈವರೆಗೂ ರಶ್ಮಿಕಾ ಮಂದಣ್ಣ ಅವರು ಒಂದಷ್ಟು ಬಗೆಯ ಪಾತ್ರಗಳನ್ನು ಮಾಡಿ ಗಮನ ಸೆಳೆದಿದ್ದರು. ಈಗ ಅವರು ತುಂಬಾ ಗ್ಲಾಮರಸ್ ಆಗಿ ಕಾಣಿಸಿಕೊಳ್ಳಲು ಮನಸ್ಸು ಮಾಡಿದ್ದಾರೆ ಎಂದು ಮಾಧ್ಯಮಗಳಲ್ಲಿ ಸುದ್ದಿ ಆಗಿದೆ. ಆದರೆ ಈ ಬಗ್ಗೆ 'ಕಾಕ್‌ಟೇಲ್ 2 ಸಿನಿಮಾ ತಂಡದಿಂದ ಇನ್ನೂ ಅಧಿಕೃತ ಮಾಹಿತಿ ಹೊರಬಿದ್ದಿಲ್ಲ. ಒಟ್ಟಿನಲ್ಲಿ ಈ ಸುದ್ದಿ ಕೇಳಿ ಫ್ಯಾನ್ಸ್ ಥ್ರಿಲ್ ಆಗಿದ್ದಾರೆ.

# ಧರ್ಮ ಕೀರ್ತಿರಾಜ್ ನಟನೆಯ ಬುಲೆಟ್ ಚಿತ್ರ ಬಿಡುಗಡೆ ದಿನಾಂಕ ನಿಗದಿ

ಬಿಗ್ ಬಾಸ್ ಖ್ಯಾತಿಯ ಧರ್ಮ ಕೀರ್ತಿರಾಜ್ ನಟನೆಯ, ಸತ್ಯಜಿತ್ ಶಬ್ಬೀರ್ ನಿರ್ದೇಶಿಸಿರುವ ಮತ್ತು ನಿರ್ಮಾಣದ 'ಬುಲೆಟ್' ಚಿತ್ರ ಜೂನ್ 20ರಂದು ರಾಜ್ಯದಾದ್ಯಂತ ಚಿತ್ರಮಂದಿರಗಳಲ್ಲಿ ಬಿಡುಗಡೆಯಾಗಲಿದೆ. ತೆಲುಗು, ತಮಿಳು, ಮಲಯಾಳಂ ಮತ್ತು ಹಿಂದಿ ಚಿತ್ರಗಳಲ್ಲಿ ನಟಿಸಿರುವ ಸತ್ಯಜಿತ್ ಶಬ್ಬೀರ್, ಇದೇ ಮೊದಲ ಬಾರಿಗೆ ನಿರ್ದೇಶಕ ಮತ್ತು ನಿರ್ಮಾಪಕರಾಗಿ ಕನ್ನಡ ಚಿತ್ರರಂಗಕ್ಕೆ ಪದಾರ್ಪಣೆ ಮಾಡುತ್ತಿದ್ದಾರೆ. 'ನಾನು ಭಾರತಿರಾಜ ಅವರ ತಮಿಳು ಚಿತ್ರ 'ಪಧಿನಾರು ವಯತಿನಿಲೆ' ಎಂಬ ಚಿತ್ರದ ಮೂಲಕ ಚಿತ್ರರಂಗಕ್ಕೆ ಪ್ರವೇಶಿಸಿದೆ. ಸಂಗೀತ ನಿರ್ದೇಶಕ ಇಳಯರಾಜ ನನ್ನ ಹೆಸರಿನ ಮುಂದೆ 'ಸತ್ಯಜಿತ್' ಸೇರಿಸಿದರು. ಅಂದಿನಿಂದ, ನಾನು ಸತ್ಯಜಿತ್ ಶಬ್ಬೀರ್ ಆದೆ. ನಾನು ವಿವಿಧ ಭಾಷೆಗಳಲ್ಲಿ 75 ಚಿತ್ರಗಳಲ್ಲಿ ನಟಿಸಿದ್ದೇನೆ. ಆದರೆ, ಕರ್ನಾಟಕದವನಾಗಿ, ಕನ್ನಡದಲ್ಲಿ ನಿರ್ದೇಶಕನಾಗಿ ಪ್ರವೇಶ ಮಾಡುವ ಕನಸು ಕಂಡಿದ್ದೆ. ಬುಲೆಟ್ ಮೂಲಕ ಆ ಆಸೆ ಈಡೇರುತ್ತಿದೆ ಎಂದು ಹೇಳಿದರು. ಧರ್ಮ ಕೀರ್ತಿ ರಾಜ್ ನಾಯಕನಾಗಿ ನಟಿಸಿರುವ ಈ ಚಿತ್ರದಲ್ಲಿ ಶ್ರೇಯಾ ಶುಕ್ಲಾ ನಾಯಕಿಯಾಗಿದ್ದಾರೆ. ಹಿರಿಯ ನಟಿ ಭವ್ಯಾ, ಶೋಭರಾಜ್ ಮತ್ತು ಶಿವ್ ಕೂಡ ತಾರಾಗಣದಲ್ಲಿದ್ದಾರೆ. ಬುಲೆಟ್ ಚಿತ್ರಕ್ಕೆ ಪಿವಿಆರ್ ಸ್ವಾಮಿ ಅವರ ಛಾಯಾಗ್ರಹಣವಿದೆ. ರಾಜ್ ಭಾಸ್ಕರ್ ಅವರ ಸಂಗೀತ ಮತ್ತು ಗುರುಪ್ರಸಾದ್ ಅವರ ಸಂಕಲನವಿದೆ. ಛಾಯಾಗ್ರಾಹಕರಾಗಿ ಪಿವಿಆರ್ ಸ್ವಾಮಿ ಅವರ 50ನೇ ಚಿತ್ರ ಇದಾಗಿದೆ. ಚಿತ್ರವನ್ನು ಜಯದೇವ ಫಿಲ್ಮ್ಸ್ ಬ್ಯಾನರ್ ಅಡಿಯಲ್ಲಿ ಮರಿಸ್ವಾಮಿ ವಿತರಿಸಲಿದ್ದಾರೆ.



Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news

ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966